ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 22, ಸಂಚಿಕೆ: 62, ಪುಟಗಳು: 8, ಗುರುವಾರ, 12 ಡಿಸೆಂಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ನೆನಪು ಸಾರಥ್ಯದಲ್ಲಿ...




**ಸುಭಾಷಿತ**

ಸೂರ್ಯನು ಎಷ್ಟೇ ಪ್ರಬಲನಾಗಿದ್ದರೂ ಅವನಿಂದ ಸಾಗರವನ್ನು ಒಣಗಿಸಲು ಸಾಧ್ಯವಿಲ್ಲ.

**ಪಂಚಾಂಗ**

(ಗುರುವಾರ 12, ಡಿಸೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಶುಕ್ಲ ಪಕ್ಷ,
- ದ್ವಾದಶಿ, ಗುರುವಾರ,
- ಅಶ್ವಿನಿ ನಕ್ಷತ್ರ/ಭರಣಿ ನಕ್ಷತ್ರ.
- ರಾಹುಕಾಲ: 01:42 ರಿಂದ 03:08
- ಗುಳಿಕಕಾಲ: 09:25 ರಿಂದ 10:51
- ಯಮಗಂಡಕಾಲ: 06:34 ರಿಂದ 07:59

# ಪಿಡಿಒ ನೇಮಕಾತಿ ಪರೀಕ್ಷೆಯಲ್ಲೂ ಅಕ್ರಮದ ಆರೋಪ

**ಧಾರವಾಡ:** ಪಿಡಿಒ ನೇಮಕಾತಿಗೆ ಸಂಬಂಧಿಸಿ ಡಿಸೆಂಬರ್ 8ರಂದು ನಡೆದಿದ್ದ ಪರೀಕ್ಷೆಯಲ್ಲೂ ಅಕ್ರಮ ನಡೆದಿರುವ ಬಗ್ಗೆ ಆರೋಪಗಳು ಕೇಳಿಬಂದಿವೆ. ಪ್ರಶ್ನೆ ಪತ್ರಿಕೆ ಸೀಲ್ ಓಪನ್ ಮಾಡಿರುವ ಫೋಟೋ ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ತಪ್ಪಿತಸ್ಥರನ್ನು ಶಿಕ್ಷಿಸಿ ಮರುಪರೀಕ್ಷೆಗೆ ಆದೇಶ ನೀಡಬೇಕೆಂಬ ಆಗ್ರಹವೂ ವ್ಯಕ್ತವಾಗಿದೆ. ಇದರೊಂದಿಗೆ, ಈ ಸಲವೂ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಕೆಪಿಎಸ್‌ಸಿ ವಿಫಲವಾಯ್ತಾ ಎಂಬ ಪ್ರಶ್ನೆಯೂ ಹುಟ್ಟಿಕೊಂಡಿದೆ.

**» ಸೀಲ್ ಓಪನ್ ಆಗಿರುವ ಪ್ರಶ್ನೆಪತ್ರಿಕೆ ಫೋಟೊ ವೈರಲ್**




ಧಾರವಾಡದ ಕೆಎನ್‌ಕೆ ಪ್ರೌಢಶಾಲೆಯ ಪರೀಕ್ಷಾ ಕೇಂದ್ರದಲ್ಲಿ ಅಭ್ಯರ್ಥಿಗಳ ಕೈ ಸೇರುವ ಮೊದಲೇ ಪ್ರಶ್ನೆ ಪತ್ರಿಕೆ ಸೀಲ್ ಓಪನ್ ಮಾಡಲಾಗಿತ್ತು ಎಂಬ ಆರೋಪ ಕೇಳಿಬಂದಿದೆ. ಸಾಮಾನ್ಯ ಜ್ಞಾನ ವಿಷಯಕ್ಕೆ ಸಂಬಂಧಪಟ್ಟ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿತ್ತು ಎನ್ನಲಾಗಿದೆ.

ಪಿಡಿಒ ನೇಮಕಾತಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಸಾಮಾನ್ಯವಾಗಿ ಮೂರು ಹಂತದ ಸೀಲ್ ಭದ್ರತೆ ಹೊಂದಿರುತ್ತವೆ. ಪರೀಕ್ಷಾ ಕೇಂದ್ರದ ಪ್ರಶ್ನೆ ಪತ್ರಿಕೆಗಳ ಬಂಡಲ್‌ಗೆ ಸಮಗ್ರವಾಗಿ ಪ್ಲಾಸ್ಟಿಕ್ ಕವರ್ ನ ಸೀಲ್ ಹಾಕಿರಲಾಗುತ್ತದೆ. ಬಳಿಕ ಆಯಾ ಪರೀಕ್ಷಾ ಕೊಠಡಿಯ ಪ್ರಶ್ನೆ ಪತ್ರಿಕೆಗಳಿಗೆ ಕಾಗದದ ಕವರ್ ನ ಜೊತೆಗೆ ಸೀಲ್ ಹಾಕಿರುತ್ತಾರೆ. ಕೊನೆಗೆ ಪ್ರತಿಯೊಂದು ಪ್ರಶ್ನೆ ಪತ್ರಿಕೆಗೂ ಪ್ರತ್ಯೇಕ ಸೀಲ್ ಇರುತ್ತದೆ. ಆದರೆ, ಪ್ರಶ್ನೆ ಪತ್ರಿಕೆಯ ಮೇಲಿನ ಸೀಲ್ ಓಪನ್ ಮಾಡಿ ಪುನಃ ಅಂಟಿಸಿದ್ದಾರೆಂದು ಅಭ್ಯರ್ಥಿಗಳು ಆರೋಪಿಸಿದ್ದಾರೆ.

ಕೆಪಿಎಸ್‌ಸಿ ಸರಿಯಾಗಿ ಪರೀಕ್ಷೆ ನಡೆಸಿಲ್ಲವೆಂದು ಅಭ್ಯರ್ಥಿಗಳು ಆರೋಪ ಮಾಡಿದ್ದು, ಮರುಪರೀಕ್ಷೆ ನಡೆಸುವಂತೆ ಆಗ್ರಹಿಸಿದ್ದಾರೆ. ಈ ಕುರಿತು ಕೆಪಿಎಸ್‌ಸಿ ಮತ್ತು ಗ್ರಾಮೀಣಾಭಿವೃದ್ಧಿ ಸಚಿವರಿಗೆ ಮನವಿಯನ್ನೂ ಮಾಡಲಾಗಿದೆ.

**ಹೋರಾಟಕ್ಕೆ ನಿರ್ಧಾರ:** ಮರುಪರೀಕ್ಷೆ ಮಾಡಬೇಕೆಂದು ಹೋರಾಟ ನಡೆಸಲು ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಸಂಘ ತೀರ್ಮಾನಿಸಿದೆ. ಜತೆಗೆ, ಸೀಲ್ ಓಪನ್ ಮಾಡಿರುವ ಬಗ್ಗೆ ತನಿಖೆ ಮಾಡುವಂತೆ ಆಗ್ರಹಿಸಿದೆ. ಪುಟ 2

# ಮತ್ತೊಂದು ಚಂಡಮಾರುತ

## ಚೆನ್ನೈ ಸೇರಿ ತಮಿಳುನಾಡಿನ 22 ಜಿಲ್ಲೆಗಳಲ್ಲಿ ಶಾಲೆಗಳಿಗೆ ರಜೆ ಘೋಷಣೆ

**ಚೆನ್ನೈ:** ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದ ಪರಿಣಾಮ ಇಂದು (ಡಿ.12) ರಾಜ್ಯದ 9 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಯಲ್ಲೋ ಅಲರ್ಟ್ ಘೋಷಿಸಿದೆ. ತಮಿಳುನಾಡಿನಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆಯ ಹಿನ್ನೆಲೆಯಲ್ಲಿ ಚೆನ್ನೈ ಸೇರಿದಂತೆ ತಮಿಳುನಾಡಿನ ಹಲವು ಜಿಲ್ಲೆಗಳಲ್ಲಿ ಗುರುವಾರ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಒಂದರಿಂದ 5 ನೇ ತರಗತಿಗಳಿಗೆ ರಜೆ ಘೋಷಿಸಿದ್ದಾರೆ. ಕಾಂಚೀಪುರಂ, ಚೆಂಗಲ್ಪಟ್ಟು, ರಾಮನಾಥಪುರಂ, ಮೈಲಾಡುತುರೈ, ತಂಜಾವೂರು, ಪುದುಕೊಟ್ಟೈ ಮತ್ತು ಅರಿಯಲೂರ್ ಸೇರಿದಂತೆ ಎಲ್ಲೆಡೆ ಶಾಲೆಗಳನ್ನು ಮುಚ್ಚಲಾಗುತ್ತದೆ. ಬಂಗಾಳಕೊಲ್ಲಿಯಲ್ಲಿ ಮತ್ತೊಂದು ಚಂಡಮಾರುತ ರೂಪುಗೊಂಡಿದ್ದು ಜನರು ಭಯ ಭೀತರಾಗಿದ್ದಾರೆ.

ತಿರುವಣ್ಣಾಮಲೈನಲ್ಲಿ, ಎರಡೂ ಶಾಲೆಗಳು ಮತ್ತು ಕಾಲೇಜುಗಳನ್ನು ಮುಚ್ಚಲಾಗುವುದು, ಆದರೆ ಕರೂರ್, ವೆಲ್ಲೂರು, ರಾಣಿಪೇಟ್, ತಿರುಪತ್ತೂರ್ ಮತ್ತು ತೂತುಕುಡಿ ಜಿಲ್ಲೆಗಳಲ್ಲಿ ಮಾತ್ರ ಶಾಲೆಗಳನ್ನು ಮುಚ್ಚಲಾಗುವುದು. ಭಾರೀ ಮಳೆಯ ಮುನ್ಸೂಚನೆಯಿಂದಾಗಿ ವೆಲ್ಲೂರಿನ ತಿರುವಳ್ಳುವರ್ ವಿಶ್ವವಿದ್ಯಾಲಯವು ಪರೀಕ್ಷೆಗಳನ್ನು ಮುಂದೂಡಿದೆ.

ಭಾರೀ ಮಳೆಯ ಎಚ್ಚರಿಕೆಯಿಂದಾಗಿ ಚೆನ್ನೈನಲ್ಲಿ ಶಾಲೆಗಳು ಮಾತ್ರ ಮುಚ್ಚಲ್ಪಡುತ್ತವೆ ಎಂದು ಜಿಲ್ಲಾಧಿಕಾರಿಗಳು ಘೋಷಿಸಿದ್ದಾರೆ. ಅದೇ ರೀತಿ ರಾಮನಾಥಪುರಂ ಜಿಲ್ಲಾಧಿಕಾರಿ ಸಿಮ್ರಂಜೀತ್ ಸಿಂಗ್ ಕಹ್ಲೋನ್ ಕೂಡ ಶಾಲೆಗಳಿಗೆ ರಜೆ ಘೋಷಿಸಿದ್ದಾರೆ. ಪುಟ 2



## ಬೆಂಗಳೂರಿನಲ್ಲಿ ಬೆಳಗ್ಗೆಯಿಂದಲೇ ಮಳೆ ಶುರು

**ಬೆಂಗಳೂರು:** ಬೆಂಗಳೂರಿನಲ್ಲಿ ಬೆಳಗ್ಗೆಯಿಂದಲೇ ತುಂತುರು ಮಳೆ ಶುರುವಾಗಿದೆ, ಡಿಸೆಂಬರ್ 18ರವರೆಗೂ ಮಳೆ ಮುಂದುವರೆಯಲಿರುವ ಸಾಧ್ಯತೆ ಇದೆ. ಕಳೆದ ಒಂದು ವಾರದ ಹಿಂದಷ್ಟೇ ತಮಿಳುನಾಡು, ಕರ್ನಾಟಕ, ಆಂಧ್ರಪ್ರದೇಶದಲ್ಲಿ ಫೆಂಗಲ್ ಚಂಡಮಾರುತದಿಂದಾಗಿ ಸಾಕಷ್ಟು ಅವ್ಯವಸ್ಥೆ ಸೃಷ್ಟಿಯಾಗಿತ್ತು. ಇದೀಗ ಬಂಗಾಲಕೊಲ್ಲಿಯಲ್ಲಿ ಮತ್ತೊಂದು ಚಂಡಮಾರುತ ರೂಪುಗೊಳ್ಳುತ್ತಿದ್ದು, ಅದರ ಪರಿಣಾಮ ಈಗಾಗಲೇ ಬೆಂಗಳೂರಿನ ಮೇಲೆ ಗೋಚರಿಸಲಾರಂಭಿಸಿದೆ.

ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿತ್ರದುರ್ಗ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ದಾವಣಗೆರೆ, ಶಿವಮೊಗ್ಗ, ವಿಜಯನಗರದಲ್ಲಿ ಸಾಧಾರಣ ಮಳೆಯಾಗಲಿದೆ. ಯಾದಗಿರಿ, ವಿಜಯಪುರ, ರಾಯಚೂರು, ಕೊಪ್ಪಳ, ಕಲಬುರಗಿ, ಹಾವೇರಿ, ಗದಗ, ಧಾರವಾಡ, ಬೀದರ್, ಬೆಳಗಾವಿ, ಬಾಗಲಕೋಟೆಯಲ್ಲಿ ಒಣಹವೆ ಇರಲಿದೆ. ಪುಟ 2

## ಸಂಕ್ಷಿಪ್ತ ಸುದ್ದಿ

### ವೈದ್ಯನ ಕೈಹಿಡಿದ್ರೂ ಸುಖವಿಲ್ಲದ ಬದುಕು



**ಚಿಕ್ಕಮಗಳೂರು:** 20 ರೂಪಾಯಿಯಲ್ಲಿ ಆಕೆ ವಾರಪೂರ್ತಿ ಬದುಕಬೇಕು. ಅದು ಮನೆಯಿಂದ ಹೊರಬರದಂತೆ. ಮನೆಯಲ್ಲಿ ರೇಷನ್ ಇದ್ರೆ ಅನ್ನ-ಆಹಾರ. ಇಲ್ಲದಿದ್ರೆ ಮನೆಯಲ್ಲಿ ಉಪವಾಸ.. ಅತ್ತೆ-ಗಂಡ ಹೋದಾಗಲೇ ಹೋದ್ರು, ಬಂದಾಗಲೇ ಬಂದ್ರು. ಮನೆಯಿಂದ ಹೋಗುವಾಗ ಮನೆಯಲ್ಲಿ ರೇಷನ್ ಎಲ್ಲಾ ಖಾಲಿ-ಖಾಲಿ. 3-4 ದಿನ ನೀರು ಕುಡಿದುಕೊಂಡೇ ಇರಬೇಕು. ಅದೂ ನೀರಿನ ಸಂಪರ್ಕ ಕಟ್ ಮಾಡಿರದಿದ್ರೆ. ಮನೆ ಕೆಲಸವೆಲ್ಲಾ ಮಾಡಬೇಕು. ಅಡುಗೆ-ಊಟ ಮಾಡುವಂತಿಲ್ಲ, ಒಂದೇ ಚೇರ್. ಅಲ್ಲೇ ಕೂರಬೇಕು. ಮಹಡಿ ಮೇಲೆ ಮಲಗಬೇಕು. ಇದು ಅವಿದ್ಯಾವಂತರ ಕಥೆಯಲ್ಲ, ವೈದ್ಯನೋರ್ವ ತನ್ನ ಪತ್ನಿಗೆ 4 ವರ್ಷದಿಂದ ಮಾಡಿರೋ ಉಪಚಾರ.. ಆ ಗೃಹಿಣಿಯ ಸೋಚನೀಯ ಕಥೆ ಕೇಳಿದ್ರೆ, ನೀವು ಮರುಗದೇ ಇರಲಾರಿರಿ.. ಅದೆಲ್ಲಿ ಅಂತೀರಾ.. ಈ ಸ್ಟೋರಿ ನೋಡಿ.. ಪುಟ 2

**» 4 ವರ್ಷದಿಂದ ಗೃಹಬಂಧನದಲ್ಲಿ ಗೃಹಿಣಿ!**

### ಜೈಲಿಂದ ಹೊರಬಂದು ಅತ್ಯಾಚಾರ, ಸಂತ್ರಸ್ತೆಯ ಹತ್ಯೆ




**ಭುವನೇಶ್ವರ:** ಬಾಲಕಿಯ ಮೇಲೆ ಅತ್ಯಾಚಾರ ಎಸಗಿ ಜೈಲು ಪಾಲಾಗಿದ್ದ ವ್ಯಕ್ತಿಯೊಬ್ಬ ಜಾಮೀನಿನ ಮೇಲೆ ಹೊರಬಂದು ಸಂತ್ರಸ್ತೆಯನ್ನು ಹತ್ಯೆಗೈದು ಆಕೆಯ ದೇಹವನ್ನು ಕತ್ತರಿಸಿ ನದಿಗೆ ಎಸೆದಿರುವ ಘಟನೆ ಒಡಿಶಾದ ಸುಂದರ್‌ಗಢ್‌ನಲ್ಲಿ ನಡೆದಿದೆ. ಪುಟ 2

**» ಮೃತದೇಹ ಕತ್ತರಿಸಿ ನದಿಗೆಸೆದ ಹಂತಕ**

# 55 ಗಂಟೆಗಳ ಕಾರ್ಯಾಚರಣೆ, ಹೊರತೆಗೆದರೂ ಪ್ರಾಣ ಉಳಿಲಿಲ್ಲ

**ರಾಜಸ್ಥಾನ:** ರಾಜಸ್ಥಾನದ ದೌಸಾದಲ್ಲಿ ಬೋರ್ ವೆಲ್ ಗೆ ಬಿದ್ದಿದ್ದ ಬಾಲಕನನ್ನು 55 ಗಂಟೆಗಳ ಕಾಲ ನಿರಂತರ ಕಾರ್ಯಾಚರಣೆ ನಡೆಸಿ ಹೊರಗೆ ತೆಗೆದರೂ ಪ್ರಾಣ ಉಳಿಯಲಿಲ್ಲ. 150 ಅಡಿ ಆಳದ ಬೋರ್ ವೆಲ್‌ಗೆ ಆತ ಬಿದ್ದಿದ್ದ, 5 ವರ್ಷದ ಬಾಲಕನನ್ನು ಆರ್ಯನ್ ಎಂದು ಗುರುತಿಸಲಾಗಿದೆ.

ಆತನನ್ನು ಹೊರ ತೆಗೆಯುವಷ್ಟರಲ್ಲಿ ಪ್ರಜ್ಞಾಹೀನಸ್ಥಿತಿಯಲ್ಲಿದ್ದಕೂಡಲೇಆಂಬ್ಯುಲೆನ್ಸ್‌ನಲ್ಲಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಆತ ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದ್ದರು. ತಂದೆ ಹಾಲಿನ ಬಾಟಲಿ ಹಿಡಿದು ಮಗನ ಬರುವಿಕೆಗಾಗಿ ಕಾದಿದ್ದರು ಆದರೆ ಬದುಕಿ ಬರಲೇ ಇಲ್ಲ. ಪುಟ 2

ಬೋರ್‌ವೆಲ್‌ಗೆ ಬಿದ್ದಿದ್ದ ಬಾಲಕ



# 2ಎ ಮೀಸಲಾತಿ ಕಿಚ್ಚು

## ಉಗ್ರ ಹೋರಾಟದ ಎಚ್ಚರಿಕೆ ನೀಡಿದ ಪಂಚಮಸಾಲಿ ಶ್ರೀ

**ಬೆಳಗಾವಿ:** 2ಎ ಮೀಸಲಾತಿಗೆ ಆಗ್ರಹಿಸಿ ಉಗ್ರ ಹೋರಾಟದ ಮಾಡುವುದಾಗಿ ಕೂಡಲಸಂಗಮದ ಪಂಚಮಸಾಲಿ ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ ಎಚ್ಚರಿಕೆ ನೀಡಿದ್ದಾರೆ.

ಇಂದು (ಡಿ.12) ಬೆಳಗಾವಿ ಅಧಿವೇಶನದ ವೇಳೆ ಪಂಚಮಸಾಲಿ ಹೋರಾಟಗಾರರ ಮೇಲೆ ಲಾಠಿ ಚಾರ್ಜ್ ಪ್ರಕರಣದ ಹಿನ್ನೆಲೆ ಉಗ್ರ ಹೋರಾಟ ಮಾಡುವುದಾಗಿ ಬಸವಜಯ ಮೃತ್ಯುಂಜಯ ಸ್ವಾಮೀಜಿ ಪಂಚಮಸಾಲಿ ಸಮಾಜಕ್ಕೆ ಪ್ರತಿಭಟನೆಗೆ ಕರೆ ನೀಡಿದ್ದಾರೆ. ರಾಜ್ಯಾದ್ಯಂತ ಪಂಚಮಸಾಲಿ ಸಮಾಜದಿಂದ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಯಲಿದೆ. ಸದನದ ಒಳಗೂ ಹೊರಗೂ ಪಂಚಮಸಾಲಿ ಮೀಸಲಾತಿ ಹೋರಾಟ ಸದ್ದು ಮಾಡಲಿದ್ದು, ಜೊತೆಗೆ ಜಿಲ್ಲೆ, ತಾಲೂಕು, ಹೋಬಳಿ ಮಟ್ಟದಲ್ಲಿ ರಸ್ತೆ ಬಂದ್ ಮಾಡಿ ಪ್ರತಿಭಟನೆಗೆ ಕರೆ ನೀಡಲಾಗಿದೆ. ಬೆಳಗಾವಿ ಹಿರೇಬಾಗೇವಾಡಿ ಬಳಿಯ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಸ್ವಾಮೀಜಿ ನೇತೃತ್ವದಲ್ಲಿ ಬೆಳಗ್ಗೆ 10:30ಕ್ಕೆ ಪ್ರತಿಭಟನೆ ನಡೆಯಲಿದ್ದು, ಪಂಚಮಸಾಲಿ ಸಮಾಜದವರು ರಾಜ್ಯಪಾಲರಿಗೆ ಮನವಿ ಸಲ್ಲಿಸಲಿದ್ದಾರೆ. ಮನವಿ ಮೂಲಕ ಸಿಎಂ ಸಿದ್ದರಾಮಯ್ಯ, ಎಡಿಜಿಪಿ ಆರ.ಹಿತೇಂದ್ರ, ಅವರನ್ನು ವಜಾ ಮಾಡಬೇಕು. ಪುಟ 2



# ತುಂಗಭದ್ರಾ ಜಲಾಶಯಕ್ಕೆ ಮತ್ತೊಂದು ಆತಂಕ



**ಕೊಪ್ಪಳ:** ಕೊಪ್ಪಳ ತಾಲೂಕಿನ ಮುನಿರಾಬಾದ್ ಬಳಿ ಇರುವ ತುಂಗಭದ್ರಾ ಜಲಾಶಯದ ಕ್ರೆಸ್ಟ್ ಗೇಟ್ ಕೊಚ್ಚಿಕೊಂಡು ಹೋಗಿ ದೇಶಾದ್ಯಂತ ದೊಡ್ಡ ಸುದ್ದಿಯಾಗಿತ್ತು.

ಒಂದು ವಾರದ ನಿರಂತರ ಪ್ರಯತ್ನದ ಫಲವಾಗಿ ತಾತ್ಕಾಲಿಕ ಗೇಟ್ ಅಳವಡಿಕೆ ಮಾಡಲಾಗಿತ್ತು. ಇದೀಗ ಜಲಾಯಶದ ಇತರ ಕ್ರೆಸ್ಟ್ ಗೇಟ್ ಗಳ ಬಗ್ಗೆಯೂ ತಜ್ಞರು ಆಘಾತಕಾರಿ ಮಾಹಿತಿ ನೀಡಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ತುಂಗಭದ್ರಾ ಡ್ಯಾಂನ ಎಲ್ಲ ಗೇಟ್ ಗಳನ್ನೂ ಬದಲಾವಣೆ ಮಾಡಬೇಕು ಎಂದು ತಜ್ಞರು ಹೇಳಿದ್ದಾರೆ. ಪುಟ 2

# ಬಿಎಂಟಿಸಿ ಮಹಿಳಾ ಪ್ರಯಾಣಿಕರಿಗೆ ಗುಡ್ ನ್ಯೂಸ್

**ಬೆಂಗಳೂರು:** ಈ ಹಿಂದೆ ಆಧಾರ್ ಕಾರ್ಡ್ ನಲ್ಲಿ ಇಂಗ್ಲಿಷ್ ಜೊತೆಗೆ ಕನ್ನಡ ಬಿಟ್ಟು ಬೇರೆ ಭಾಷೆ ಪ್ರಿಂಟ್ ಆಗಿದ್ದರೆ, ಅಂತಹ ಮಹಿಳೆಯರಿಗೆ ಬಿಎಂಟಿಸಿ ಕಂಡಕ್ಟರ್ ಗಳು ಶಕ್ತಿ ಯೋಜನೆಯ ಟಿಕೆಟ್ ನೀಡುತ್ತಿರಲಿಲ್ಲ. ಇದರಿಂದ ಕಂಡಕ್ಟರ್ ಮತ್ತು ಮಹಿಳಾ ಪ್ರಯಾಣಿಕರ ನಡುವೆ ಸಾಕಷ್ಟು ಜಗಳಗಳಾಗುತ್ತಿದ್ದವು. ಇದನ್ನು ತಪ್ಪಿಸಲು ಬಿಎಂಟಿಸಿ ಮುಂದಾಗಿದ್ದು, ಇನ್ಮುಂದೆ ಆಧಾರ್ ಕಾರ್ಡ್ ನಲ್ಲಿ ಕರ್ನಾಟಕದ ವಿಳಾಸ ಇದ್ದರೆ ಸಾಕು, ಶಕ್ತಿ ಯೋಜನೆ ಟಿಕೆಟ್ ನೀಡಬಹುದು ಸೂಚನೆ ನೀಡಿದೆ. ಹೊರ ರಾಜ್ಯದಿಂದ ಬಂದು ಕರ್ನಾಟಕದಲ್ಲಿ ನೆಲೆಸಿದವರು, ಬಿಎಂಟಿಸಿ ಬಸ್ ನಲ್ಲಿ ಉಚಿತವಾಗಿ ಸಂಚಾರ ಮಾಡಬಹುದು. ಆಧಾರ್ ಕಾರ್ಡ್ ಕನ್ನಡದಲ್ಲಿ ವಿಳಾಸ ಇಲ್ಲಾಂದರೂ ಪರವಾಗಿಲ್ಲ, ಕರ್ನಾಟಕದ ವಿಳಾಸವಿದ್ದರೆ ಸಾಕು ಎಂದು ಬಿಎಂಟಿಸಿ ಆದೇಶ ಹೊರಡಿಸಿದೆ.

**» ಕಂಡಕ್ಟರ್ ಜತೆಗಿನ ಕಿರಿಕ್‌ಗೆ ಬೀಳಲಿದೆ ಬ್ರೇಕ್**



ಈ ಹಿಂದೆ ಆಧಾರ್ ಕಾರ್ಡ್‌ನಲ್ಲಿ ಕನ್ನಡದಲ್ಲಿ ವಿಳಾಸವಿರಬೇಕೆಂದು ಬಿಎಂಟಿಸಿಯ ಕಂಡಕ್ಟರ್ ಗಳು ಕಿರಿಕ್ ಮಾಡುತ್ತಿದ್ದರು. ದೇಶದ ನಾಗರೀಕರು ಆಧಾರ್ ಕಾರ್ಡನ್ನು ದೇಶದಾದ್ಯಂತ ಯಾವುದೇ ರಾಜ್ಯದಲ್ಲಿ ಪಡೆಯಲು ಅವಕಾಶವಿದ್ದು, ಯಾವ ರಾಜ್ಯದಲ್ಲಿ ಆಧಾರ್ ಕಾರ್ಡ್ ಅನ್ನು ಪಡೆಯುತ್ತಾರೋ ಆ ರಾಜ್ಯದ ಅಧಿಕೃತ ಭಾಷೆ ಮತ್ತು ಅಂಗ್ಲ ಭಾಷೆಯಲ್ಲಿ (ದ್ವಿಭಾಷೆ) ಆಧಾರ್ ಕಾರ್ಡ್ ಮುದ್ರಣವಾಗುತ್ತದೆ. ಪುಟ 2

## ಮಂಗಳೂರು– ಸಿಂಗಾಪುರ ಮಧ್ಯೆ ನೇರ ವಿಮಾನ ಸಂಚಾರ

# ಜನವರಿ 21ರಿಂದ ಶುರು

**ಮಂಗಳೂರು:** ಮಂಗಳೂರು ಮತ್ತು ಸಿಂಗಾಪುರ ನಡುವೆ ಏರ್ ಇಂಡಿಯಾ ಎಕ್ಸ್ ಪ್ರೆಸ್ ಜನವರಿ 21 ರಿಂದ ವಾರಕ್ಕೆ ಎರಡು ಬಾರಿ ವಿಮಾನ ಸಂಚಾರ ಆರಂಭಿಸಲಿದೆ. ಇದರೊಂದಿಗೆ ಮಂಗಳೂರಿನೊಂದಿಗೆ ವಿಮಾನ ಸಂಪರ್ಕವನ್ನು ಪಡೆಯುವ ಆಗ್ನೇಯ ಏಷ್ಯಾದ ಮೊದಲ ಅಂತಾರಾಷ್ಟ್ರೀಯ ತಾಣವಾಗಿ ಸಿಂಗಾಪುರ ಗುರುತಿಸಿಕೊಳ್ಳಲಿದೆ. ಈವರೆಗೆ, ಮಂಗಳೂರಿನಿಂದ ಎಲ್ಲಾ ಅಂತಾರಾಷ್ಟ್ರೀಯ ವಿಮಾನಗಳು ಮಧ್ಯಪ್ರಾಚ್ಯ ದೇಶಗಳಿಗೆ ಮಾತ್ರ ಕಾರ್ಯಾಚರಿಸುತ್ತಿವೆ.

ಮಂಗಳವಾರ ಮತ್ತು ಶುಕ್ರವಾರದಂದು ಉಭಯ ನಿಲ್ದಾಣಗಳ ನಡುವೆ ವಿಮಾನಗಳು ಸಂಚಾರ ಮಾಡಲಿವೆ ಎಂದು ಏರ್ ಇಂಡಿಯಾ ಎಕ್ಸ್‌ಪ್ರೆಸ್‌ನ ಪ್ರಕಟಣೆ ತಿಳಿಸಿದೆ.

**ಮಂಗಳೂರು ಸಿಂಗಾಪುರ ವಿಮಾನದ ಸಮಯ:** ವಿಮಾನ ಸಂಖ್ಯೆ IX 0862 ಮಂಗಳೂರಿನಿಂದ 5.55 ಗಂಟೆಗೆ ಹೊರಟು 13.25 ಗಂಟೆಗೆ ಸಿಂಗಾಪುರ ತಲುಪಲಿದೆ. ವಿಮಾನ ಸಂಖ್ಯೆ IX 0861 ಸಿಂಗಾಪುರದಿಂದ 14.25 ಗಂಟೆಗೆ ಹೊರಟು 16.55 ಗಂಟೆಗೆ ಮಂಗಳೂರಿಗೆ ಆಗಮಿಸಲಿದೆ.




**ಮಂಗಳೂರು ದೆಹಲಿ ಮಧ್ಯೆ ಪ್ರತಿ ದಿನ ನೇರ ವಿಮಾನ:** ಏರ್ ಇಂಡಿಯಾ ಎಕ್ಸ್‌ಪ್ರೆಸ್ ಫೆಬ್ರವರಿ 1 ರಿಂದ ಮಂಗಳೂರು ಮತ್ತು ದೆಹಲಿ ನಡುವೆ ಪ್ರತಿ ದಿನ ನೇರ ವಿಮಾನಯಾನ ಸೇವೆ ಒದಗಿಸಲಿದೆ. ವಿಮಾನ ಸಂಖ್ಯೆ IX 1552 ಮಂಗಳೂರಿನಿಂದ 6.40 ಗಂಟೆಗೆ ಹೊರಟು 9.35 ಗಂಟೆಗೆ ಪುಟ 2

## ಮೊಬೈಲ್ ವಿಚಾರವಾಗಿ ಜಗಳ: ಯುವತಿ ಆತ್ಮಹತ್ಯೆ

**ಮಡಿಕೇರಿ:** ಮೊಬೈಲ್ ವಿಚಾರದಲ್ಲಿ ಸಹೋದರನೊಂದಿಗೆ ಜಗಳವಾಡಿಕೊಂಡು ಮನೆ ಬಿಟ್ಟು ತೆರಳಿದ್ದ ಯುವತಿಯ ಮೃತದೇಹ ಎರಡು ದಿನಗಳ ನಂತರ ಕಾವೇರಿ ನದಿಯಲ್ಲಿ ಪತ್ತೆಯಾದ ಘಟನೆ ಕೊಡಗು ಜಿಲ್ಲೆಯಲ್ಲಿ ನಡೆದಿದೆ. ಕೊಡಗು ಜಿಲ್ಲೆಯ ಕುಶಾಲನಗರದ ಆದಿಶಂಕರಾಚಾರ್ಯ ಬಡಾವಣೆ ನಿವಾಸಿ ರಣಜಿತ್ ಸಿಂಗ್ ಅವರ ದ್ವಿತೀಯ ಪುತ್ರಿ, ಭಾವನ (19) ಮೃತಪಟ್ಟ ಯುವತಿ. 10ನೇ ತರಗತಿ ಮುಗಿಸಿ ಮನೆಯಲ್ಲಿದ್ದ ಭಾವನ ಬಿಡುವಿನ ವೇಳೆಯಲ್ಲಿ ರಥಬೀದಿಯಲ್ಲಿರುವ ತಂದೆಯ ಫ್ಯಾನ್ಸಿ ಸ್ಟೋರ್‌ನಲ್ಲಿ ನೆರವಾಗುತ್ತಿದ್ದಳು. ಡಿ.8 ರಂದು ಮೊಬೈಲ್ ವಿಚಾರವಾಗಿ ಭಾವನ ಹಾಗೂ ಆಕೆಯ ತಮ್ಮ ಮಹಿಪಾಲ್ ನಡುವೆ ಅಂಗಡಿಯಲ್ಲಿ ಜಗಳವಾಗಿದೆ. ಈ ಸಂದರ್ಭ ನಾಳೆ ಬರುವುದಾಗಿ ತಿಳಿಸಿ ಭಾನುವಾರ ಅಂಗಡಿಯಿಂದ ಸಂಜೆ ಹೊರ ತೆರಳಿದ ಭಾವನ ಕಾಣೆಯಾಗಿರುವುದಾಗಿ ತಂದೆ ರಣಜಿತ್ ಸಿಂಗ್ ಕುಶಾಲನಗರ ಪಟ್ಟಣ ಪೊಲೀಸ್ ಠಾಣೆಗೆ ಸೋಮವಾರ ದೂರು ಸಲ್ಲಿಸಿದ್ದರು. ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸಿದ ಸಂದರ್ಭ ಅಯ್ಯಪ್ಪಸ್ವಾಮಿ ದೇವಾಲಯ ಕಡೆ ಯುವತಿ ತೆರಳಿರುವುದು ಕಂಡುಬಂದಿದೆ. ಅಗ್ನಿಶಾಮಕ ದಳ ಸಿಬ್ಬಂದಿ ಸಹಕಾರದೊಂದಿಗೆ ನದಿಯಲ್ಲಿ ಪರಿಶೀಲಿಸಿದಾಗ ನಾಪತ್ತೆಯಾಗಿದ್ದ ಯುವತಿ ಮೃತದೇಹ ಅಯ್ಯಪ್ಪಸ್ವಾಮಿ ದೇವಾಲಯದಿಂದ ಕೊಂಚ ಮುಂದಕ್ಕೆ ದಂಡಿನಪೇಟೆ ಭಾಗ ಕಾವೇರಿ ನದಿಯಲ್ಲಿ ದೊರತಿದೆ. ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂಬುದು ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ. ಈ ಸಂಬಂಧ ಕುಶಾಲನಗರ ಪಟ್ಟಣ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಕಾಮಗಾರಿ ಗುಂಡಿಗೆ ಉರುಳಿದ ಟ್ರ್ಯಾಕ್ಟರ್: ಚಾಲಕನ ಕೈಮೂಳೆ ಮುರಿತ

**ತುಮಕೂರು:** ಜೆಜೆಎಂ ಕಾಮಗಾರಿಗೆ ತೆಗೆದಿದ್ದ ಟ್ರಂಚ್‌ಗೆ ಟ್ರ್ಯಾಕ್ಟರ್ ಉರುಳಿ ಬಿದ್ದು ಚಾಲಕನ ಕೈ ಮೂಳೆ ಮುರಿದಿರುವ ಘಟನೆ ಗುಬ್ಬಿ ತಾಲೂಕಿನ ಚಿಕ್ಕಚೆಂಗಾವಿ ಗ್ರಾಮದ ಬಳಿ ನಡೆದಿದೆ. ಗ್ರಾಮದಿಂದ ಹೆಬ್ಬೂರನ್ನು ಸಂಪರ್ಕಿಸುವ ರಸ್ತೆ ಬದಿ ಪೈಪ್ ಹುಗಿಯಲು ತೆಗೆದಿರುವ ಟ್ರಂಚ್ ಮುಚ್ಚದೆ ಅನೇಕ ದಿನಗಳಿಂದ ಹಾಗೆಯೇ ಬಿಡಲಾಗಿದೆ. ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.ಜೆಜೆಎಂ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದ್ದು, ಅಪೂರ್ಣಗೊಂಡಿದೆ. ಹಲವೆಡೆ ಪೈಪ್‌ಗಳನ್ನು ಸಂಪರ್ಕಿಸದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ. ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸರ್ಕಾರ ಯೋಜನೆಯನ್ನು ಜಾರಿಗೊಳಿಸಿದ್ದರೂ, ಸಂಬಂಧಿಸಿದ ಅಧಿಕಾರಿಗಳು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸದೆ ಅನುದಾನವನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ ಎಂದು ಸಾರ್ವಜನಿಕರು ದೂರಿದ್ದಾರೆ. ಅಧಿಕಾರಿಗಳು ಶೀಘ್ರ ಕ್ರಮ ಕೈಗೊಂಡು ಅಪೂರ್ಣಗೊಂಡಿರುವ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು. ಪೈಪ್ ಹುಗಿಯಲು ತೆಗೆದಿರುವ ಟ್ರೆಂಚ್‌ಗಳನ್ನು ಶೀಘ್ರ ಮುಚ್ಚಬೇಕು. ಇಲ್ಲವಾದಲ್ಲಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಗ್ರಾಮಸ್ಥರು ಒತ್ತಾಯಿಸಿದರು.



# ಪಂಚಮಸಾಲಿ ಹೋರಾಟಗಾರರ ಮೇಲೆ ಬ್ರಿಟಿಷರ ರೀತಿ ಲಾಠಿ ಚಾರ್ಜ್

**ಬಳ್ಳಾರಿ:** ಬೆಳಗಾವಿಯಲ್ಲಿ ಪಂಚಮಸಾಲಿ ಮೀಸಲಾತಿ ಹೋರಾಟಗಾರರ ಮೇಲೆ ಸರ್ಕಾರ ಸೇಡಿನಿಂದ ಲಾಠಿ ಚಾರ್ಜ್ ಮಾಡಿಸಿ, ಹೋರಾಟಗಾರಿಗೆ ಹಿಂಸೆ ನೀಡಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಶಾಸಕ ಜನಾರ್ದನ ರೆಡ್ಡಿ ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ಬಳ್ಳಾರಿಯ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಿದ್ದರಾಮಯ್ಯ ಸರ್ಕಾರ ಬ್ರಿಟಿಷರ ಮಾದರಿಯಲ್ಲಿ ಭಯಾನಕವಾಗಿ ಪಂಚಮಸಾಲಿ ಮೀಸಲಾತಿ ಹೋರಾಟಗಾರರ ಮೇಲೆ ಲಾಠಿ ಚಾರ್ಜ್ ಮಾಡಿಸಿದೆ. ವಯಸ್ಸು, ಹಿರಿಯರು, ಕಿರಿಯರು ಎನ್ನುವುದನ್ನು ನೋಡದೇ ಹೊಡೆದಿದ್ದಾರೆ ಎಂದು ದೂರಿದರು.

ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಅವರನ್ನ ಬಂಧನದಲ್ಲಿಟ್ಟಿದ್ದಾರೆ. ಹೋರಾಟಕ್ಕೆ ಬೆಂಬಲ ನೀಡಿದ್ದ ಪ್ರತಿಪಕ್ಷದ ನಾಯಕರನ್ನೂ ಬಂಧನ ಮಾಡಿದ್ದಾರೆ. ಅಮಾಯಕ ಜನರನ್ನ ಅಟ್ಟಾಡಿಸಿ ಮನಬಂದಂತೆ ಹೊಡೆದಿದ್ದಾರೆ. ಎಡಿಜಿಪಿ ಅವರು ಓಡೋಡಿ ಬಂದು ಸದನದಲ್ಲಿ ಮುಖ್ಯಮಂತ್ರಿ ಭೇಟಿಯಾದ್ರು. ಐದು ನಿಮಿಷಗಳಲ್ಲಿ ಸಿಎಂ ಹೊರಗೆ ಹೋಗಿ ಎಡಿಜಿಪಿ ಜೊತೆ



ಸಭೆ ಮಾಡಿದ್ರು. ಆಮೇಲೆ ಏನೆಲ್ಲಾ ಅನಾಹುತ ಆಗಬೇಕಿತ್ತೋ ಅದೆಲ್ಲಾ ಆಯ್ತು. ಬ್ರಿಟಿಷರಂತೆ ಕೆಟ್ಟ ಕೆಲಸಕ್ಕೆ ಸರ್ಕಾರ ಕೈ ಹಾಕಿದೆ ಎಂದು ಸಿಟ್ಟು ಹೊರಹಾಕಿದರು.

ಹೋರಾಟದ ಸ್ಥಳಕ್ಕೆ ಬಂದು ಸಿಎಂ ಭರವಸೆ ಕೊಡುವ ಕೆಲಸ ಮಾಡಬೇಕಿತ್ತು. 50 ಸಾವಿರಕ್ಕೂ ಹೆಚ್ಚು ಸಮುದಾಯದ ಜನ ಹೋರಾಟಕ್ಕೆ ಬಂದಿದ್ರು. ಹೋರಾಟದ ಸ್ಥಳಕ್ಕೆ ಬಾರದೇ ನಿರ್ಲಕ್ಷ್ಯ ಮಾಡಿರುವ ಸಿಎಂ ಸಿದ್ದರಾಮಯ್ಯ ಆಮೇಲೆ ಮಾಧ್ಯಮಕ್ಕೆ ತಪ್ಪು ಮಾಹಿತಿ ಕೊಟ್ಟಿದ್ದಾರೆ. ಜಯ ಮೃತ್ಯುಂಜಯ ಸ್ವಾಮೀಜಿಯವರನ್ನು ಕರೆದ್ರೂ ಬರಲಿಲ್ಲ ಎಂದು ಸುಳ್ಳು ಹೇಳಿದ್ದಾರೆ. ಜಯ ಮೃತ್ಯುಂಜಯ ಸ್ವಾಮೀಜಿ ಇಲ್ಲಿಯವರೆಗೆ ಶಾಂತಿಯುತವಾಗಿ ಪ್ರತಿಭಟನೆ ಮಾಡಿದ್ರು. ಸಿಎಂ ಐದು ನಿಮಿಷ ಅಲ್ಲಿಗೆ ಹೋಗಿ ಮನವರಿಕೆ ಮಾಡಿಕೊಡಬೇಕಿತ್ತು. ಆದ್ರೆ ಅದೆಲ್ಲವನ್ನೂ ಬಿಟ್ಟು, ಯಾವುದೇ ನೆಪ ಹೇಳಿ ಲಾಠಿ ಚಾರ್ಜ್ ಮಾಡಿಸಿದ್ದಾರೆ ಎಂದು ಕಿಡಿಕಾರಿದರು.

ಇನ್ಮುಂದೆ ಹೋರಾಟಕ್ಕೆ ಮುಂದೆ ಬರಬಾರದು, ಹೋರಾಟ ಮಾಡಬಾರದು ಅನ್ನೋ ರೀತಿಯ ಭಯ ಹುಟ್ಟಿಸುವ ಕೆಲಸ ಮಾಡಿದ್ದಾರೆ. ಕೈ, ಕಾಲು ಮುರಿದು, ರಕ್ತ ಬರುವ ರೀತಿ ಹೊಡೆದಿದ್ದಾರೆ. ಇಡೀ ಪಂಚಮಸಾಲಿ ಸಮಾಜಕ್ಕೆ ಮಾತ್ರ ಅಲ್ಲ, ಇಡೀ ಸಮಾಜಕ್ಕೆ ಕ್ಷಮೆ ಕೇಳುವ ಕೆಲಸ ಮಾಡಬೇಕಿದೆ. ಇದಕ್ಕೆ ಸಿಎಂ ಫುಲ್ ಸ್ಟಾಪ್ ಇಡಬೇಕಿದೆ. ಕೂಡಲೇ ಕ್ಷಮೆ ಕೇಳಿ, ಸ್ವಾಮೀಜಿಯವರನ್ನ ಭೇಟಿ ಮಾಡಿ, ಸಾಂತ್ವನ ಹೇಳಬೇಕಿದೆ. ಈ ರೀತಿ ಆಗೋದಿಲ್ಲ ಎಂದು ಭರವಸೆ ಕೊಡಬೇಕಿದೆ ಎಂದರು.

## ಬೀದಿನಾಯಿಗಳ ದಾಳಿಯಿಂದ ಕೋಮಾಗೆ ಹೋಗಿದ್ದ ಯುವತಿ ಸಾವು

**ರಾಯಚೂರು:** ನಗರದ ಮಡ್ಡಿಪೇಟೆಯಲ್ಲಿ ಬೀದಿ ನಾಯಿಗಳ ದಾಳಿಯಿಂದ ತಲೆಗೆ ತೀವ್ರ ಪೆಟ್ಟಾಗಿ ಕೋಮಾ ಸ್ಥಿತಿಗೆ ತಲುಪಿದ್ದ ಯುವತಿ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾಳೆ.

20 ವರ್ಷದ ಮಹಾದೇವಿ ಮೃತ ದುರ್ದೈವಿ ಯುವತಿ. ನಗರದ ರಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಯುವತಿ ಚಿಕಿತ್ಸೆಗೆ ಸ್ಪಂದಿಸದೇ ಮೃತಪಟ್ಟಿದ್ದಾಳೆ. ಮಂಗಳವಾರ ಬೆಳಗ್ಗೆ ದೇವಾಲಯಕ್ಕೆ ಹೊರಟಿದ್ದ ಯುವತಿ ಮೇಲೆ ಬೀದಿ ನಾಯಿಗಳ ಗುಂಪು ದಾಳಿ ಮಾಡಿತ್ತು. ನಾಯಿಗಳ ದಾಳಿಗೆ ಹೆದರಿದ ಯುವತಿ ಕೆಳಗೆ ಬಿದ್ದಿದ್ದು ತಲೆಗೆ ಬಲವಾದ ಪೆಟ್ಟಾಗಿತ್ತು. ಕೆಳಗೆ ಬಿದ್ದ ಯುವತಿಯನ್ನು ನಾಯಿಗಳು ಎಳೆದಾಡಿವೆ. ತಲೆಗೆ ಪೆಟ್ಟು ಬಿದ್ದಿದ್ದರಿಂದ ರಕ್ತ ಹೆಪ್ಪುಗಟ್ಟಿ ಯುವತಿ ಕೋಮಾ ಸ್ಥಿತಿಗೆ ಹೋಗಿದ್ದಳು. ಯುವತಿಯನ್ನು ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಬುಧವಾರ ಸಾವನ್ನಪ್ಪಿದ್ದಾಳೆ. ಮೃತಳ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಯುವತಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಶವಾಗಾರಕ್ಕೆ ರವಾನಿಸಲಾಗಿದೆ.





## ಶರಾವತಿ ಜಲವಿದ್ಯುತ್ ಯೋಜನೆ ಸಂಸತ್‌ನಲ್ಲಿ ಕನ್ನಡದಲ್ಲೇ ಪ್ರಸ್ತಾಪಿಸಿದ ಬಿ.ವೈ.ರಾಘವೇಂದ್ರ

**ನವದೆಹಲಿ:** ಶರಾವತಿ ಜಲವಿದ್ಯುತ್ ಯೋಜನೆ ಸಂತ್ರಸ್ತರ ವಿಚಾರವನ್ನು ಸಂಸದ ಬಿ.ವೈ.ರಾಘವೇಂದ್ರ ಅವರು ಲೋಕಸಭೆಯಲ್ಲಿ ಕನ್ನಡದಲ್ಲೇ ಪ್ರಸ್ತಾಪಿಸಿ ಗಮನ ಸೆಳೆದರು.

ಅನೇಕ ವರ್ಷಗಳ ಒಂದು ಸಮಸ್ಯೆ. ಸ್ವಾತಂತ್ರ್ಯ ಬಂದು 77 ವರ್ಷ ಆಯ್ತು. ಸಂವಿಧಾನ ಬಂದು 75 ವರ್ಷ ಆಯ್ತು. ನಾನು ಇವತ್ತು ಶರಾವತಿ ಜಲವಿದ್ಯುತ್ ಯೋಜನೆ ಸಂತ್ರಸ್ತರ ವಿಚಾರವನ್ನು ಪ್ರಸ್ತಾಪಿಸುತ್ತಿದ್ದೇನೆ. ಇದಕ್ಕೂ ಹತ್ತಿರತ್ತಿರ 75 ವರ್ಷಗಳು ತುಂಬುತ್ತಿವೆ ಎಂದು ಗಮನಕ್ಕೆ ತಂದರು.

1958–64 ರ ನಡುವೆ ಶರಾವತಿ ಯೋಜನೆ ಆಗುತ್ತದೆ. 4 ರಿಂದ 5 ಸಾವಿರ ರೈತರ ಕುಟುಂಬಗಳ ಕೃಷಿ ಭೂಮಿ ಈ ಯೋಜನೆಯಿಂದ ಮುಳುಗಡೆಯಾಗುತ್ತದೆ. ಇದುವರೆಗೂ ಸಂತ್ರಸ್ತ ರೈತರಿಗೆ ಕೃಷಿ ಭೂಮಿ ಒದಗಿಸಿಕೊಡುವ ಕೆಲಸವನ್ನು ಹಿಂದಿನ ಸರ್ಕಾರಗಳು ಮಾಡಿಲ್ಲ ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರ 1958–69 ರ ಅವಧಿಯಲ್ಲಿ 9136 ಎಕರೆ ಅರಣ್ಯ ಪ್ರದೇಶವನ್ನು ಸಂತ್ರಸ್ತರಿಗೆ ಪುನರ್ವಸತಿ ಕೊಡುವುದಕ್ಕಾಗಿ ಪ್ರಸ್ತಾವನೆ ಕಳಿಸಿರುತ್ತಾರೆ. 50 ವರ್ಷಗಳ ಹಿಂದೆಯೇ ಈ ಕೆಲಸ ಆಗಿದೆ. ಆದರೆ, ಇದುವರೆಗೂ ಯಾವುದೇ ಪರಿಹಾರ



ಸಿಕ್ಕಿಲ್ಲ. ಯಾವುದೇ ಸೌಲಭ್ಯ ಸಿಗದೇ ರೈತರು ಕಣ್ಣೀರಲ್ಲಿ ಕೈತೊಳೆಯುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸಂತ್ರಸ್ತರಿಗೆ ಪುನರ್ವಸತಿ ಕಲ್ಪಿಸಲು ಇದೂವರೆಗೂ ಆಗಿಲ್ಲ. ಅರಣ್ಯವನ್ನು ಡಿ ರಿಸರ್ವ್ ಮಾಡಿ ಪುನರ್ವಸತಿ ಕಲ್ಪಿಸಬೇಕು ಎಂದು ಕೇಂದ್ರ ಪರಿಸರ ಸಚಿವಾಲಯಕ್ಕೆ ಸಂಸದರು ಒತ್ತಾಯ ಮಾಡಿದ್ದಾರೆ.

# ಹಾಡಹಗಲೇ ನಡುಬೀದಿಯಲ್ಲಿ ಚಾಕು ಸಮೇತ ಹೊಡೆದಾಡಿದ ಯುವಕರು

**ಗದಗ:** ಹಾಡಹಗಲೇ ನಡುಬೀದಿಯಲ್ಲಿ ಇಬ್ಬರು ಯುವಕರು ಚಾಕು ಸಮೇತ ಹೊಡೆದಾಡಿದ ಘಟನೆ ಗದಗ ನಗರದ ಚೆನ್ನಮ್ಮ ಸರ್ಕಲ್ ಬಳಿ ನಡೆದಿದೆ.

ಹಣಕಾಸು ಹಾಗೂ ಕೌಟುಂಬಿಕ ವಿಚಾರವಾಗಿ ಫಕೀರೇಶ ನಂದಿಹಳ್ಳಿ ಹಾಗೂ ಗಂಗಾಧರ ಹಿರೇಮಠ ಕಿತ್ತಾಡಿದ್ದಾರೆ. ಈ ಇಬ್ಬರು ಮೂಲತಃ ಮುಂಡರಗಿ ತಾಲೂಕಿನ ಚಿರ್ಚಿಹಾಳ ಗ್ರಾಮದ ನಿವಾಸಿಗಳು. ಕಳೆದ ನಾಲ್ಕೈದು ವರ್ಷಗಳಿಂದ ಗದಗ ನಗರದ ಹುಡೋ ಕಾಲೋನಿಯಲ್ಲಿ ವಾಸವಾಗಿದ್ದಾರೆ. ಇಬ್ಬರು ನಡುವೆ ಹಣಕಾಸು ವಿಚಾರವಾಗಿ ಆಗಾಗ ಗಲಾಟೆ ಆಗುತ್ತಿತ್ತು. ಇದರ ಜೊತೆಗೆ ಫಕೀರೇಶನ ಮಗಳು ಗಂಗಾಧರನ ಮನೆಗೆ ಬಂದು ತಂದೆ ಬಗ್ಗೆ ದೂರು ಹೇಳಿದ್ದಾಳೆ.



ನನ್ನ ತಾಯಿ ಹಾಗೂ ನಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಿಲ್ಲ. ವಿನಾಕಾರಣ ಕಿರುಕುಳ ಕೊಡ್ತಿದ್ದಾನೆ ಎಂದು ದೂರಿದ್ದಾಳೆ. ಇದರಿಂದ ಕೋಪಿತಗೊಂಡ ಗಂಗಾಧರ್ ಫಕೀರೇಶನೊಂದಿಗೆ ಜಗಳವಾಡಿದ್ದಾನೆ. ಮಾತಿಗೆ ಮಾತು ಬೆಳೆದು ವಿಕೋಪಕ್ಕೆ ತಿರುಗಿದೆ. ನಂತರ ಒಬ್ಬರನೊಬ್ಬರು ರಸ್ತೆಯಲ್ಲೇ ಹೊಡೆದಾಡಿಕೊಂಡಿದ್ದಾರೆ.

ಗಲಾಟೆಯಲ್ಲಿ ಫಕೀರೇಶನ ಕುತ್ತಿಗೆ, ಮುಖ, ಎದೆಗೆ ಗಂಗಾಧರ್ ಎಂಬಾತ ಚಾಕು ಇರಿದಿದ್ದಾನೆ. ಫಕೀರೇಶನಿಗೆ ಗಂಭೀರ ಗಾಯವಾಗಿದ್ದು, ಗದಗ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಘಟನೆಯಿಂದ ಸ್ಥಳಿಯರು ಬೆಚ್ಚಿ ಬಿದ್ದಿದ್ದಾರೆ. ಪೊಲೀಸರು ಯಾವುದೇ ಭಯವೇ ಇಲ್ಲದೇ ಇಬ್ಬರು ಹೊಡೆದಾಡಿದ ವಿಡಿಯೋ ವೈರಲ್ ಆಗಿದೆ. ಈ ಕುರಿತು ಗದಗ ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕೂಲಿ ಕೆಲಸಕ್ಕೆ ಹೊರಟಿದ್ದ ದಂಪತಿ ಸಾವು

**ಕೊಪ್ಪಳ:** ಕೂಲಿ ಕೆಲಸಕ್ಕೆ ಹೊರಟಿದ್ದ ದಂಪತಿಯ ಬೈಕ್‌ಗೆ ಲಾರಿ ಡಿಕ್ಕಿ ಹೊಡೆದಿದ್ದು, ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಕೆಸರಟ್ಟಿ ಗ್ರಾಮದ ಬಳಿ ನಡೆದಿದೆ. ಮೃತ ದಂಪತಿಯನ್ನು ಮರಕುಂಬಿ ಗ್ರಾಮದ ನಿವಾಸಿಗಳಾದ ಪತಿ ಮಂಜುನಾಥ ನಾಯಕ್(38) ಹಾಗೂ ಪತ್ನಿ ನೇತ್ರಾವತಿ ನಾಯಕ್(33) ಎಂದು ಗುರುತಿಸಲಾಗಿದೆ. ಕೂಲಿ ಕೆಲಸಕ್ಕಾಗಿ ದಂಪತಿ ಗಂಗಾವತಿಗೆ ಹೊರಟಿದ್ದರು. ಈ ವೇಳೆ ಲಾರಿ ಡಿಕ್ಕಿ ಹೊಡೆದಿದ್ದು, ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಗಂಗಾವತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



## ಅಕ್ರಮದ ಆರೋಪ

150 ಪಿಡಿಒ ಹುದ್ದೆಗಳ ನೇಮಕಾತಿಗಾಗಿ ಡಿಸೆಂಬರ್ 8ರಂದು ಪರೀಕ್ಷೆ ನಡೆದಿತ್ತು. ರಾಜ್ಯಾದ್ಯಂತ ಒಟ್ಟಾರೆ 2 ಲಕ್ಷ ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ, ದಿನಾಂಕ 8/12/2024 ರಂದು ನಡೆದ ''ಪಂಚಾಯತ್ ಅಭಿವೃದ್ಧಿ ಅಧಿಕಾರಿ'' ಪರೀಕ್ಷೆಯಲ್ಲಿ PSI-545 ಹಗರಣದ ಮಾದರಿಯಲ್ಲಿಯೇ ಬ್ಲೂಟೂತ್ ಸದ್ದು ಮಾಡಿದೆ. ಕೇವಲ ತುಮಕೂರಿನಲ್ಲಿ ಒಬ್ಬ ಅಭ್ಯರ್ಥಿ ಬ್ಲೂಟೂತ್ ಬಳಸಿಲ್ಲ, ಇದರ ಹಿಂದೆ ಒಂದು ದೊಡ್ಡ ಗ್ಯಾಂಗ್ ಇದೆ. ನಮಗೆಲ್ಲ ನೆನಪಿದೆ, ತಾವೇ ಮುಂದಾಳತ್ವ ವಹಿಸಿಕೊಂಡು PSI ಹಗರಣವನ್ನು ಬಯಲಿಗೆಳೆದು, ಅಕ್ರಮದ ಅಪರಾಧಿಗಳಿಗೆ ಜೈಲುಗಂಬಿ ಎಣಿಸಲಿಕ್ಕೆ ಹಚ್ಚಿದಿರಿ. PDO HK ಮತ್ತು NON HK ಪರೀಕ್ಷೆಯಲ್ಲಿ ''ಬ್ಲೂಟೂತ್ ಬಳಕೆ''ಮತ್ತು ''ಪ್ರಶ್ನೆ ಪತ್ರಿಕೆ ಸೋರಿಕೆ'' ಆಗಿರುವುದು ಜಗಜ್ಜಾಹೀರವಾಗಿದೆ. ಬಡ ಅಭ್ಯರ್ಥಿಗಳು 5-6 ವರ್ಷದಿಂದ ಪರೀಕ್ಷೆಗೆ ಹಗಲು-ರಾತ್ರಿ ತಯಾರಿ ನಡೆಸಿದ್ದರು. ಅಕ್ರಮವಾಗಿ ಸರ್ಕಾರಿ ಹುದ್ದೆಗಳು ಮಾರಾಟವಾದರೆ, ಪ್ರತಿಭಾನ್ವಿತ ಬಡ ಅಭ್ಯರ್ಥಿಗಳ ಗತಿಯೇನು ಇದಕ್ಕೆ ಉತ್ತರ ತಾವು ಕೊಡಬೇಕು. ಯುವಕರ ಕಣ್ಮಣಿ ನೀವು, ನಿಮ್ಮ ಮೇಲೆ ಲಕ್ಷಾಂತರ ಅಭ್ಯರ್ಥಿಗಳು ಭರವಸೆ ಇಟ್ಟಿದ್ದಾರೆ. ಇದಕ್ಕೆ ಪರಿಹಾರ ಹುಡಿಕಿ, ಅಕ್ರಮದಲ್ಲಿ ಭಾಗಿಯಾದ ಆರೋಪಿಗಳಿಗೆ ಜೈಲಿಗಟ್ಟಿಸಿ, ''ಮರುಪರೀಕ್ಷೆ ''ನಡೆಸುವಂತೆ KPSCಗೆ ಆದೇಶಿಸಬೇಕೆಂದು AKSSA ಸಂಘಟನೆ ಪರವಾಗಿ ಕೇಳಿಕೊಳ್ಳುತ್ತೇವೆ ಎಂದು ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿ ಸಂಘಟನೆ (ರಿ) ವಿದ್ಯಾರ್ಥಿ ಘಟಕದ ಕಾಂತಕುಮಾರ್ ಆರ್ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿ ಆಗ್ರಹಿಸಿದ್ದಾರೆ.

ಎಕ್ಸ್ ಸಂದೇಶದ ಜತೆಗೆ ಪ್ರಶ್ನೆ ಪತ್ರಿಕೆ ಸೀಲ್ ಓಪನ್ ಮಾಡಿದ್ದು ಎನ್ನಲಾದ ಆರೋಪಕ್ಕೆ ಸಂಬಂಧಿಸಿದ ಚಿತ್ರವನ್ನೂ ಅವರು ಪೋಸ್ಟ್ ಮಾಡಿದ್ದಾರೆ.

## ಮತ್ತೊಂದು ಚಂಡಮಾರುತ

ಮೈಲಾಡುತುರೈ, ತಂಜಾವೂರು, ಪುದುಕೊಟ್ಟೈ ಮತ್ತು ಅರಿಯಲೂರು ಜಿಲ್ಲೆಗಳಲ್ಲಿ ಮಾತ್ರ ಶಾಲೆಗಳಿಗೆ ರಜೆ ಘೋಷಿಸಲಾಗಿದೆ.

ಕೆಲವು ಪ್ರದೇಶಗಳಲ್ಲಿ ಈಗಾಗಲೇ ಗಮನಾರ್ಹ ಮಳೆಯಾಗಿದೆ, ಕಾರೈಕಲ್‌ನಲ್ಲಿ 8 ಸೆಂ, ಮತ್ತು ಆದಿರಾಮಪಟ್ಟಿಣಂ, ವೃದ್ಧಾಚಲಂ, ನಾಗಪಟ್ಟಿಣಂ, ತಿರುವರೂರ್, ಕಡಲೂರು, ಪೂನಮಲ್ಲಿ, ಚೆನ್ನೈನ ರೆಡ್ ಹಿಲ್ಸ್ ಮತ್ತು ಚೆನ್ನೈನ ನುಂಗಂಬಾಕ್ಕಂನಲ್ಲಿ 5-7 ಸೆಂ.ಮೀ ಮಳೆಯಾಗಿದೆ.

ಭಾರೀ ಮಳೆಯು ರಾಜ್ಯದ ಹಲವಾರು ಭಾಗಗಳಲ್ಲಿ ಸಾಮಾನ್ಯ ಜೀವನವನ್ನು ಅಸ್ತವ್ಯಸ್ತಗೊಳಿಸಿದೆ, ಅಧಿಕಾರಿಗಳು ಎಚ್ಚರಿಕೆ ವಹಿಸುವಂತೆ ಮತ್ತು ಸಾಧ್ಯವಾದಾಗಲೆಲ್ಲಾ ಮನೆಯೊಳಗೆ ಇರುವಂತೆ ಒತ್ತಾಯಿಸಿದ್ದಾರೆ.

ಕರ್ನಾಟಕ, ತಮಿಳುನಾಡು ಮತ್ತು ಆಂಧ್ರಪ್ರದೇಶಕ್ಕೆ ಭಾರೀ ಮಳೆಯ ಎಚ್ಚರಿಕೆಯನ್ನು ನೀಡಿದೆ. ತಮಿಳುನಾಡು, ಪುದುಚೇರಿ, ಕಾರೈಕಲ್, ಕೇರಳದಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಆರೆಂಜ್ ಅಲರ್ಟ್ ಘೋಷಿಸಲಾಗಿದ್ದು, ಆಂಧ್ರಪ್ರದೇಶದ ಕರಾವಳಿ, ಯಾನಂ, ರಾಯಲಸೀಮಾ ಮತ್ತು ದಕ್ಷಿಣ ಒಳನಾಡಿನಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಡಿ.13 ರವರೆಗೆ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ. ಕರ್ನಾಟಕದಲ್ಲೂ 8 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಎಲ್ಲೆಡೆ ಮೋಡಕವಿದ ವಾತಾವರಣವಿದ್ದು, ಬೆಂಗಳೂರಿನಲ್ಲಿ ಸಾಧಾರಣ ಮಳೆಯಾಗಿದೆ.

## ಮಳೆ ಶುರು

ಬೀದರ್ ನಲ್ಲಿ 15.0 ಡಿಗ್ರಿ ಸೆಲ್ಸಿಯಸ್ ಅತ್ಯಂತ ಕನಿಷ್ಠ ಉಷ್ಣಾಂಶ ದಾಖಲಾಗಿದೆ. ಬೆಂಗಳೂರಿನ ಎಚ್ ಎಎಲ್ ನಲ್ಲಿ 28.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 18.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 28.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್ ನಲ್ಲಿ 28.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 27.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 18.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಹೊನ್ನಾವರದಲ್ಲಿ 32.3 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.1 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಾರವಾರದಲ್ಲಿ 34.3 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.1 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಶಿರಾಲಿಯಲ್ಲಿ 32.6ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 18.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಪಣಂಬೂರಿನಲ್ಲಿ 32.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.9 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಬೆಳಗಾವಿಯಲ್ಲಿ 28.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಬೀದರ್ ನಲ್ಲಿ 27.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 15.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ವಿಜಯಪುರದಲ್ಲಿ 28.5 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 17.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಬಾಗಲಕೋಟೆಯಲ್ಲಿ 29.7 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 18.3 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಧಾರವಾಡದಲ್ಲಿ 29.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 16.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಗದಗದಲ್ಲಿ 30.5 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 18.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಲಬುರಗಿಯಲ್ಲಿ 33.2ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹಾವೇರಿಯಲ್ಲಿ 31.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## ಮೀಸಲಾತಿ ಕಿಚ್ಚು

ಮೀಸಲಾತಿ ಹೋರಾಟವನ್ನ ಸರ್ಕಾರ ಹತ್ತಿಕ್ಕಲು ಯತ್ನಿಸಿದೆ. ತಕ್ಷಣವೇ ಪಂಚಮಸಾಲಿ ಸಮಾಜಕ್ಕೆ ಕ್ಷಮೆ ಕೇಳಬೇಕು. ಇದು ಲಿಂಗಾಯತ ವಿರೋಧಿ ಸರ್ಕಾರ ಎಂದು ಪ್ರತಿಭಟನೆ ಮೂಲಕ ಆಗ್ರಹಿಸಲಿದ್ದಾರೆ.

ಒಟ್ಟು 9 ವಿವಿಧ ಸಂಘಟನೆಗಳಿಂದ ಪ್ರತಿಭಟನೆ ನಡೆಯಲಿದ್ದು, 4 ಸಂಘಟನೆಗಳು ಸರ್ಕಾರಕ್ಕೆ ಮನವಿ ಸಲ್ಲಿಸಲಿವೆ. ಬೆಳಗಾವಿ ವಿಧಾನ ಸೌಧದ ಹೊರಗಿನ ಕೊಂಡಸಕೊಪ್ಪ, ಸುವರ್ಣ ಗಾರ್ಡನ್ ಬಳಿಯ ಟೆಂಟ್‌ನಲ್ಲಿ ಹೋರಾಟ ನಡೆಯಲಿದೆ. ಕಾರ್ಮಿಕರ ವಿವಿಧ ಬೇಡಿಕೆಗೆ ಒತ್ತಾಯಿಸಿ ಆಲ್ ಇಂಡಿಯಾ ಟ್ರೇಡ್ ಯೂನಿಯನ್ ಕಾಂಗ್ರೆಸ್, ಸ್ವಾತಂತ್ರ್ಯ ಯೋಧರ ಉತ್ತರಾಧಿಕಾರಿ ಸದಸ್ಯರಿಗೆ ಸರ್ಕಾರಿ ನೌಕರಿ ಸೇರಿ ವಿವಿಧ ಬೇಡಿಕೆಗೆ ಒತ್ತಾಯಿಸಿ ಅಖಿಲ ಕರ್ನಾಟಕ ಸ್ವಾತಂತ್ರ್ಯ ಯೋಧರ ಉತ್ತರಾಧಿಕಾರಿಗಳ ಸಂಘ, ಒಳ ಮೀಸಲಾತಿ, ಜಾತಿ ಗಣತಿ ಕೂಡಲೆ ಜಾರಿಗೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಹೋರಾಟ ನಡೆಯಲಿದೆ.

ಪಂಚಮಸಾಲಿ ಮೀಸಲು ಹೋರಾಟದಲ್ಲಿ ನಡೆದ ಲಾಠಿಚಾರ್ಜ್‌ನಿಂದಾಗಿ ಹಲವರು ಗಾಯಗೊಂಡಿದ್ದರು. ಸದ್ಯ ಗಾಯಾಳುಗಳು ಬೆಳಗಾವಿ ಸಿವಿಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಬಿಜೆಪಿ ನಾಯಕರು ಇಂದು ಗಾಯಾಳುಗಳ ಆರೋಗ್ಯ ವಿಚಾರಿಣೆ ನಡೆಸಲಿದ್ದಾರೆ. ಬಿಜೆಪಿ ರಾಜಾಧ್ಯಕ್ಷ ಬಿವೈ ವಿಜಯೇಂದ್ರ, ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ಅರವಿಂದ ಬೆಲ್ಲದ್, ಸಿ.ಸಿ ಪಾಟೀಲ್ ಸೇರಿದಂತೆ ಇನ್ನಿತರರು ಭೇಟಿ ನೀಡಲಿದ್ದಾರೆ.

**ಬಿಜೆಪಿಯಿಂದ ಲಾಠಿಚಾರ್ಜ್ ಖಂಡಿಸಿ ಪ್ರತಿಭಟನೆ:** ಪಂಚಮಸಾಲಿ ಹೋರಾಟದಲ್ಲಿ ನಡೆದ ಲಾಠಿಚಾರ್ಜ್ ಖಂಡಿಸಿ ಇಂದು ಬಿಜೆಪಿ ಸುವರ್ಣಸೌಧದ ಅಂಬೇಡ್ಕರ್ ಪ್ರತಿಮೆ ಎದುರು ಪ್ರತಿಭಟನೆ ನಡೆಸಲಿದೆ. ಬಿವೈ ವಿಜಯೇಂದ್ರ, ಅಶೋಕ್, ಛಲವಾದಿ ನಾರಾಯಣಸ್ವಾಮಿ ಮುಂದಾಳತ್ವದಲ್ಲಿ ಪ್ರತಿಭಟನೆ ನಡೆಯಲಿದೆ. ಬಿಜೆಪಿಯ ಶಾಸಕರು, ಪರಿಷತ್ ಸದಸ್ಯರು ಈ ಪ್ರತಿಭಟನೆಯಲ್ಲಿ ಭಾಗಿಯಾಗಲಿದ್ದಾರೆ.

## 21ರಿಂದ ಶುರು

ದೆಹಲಿಗೆ ತಲುಪಲಿದೆ. ವಿಮಾನ ಸಂಖ್ಯೆ IX 2768 ದೆಹಲಿಯಿಂದ 6.40 ಗಂಟೆಗೆ ಹೊರಟು ಮಂಗಳೂರಿಗೆ 9.35 ಗಂಟೆಗೆ ತಲುಪಲಿದೆ.

**ಮಂಗಳೂರು ಪುಣೆ ನೇರ ವಿಮಾನ ವೇಳಾಪಟ್ಟಿ:** ಏರ್ ಇಂಡಿಯಾ ಎಕ್ಸ್‌ಪ್ರೆಸ್ ಜನವರಿ 4 ರಿಂದ ಮಂಗಳೂರು ಮತ್ತು ಪುಣೆ ನಡುವೆ ಎರಡು ನೇರ ವಿಮಾನಗಳನ್ನು ನಿರ್ವಹಿಸಲಿದೆ. ವಿಮಾನ ಸಂಖ್ಯೆ IX 2256 ಪುಣೆಯಿಂದ 8 ಗಂಟೆಗೆ ಹೊರಟು 9.25 ಗಂಟೆಗೆ ಪುಣೆಗೆ ತಲುಪುತ್ತದೆ. ವಿಮಾನ ಸಂಖ್ಯೆ 2257 ಪುಣೆಯಿಂದ 9.55

**ಮೊದಲನೇ ಪುಟದಿಂದ...**

ಗಂಟೆಗೆ ಹೊರಟು 11.40 ಗಂಟೆಗೆ ಮಂಗಳೂರಿಗೆ ಆಗಮಿಸಲಿದೆ. ವಿಮಾನ ಸಂಖ್ಯೆ 2236 ಮಂಗಳೂರಿನಿಂದ 18.30 ಗಂಟೆಗೆ ಹೊರಟು 20.00 ಗಂಟೆಗೆ ಪುಣೆಗೆ ಮತ್ತು ವಿಮಾನ ಸಂಖ್ಯೆ 2237 ಪುಣೆಯಿಂದ 20.35 ಗಂಟೆಗೆ ಹೊರಟು 22.05 ಗಂಟೆಗೆ ಮಂಗಳೂರಿಗೆ ಆಗಮಿಸಲಿದೆ.

**ಸರ್ಕಾರಕ್ಕೆ ಮನವಿ ಮಾಡಿದ್ದ ಸಂಸದ ಬ್ರಿಜೇಶ್ ಚೌಟ:** ಸಿಂಗಾಪುರ ಮಂಗಳೂರು ನೇರ ವಿಮಾನ ಸೇವೆ ಸಂಬಂಧ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಸೆಪ್ಟೆಂಬರ್‌ನಲ್ಲಿ ಕೇಂದ್ರ, ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರಿಗೆ ಮನವಿ ಮಾಡಿದ್ದರು. ಮಂಗಳೂರು ಮತ್ತು ಸಿಂಗಾಪುರದ ಚಾಂಗಿ ವಿಮಾನ ನಿಲ್ದಾಣದ ನಡುವೆ ವಿಮಾನ ಸಂಚಾರ ಆರಂಭಿಸುವಂತೆ ಮನವಿ ಮಾಡಿ ಪತ್ರ ಬರೆದಿದ್ದರು.

ಸಿಂಗಾಪುರ ಮತ್ತು ಕರ್ನಾಟಕದ ಮಲೆನಾಡು ಹಾಗೂ ಕರಾವಳಿ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಂಪನಿಯೊಂದರ ಮನವಿಯ ಮೇರೆಗೆ ಚೌಟ ಅವರು ಕೇಂದ್ರ ವಿಮಾನಯಾನ ಸಚಿವರಿಗೆ ಮನವಿ ಮಾಡಿದ್ದರು.

ಮಂಗಳೂರು ಸಿಂಗಾಪುರ ಮಧ್ಯೆ ನೇರ ವಿಮಾನಯಾನ ಸಂಪರ್ಕವು ಉದ್ಯಮ ಕ್ಷೇತ್ರಕ್ಕೆ ಪೂರಕವಾಗಿರಲಿದ್ದು, ಪ್ರಯಾಣವನ್ನು ಸುಲಭಗೊಳಿಸಲಿದೆ. ಜತೆಗೆ, ಆಸಿಯಾನ್ ಮತ್ತು ಪೂರ್ವ ಏಷ್ಯಾ ರಾಷ್ಟ್ರಗಳೊಂದಿಗೆ ಭಾರತವನ್ನು ಸಂಪರ್ಕಿಸುವ ಗುರಿಯನ್ನು ಹೊಂದಿರುವ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ನಮ್ಮ ಕೇಂದ್ರ ಸರ್ಕಾರದ ಆಕ್ಟ್ ಈಸ್ಟ್ ನೀತಿಗೆ ಪೂರಕವಾಗಿರಲಿದೆ ಎಂದು ಚೌಟ ಹೇಳಿದ್ದಾರೆ.

## ಗುಡ್ ನ್ಯೂಸ್

ಆದ್ದರಿಂದ ಕನ್ನಡ ಹೊರತುಪಡಿಸಿ ಅನ್ಯಭಾಷೆಯಲ್ಲಿ ಮುದ್ರಿತ (ದ್ವಿಭಾಷೆ) ಆಧಾರ್ ಕಾರ್ಡ್ ಗಳಲ್ಲಿನ ಆಂಗ್ಲ ಭಾಷೆಯಲ್ಲಿರುವ ವಿಳಾಸವನ್ನು ಪರಿಶೀಲಿಸಿ ವಿಳಾಸವು ಕರ್ನಾಟಕ ರಾಜ್ಯದಾಗಿದ್ದಲ್ಲಿ, ಆ ಆಧಾರ್ ಕಾರ್ಡ್ ಅನ್ನು ಮಾನ್ಯ ಮಾಡಿ ಶಕ್ತಿಯೋಜನೆ ಅಡಿಯಲ್ಲಿ ಉಚಿತ ಟಿಕೆಟ್ ನೀಡಲು ಸೂಚನೆ ನೀಡಲಾಗಿದೆ.

ಒಟ್ಟನಲ್ಲಿ ಬಿಎಂಟಿಸಿ ಬಸ್ ನಲ್ಲಿ ಉಚಿತವಾಗಿ ಟಿಕೆಟ್ ತೆಗೆದುಕೊಂಡು ಪ್ರಯಾಣ ಮಾಡಬೇಕೆಂದರೆ, ಆಧಾರ್ ಕಾರ್ಡ್ ಕನ್ನಡದಲ್ಲೇ ಇರಬೇಕೆಂದು ಕಿರಿಕ್ ಮಾಡುತ್ತಿದ್ದ ಕಂಡಕ್ಟರ್ ಗಳಿಗೆ ಬಿಎಂಟಿಸಿಯ ಹೊಸ ಆದೇಶ ಬ್ರೇಕ್ ಹಾಕಿರುವುದಂತೂ ನಿಜ. ಬಿಎಂಟಿಸಿ ಆದೇಶದಿಂದ ಮಹಿಳಾ ಪ್ರಯಾಣಿಕರು ಸಂತಸಗೊಂಡಿದ್ದಾರೆ.

## ಮತ್ತೊಂದು ಆತಂಕ

ತುಂಗಭದ್ರಾ ಜಲಾಶಯ ಕರ್ನಾಟಕದ 4 ಜಿಲ್ಲೆಗಳು, ನೆರೆಯ ತೆಲಂಗಾಣ, ಆಂಧ್ರಪ್ರದೇಶ ಲಕ್ಷಾಂತರ ಜನರ ಬದುಕಿಗೆ ಆಶ್ರಯವಾಗಿದೆ. ಕಳೆದ ವರ್ಷ ಬರಗಾಲದಿಂದಾಗಿ ಜಲಾಶಯ ಪೂರ್ಣ ಪ್ರಮಾಣದಲ್ಲಿ ತುಂಬಿರಲಿಲ್ಲ. ಆದರೆ ಈ ಬಾರಿ ಉತ್ತಮ ಮಳೆಯಾಗಿದ್ದರಿಂದ ಆಗಸ್ಟ್ ಮೊದಲ ವಾರದಲ್ಲಿಯೇ ಭರ್ತಿಯಾಗಿತ್ತು. ಆದರೆ 2024 ರ ಆಗಸ್ಟ್ 10 ರಂದು ರಾತ್ರಿ ಸಮಯದಲ್ಲಿ ಡ್ಯಾಂನ 19 ನೇ ಕ್ರೆಸ್ಟಗೇಟ್ ಕೊಚ್ಚಿಕೊಂಡು ಹೋಗಿತ್ತು. ಹೀಗಾಗಿ ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಹೋಗಿತ್ತು. ನಂತರ ಹರಸಾಹಸ ಪಟ್ಟು ತಾತ್ಕಾಲಿಕ ಗೇಟ್ ಅಳವಡಿಸಲಾಗಿತ್ತು.

**ಎಲ್ಲ 33 ಗೇಟ್‌ಗಳ ಬದಲಾವಣೆ ಬಗ್ಗೆ ಚರ್ಚೆ:** ಯಾವುದೇ ಜಲಾಶಯದ ಕ್ರೆಸ್ಟ್ ಗೇಟ್ ಗಳು, ಚೈನ್ ಲಿಂಕ್‌ಗಳನ್ನು ಪ್ರತಿ 50 ವರ್ಷಕ್ಕೊಮ್ಮೆ ಬದಲಾಯಿಸಬೇಕು. ಆದರೆ ತುಂಗಭದ್ರಾ ಜಲಾಶಯಕ್ಕೆ 70 ವರ್ಷಗಳ ಹಿಂದೆಯೇ ಕ್ರೆಸ್ಟ್ ಗೇಟ್, ಚೈನ್ ಲಿಂಕ್ ಗಳನ್ನು ಅಳವಡಿಸಲಾಗಿದೆ. ಆ ನಂತರ ಈವರೆಗೆ ಒಮ್ಮೆಯೂ ಬದಲಾಯಿಸಿಲ್ಲ. ಹೀಗಾಗಿ ಎಲ್ಲಾ 33 ಕ್ರೆಸ್ಟ್ ಗೇಟ್ ಗಳನ್ನು ಬದಲಿಸಬೇಕು ಎಂದು ಚರ್ಚೆಯಾಗುತ್ತಿದೆ.

**ತಜ್ಞರ ತಂಡದಿಂದ ತುಂಗಭದ್ರಾ ಡ್ಯಾಂ ಪರಿಶೀಲನೆ:** ತುಂಗಭದ್ರಾ ಜಲಾಶಯದ ತಾಂತ್ರಿಕ ತಜ್ಞರ ತಂಡ ಈಗಾಗಲೇ ಎರಡು ಬಾರಿ ಡ್ಯಾಂಗೆ ಭೇಟಿ ನೀಡಿ ಪರಿಶೀಲಿಸಿದೆ. ಕೇಂದ್ರ ಜಲಶಕ್ತಿ ಆಯೋಗದ ಅಧಿಕಾರಿಗಳ ತಂಡ ಕೂಡಾ ಕಳೆದ ವಾರ ಜಲಾಶಯಕ್ಕೆ ಭೇಟಿ ನೀಡಿ ಸ್ಥಿತಿಗತಿ ಅಧ್ಯಯನ ಮಾಡಿದೆ. ಈ ಬಗ್ಗೆ ತುಂಗಭದ್ರಾ ಜಲಾಶಯ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ್ ತಂಗಡಗಿ ಮಾಹಿತಿ ನೀಡಿದ್ದಾರೆ.

ಜಲಾಶಯ ನಿರ್ವಹಣೆ ಮಾಡುವುದು ಹೈದರಾಬಾದ್ ನಲ್ಲಿರುವ ತುಂಗಭದ್ರಾ ಜಲಾಶಯ ಮಂಡಳಿ. ಹೀಗಾಗಿ ರಾಜ್ಯ ಸರ್ಕಾರಕ್ಕೆ ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳುವ ಅಧಿಕಾರವಿಲ್ಲ. ಹೀಗಾಗಿ ಮಂಡಳಿ ಗೇಟ್ ಬದಲಾವಣೆ ಮಾಡುವುದಾದರೆ ನಮ್ಮ ಪಾಲಿನ ಹಣವನ್ನು ನೀಡಲು ಸಿದ್ಧ ಎಂದು ತುಂಗಭದ್ರಾ ಜಲಾಶಯ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ.

ಬೇಸಿಗೆ ಸಮಯದಲ್ಲಿ ಹೊಸ ಗೇಟ್‌ಗಳ ಅಳವಡಿಕೆ ಕಾರ್ಯ ಆರಂಭಿಸಲು ಬೇಕಾದ ಸಿದ್ಧತೆಯನ್ನು ಈಗಿನಿಂದಲೇ ಆರಂಭಿಸಬೇಕಿದೆ. 33 ಗೇಟ್‌ಗಳ ಅಳವಡಿಕೆಗೆ ಸಾಕಷ್ಟು ಸಮಯ ಬೇಕಾಗಿರುವುದರಿಂದ ಈಗಲೇ ಸೂಕ್ತ ನಿರ್ಧಾರ ಕೈಗೊಳ್ಳಬೇಕಿದೆ.

## ಪ್ರಾಣ ಉಳಿಲಿಲ್ಲ

ಸೋಮವಾರ ಮಧ್ಯಾಹ್ನ 3 ಗಂಟೆ ಸುಮಾರಿಗೆ ಕಾಲಿಖಾಡ್ ಗ್ರಾಮದ ಗದ್ದೆಯಲ್ಲಿ ಆಟವಾಡುತ್ತಿದ್ದ ಬಾಲಕ ಬೋರ್‌ವೆಲ್ ಗೆ ಬಿದ್ದಿದ್ದ. ಒಂದು ಗಂಟೆಯ ನಂತರ ರಕ್ಷಣಾ ಕಾರ್ಯಾಚರಣೆ ಆರಂಭವಾಯಿತು. ಮಗುವನ್ನು ತಲುಪಲು ಡ್ರಿಲ್ಲಿಂಗ್ ಯಂತ್ರಗಳನ್ನು ಬಳಸಿ ಸಮಾನಾಂತರ ಹೊಂಡವನ್ನು ತೆಗೆಯಲಾಯಿತು.

ರಕ್ಷಣಾ ಕಾರ್ಯಗಳ ಕುರಿತು ಮಾಹಿತಿ ನೀಡಿದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಅಸಂಖ್ಯಾತ ಸವಾಲುಗಳಿವೆ ಎಂದು ಹೇಳಿದ್ದರು ನೀರಿನ ಮಟ್ಟ ಸುಮಾರು 160 ಅಡಿ ಎಂದು ಅಂದಾಜಿಸಲಾಗಿದೆ.

ಕಾರ್ಯಾಚರಣೆ ಸಂದರ್ಭದಲ್ಲಿ ಯಂತ್ರವು ಕೆಟ್ಟು ಹೋಗಿ ಹೊಸ ಯಂತ್ರವನ್ನು ತರಿಸಲಾಗಿತ್ತು. ಈ ವರ್ಷದ ಆರಂಭದಲ್ಲಿ ಸೆಪ್ಟೆಂಬರ್‌ನಲ್ಲಿ, ದೌಸಾದ ಬಂಡಿಕುಯಿ ಪ್ರದೇಶದಲ್ಲಿ 35 ಅಡಿ ತೆರೆದ ಬೋರ್‌ವೆಲ್‌ನಿಂದ ಎರಡು ವರ್ಷದ ಬಾಲಕಿಯನ್ನು ಎನ್ ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ 18 ಗಂಟೆಗಳ ರಕ್ಷಣಾ ಕಾರ್ಯಾಚರಣೆಯ ನಂತರ ರಕ್ಷಿಸಲಾಗಿತ್ತು.ಬಾಲಕಿ 28 ಅಡಿ ಆಳದಲ್ಲಿ ಸಿಲುಕಿಕೊಂಡಿದ್ದಳು.

## ಬದುಕು

ಆಸ್ಪತ್ರೆ ಬೆಡ್ ಮೇಲೆ ಕಣ್ಣೀರಿಡ್ತಿರೋ ಈಕೆ ಆ ವೈದ್ಯನ ಪತ್ನಿ.. ಈತನೇ ವೈದ್ಯ, ಆಕೆ ಗಂಡ ರವಿಕುಮಾರ್.. ಅಂದಹಾಗೇ, ಈಕೆ ಹೆಸ್ರು ವಿನುತಾ ರಾಣಿ. ವಯಸ್ಸು ಹತ್ರತ್ರ 45. ಚಿಕ್ಕಮಗಳೂರು ನಗರದ ದೋಣಿಕಣ ನಿವಾಸಿ. 22 ವರ್ಷದ ಹಿಂದೆ ಡಾ.ರವಿಕುಮಾರ್ ಜೊತೆ ಮದುವೆ ಮಾಡಿಕೊಟ್ಟಿದ್ರು.. ಎಂಬಿಬಿಎಸ್ ಓದುತ್ತಿರೋ ಮಗನೂ ಇದ್ದಾನೆ. ಆದ್ರೆ, 4 ವರ್ಷದಿಂದ ಪತ್ನಿಗೆ ಮಾನಸಿಕ ಕಿರುಕುಳ ನೀಡ್ತಿರೋ ಪತಿಯಿಂದ ಈಕೆಗೆ ಗೃಹಬಂಧನದಲ್ಲಿಟ್ಟಿದ್ದಾರೆ.

ಮನೆಯ ಮೇಲಿನ ಮಹಡಿಯ ರೂಮಿನಲ್ಲೇ ಇರಬೇಕು. ಕೆಳಗೆ ಇಳಿಯುವಂತಿಲ್ಲ, ಕೆಳಗೆ ಬಂದರೂ ಮನೆ ಕೆಲಸ ಮಾಡಿ ಮತ್ತೆ ಮೇಲೆ ಹೋಗಬೇಕು. ಕೂರೋಕೆ ಒಂದು ಚೇರ್ ಕೊಟ್ಟಿದ್ದಾರೆ ಅಷ್ಟೇ. ಊಟ ಅವರು ಹಾಕಿದಾಗ. ಹಾಕಿದಷ್ಟು ಅಷ್ಟೇ. ಗಂಡ ಹಾಗೂ ಅತ್ತೆ ಊರಿಗೆ ಹೋದರೆ ಈಕೆಗೆ ಅವರು ಬರುವಷ್ಟು ದಿನ ಗೃಹ ದಿಗ್ಬಂದನ.. ಮನೆಯಿಂದ ಆಚೆ ಬರುವಂತಿಲ್ಲ. ಅವರು ಹೋಗುವಾಗ 20 ರೂಪಾಯಿ ಕೊಟ್ಟು ಹೋಗ್ತಾರೆ. ಅವರು ಬರುವಷ್ಟು ದಿನ ಮನೆಯಿಂದ ಹೊರ ಹೋಗದಂತೆ ಅದೇ 20 ರೂಪಾಯಿಯಲ್ಲಿ ಬದುಕಬೇಕು.. ಎಕ್ಸ್ ಪಾರ್ಟ್ ಡಿವೋರ್ಸ್ ಕೊಟ್ಟಿದ್ದೇನೆ ಎಂದು 4 ವರ್ಷದಿಂದ ಅನ್ನ-ಆಹಾರ ನೀಡದೆ ಗೃಹಬಂಧನದಲ್ಲಿಟ್ಟಿದ್ದಾನೆ ಅಂತ ವೈದ್ಯನ ಪತ್ನಿ ವಿನುತಾ ರಾಣಿ, ಆಕೆ ಸಹೋದರ ಆರೋಪಿಸಿದ್ದಾರೆ.

ಮನೆಯಲ್ಲೇ ದಿಗ್ಬಂದನ ಹಾಕಿರೋ ಡಾಕ್ಟ್ರು ಈಕೆಗೆ ಮೊಬೈಲ್ ಕೊಟ್ಟಿದ್ದಾರೆ. ಯೂಟ್ಯೂಬ್ ನೋಡೋದು ಬಿಟ್ಟು ಬೇರೇನೂ ಮಾಡಲು ಆಗಲ್ಲ. ದಿನಕ್ಕೆ ಒಂದು ಅಥವಾ ಎರಡು ಹೊತ್ತು ಊಟ ಕೊಡ್ತಾರೆ. ಅದು ಅವರು ಕೊಟ್ಟಷ್ಟು ಮಾತ್ರ ತಿನ್ನಬೇಕು. ಜಾಸ್ತಿ ಕೇಳಿದರೆ ಹೊಡೆಯೋದು, ತಲೆಯನ್ನ ಗೋಡೆಗೆ ಗುದ್ದೋದು, ಎದೆಗೆ ಕಾಲಲ್ಲಿ ಒದೆಯೋದು ಮಾಡ್ತಾರಂತೆ. ಕುತ್ತಿಗೆ ಹಿಸುಕಿ ಸಾಯಿ-ಸಾಯಿ ಎಂದು ಡಾಕ್ಟ್ರು ಹಾಗೂ ಆತನ ಅಮ್ಮ ಹೊಡೆಯುತ್ತಾರಂತೆ. ಊಟದಲ್ಲಿ ಸ್ಲೋ ಪಾಯಿಸನ್ ಹಾಕಿ ಮಾನಸಿಕವಾಗಿ ಕುಗ್ಗುವಂತೆ ಮಾಡಿದ್ದಾರೆ ಎಂದು ವಿನೂತರಾಣಿ ಸಹೋದರ ವಾಗೀಶ್ ಆರೋಪಿಸಿದ್ದಾರೆ.

ಒಟ್ಟಾರೆ, ಸಪ್ತಪದಿ ತುಳಿದು ವರ್ಷಗಟ್ಟಲೇ ಸಂಸಾರದ ಮಾಡಿದ ವೈದ್ಯ ನಾಲ್ಕೇ ವರ್ಷಕ್ಕೆ ಸಾವಿನ ನರಕ ತೋರಿಸಿದ್ದಾನೆ. ಅತ್ತ ತಾಯಿ ಅಂತ ತಿಳಿದು ಗಂಡನ ಮನೆಗೆ ಬಂದಿದ್ದ ಅತ್ತೆ ಕೂಡ ಎಂದು ಅಮ್ಮನಾಗಲೇ ಇಲ್ಲ. ಇದ್ದೊಬ್ಬ ಮಗನೂ ಕೂಡ ಅಮ್ಮನ ಸಾವು ಬಯಸುತ್ತಿದ್ದಾನೆ ಅಂದ್ರೆ, ಆಧುನಿಕ ಪ್ರಪಂಚದಲ್ಲಿ ಹಣ, ಅಧಿಕಾರ, ವಯಸ್ಸಿಗಷ್ಟೆ ಬೆಲೆಯೇ ಎಂಬ ಪ್ರಶ್ನೆ ಸಹಜ.

## ಹತ್ಯೆ

ಹತ್ಯೆಗೈದ ಆರೋಪಿಯನ್ನು ಕುನು ಕಿಸಾನ್ ಎಂದು ಗುರುತಿಸಲಾಗಿದೆ. ಆರೋಪಿ ಕಳೆದ ವರ್ಷ ಆಗಸ್ಟ್‌ನಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ್ದ. ಆತನ ವಿರುದ್ಧ ಧರೂದಿಹಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಬಳಿಕ ಆತನನ್ನು ಬಂಧಿಸಲಾಗಿತ್ತು. ಆತ ಜಾಮೀನಿನ ಮೇಲೆ ಹೊರಗೆ ಬಂದು ಸಂತ್ರಸ್ತೆಯನ್ನು ಹತ್ಯೆಗೈದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಾಲಕಿ ಸುಂದರ್‌ಗಢ್ ಜಿಲ್ಲೆಯವಳಾಗಿದ್ದು, ಜರ್ಸುಗುಡಾ ಪಟ್ಟಣದಲ್ಲಿ ತನ್ನ ಚಿಕ್ಕಮ್ಮನ ಮನೆಯಲ್ಲಿ ನೆಲೆಸಿದ್ದಳು. ಡಿಸೆಂಬರ್ 7 ರಂದು ಬಾಲಕಿಯ ಕುಟುಂಬದಿಂದ ಆಕೆ ಕಾಣೆಯಾದ ಬಗ್ಗೆ ದೂರು ದಾಖಲಾಗಿತ್ತು. ಸಿಸಿಟಿವಿ ದೃಶ್ಯಾವಳಿ ಪರಿಶೀಲಿಸಿದ್ದ ಪೊಲೀಸರು, ಬಾಲಕಿ ಇಬ್ಬರು ವ್ಯಕ್ತಿಗಳೊಂದಿಗೆ ಬೈಕ್‌ನಲ್ಲಿ ತೆರಳಿದ್ದನ್ನು ಪತ್ತೆ ಹಚ್ಚಿದ್ದರು. ಅವರು ಹೆಲ್ಮೆಟ್ ಧರಿಸಿದ್ದರಿಂದ ಅವರ ಗುರುತು ಪತ್ತೆಯಾಗಿಲ್ಲ. ಈ ಬಗ್ಗೆ ಕುನು ಕಿಸಾನ್‌ನನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸಿದಾಗ ಕೊಲೆ ಮಾಡಿ ದೇಹವನ್ನು ತುಂಡು ತುಂಡಾಗಿ ಕತ್ತರಿಸಿ ನದಿಗೆ ಎಸೆದಿರುವುದಾಗಿ ಒಪ್ಪಿಕೊಂಡಿದ್ದಾನೆ.

ಆರೋಪಿಗಳು ರೂರ್ಕೆಲಾ ಮತ್ತು ದಿಯೋಗರ್‌ನ್ನು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ 143ರಲ್ಲಿ ಚಾಕುವಿನಿಂದ ಸಂತ್ರಸ್ತೆಯ ಕತ್ತು ಸೀಳಿ, ಆಕೆಯ ದೇಹದ ಭಾಗಗಳನ್ನು ಬ್ರಹ್ಮಣಿ ನದಿಯ ತಾರ್ಕೆರಾ ನಲಿ ಮತ್ತು ಬಲುಘಾಟ್‌ನಲ್ಲಿ ಎಸೆದಿದ್ದಾರೆ ಎಂದು ತನಿಖೆ ವೇಳೆ ತಿಳಿದು ಬಂದಿದೆ.

ಒಡಿಶಾ ವಿಪತ್ತು ಕ್ಷಿಪ್ರ ಕಾರ್ಯಾಚರಣೆ ಪಡೆ ಸಹಾಯದಿಂದ ಪೊಲೀಸರು ಬ್ರಹ್ಮಣಿ ನದಿಯಲ್ಲಿ ದೇಹದ ಭಾಗಗಳನ್ನು ಪತ್ತೆಹಚ್ಚಲು ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ಗಂಟೆಗಳ ಕಾಲ ಶೋಧ ಕಾರ್ಯಾಚರಣೆಯ ನಂತರ ಬಾಲಕಿಯ ತಲೆ ಸೇರಿದಂತೆ ದೇಹದ ವಿವಿಧ ಭಾಗಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

## ವಿದ್ಯಾರ್ಥಿನಿಯರ ಸಾವು ಕೇಸ್: ಮುಖ್ಯ ಶಿಕ್ಷಕರು ಸೇರಿ 7 ಮಂದಿ ವಶಕ್ಕೆ

**ಕಾರವಾರ:** ಮುರುಡೇಶ್ವರದಲ್ಲಿ ನೀರು ಪಾಲಾಗಿ ನಾಲ್ವರು ವಿದ್ಯಾರ್ಥಿಯರು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ 7 ಶಿಕ್ಷಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಕೋಲಾರದಿಂದ ಮುರುಡೇಶ್ವರಕ್ಕೆ ಪ್ರವಾಸ ತೆರಳಿದ್ದವರ ಪೈಕಿ ನಾಲ್ಕು ಜನ ವಿದ್ಯಾರ್ಥಿನಿಯರು ನೀರು ಪಾಲಾದ ಬಳಿಕ ಉತ್ತರ ಕನ್ನಡ ಜಿಲ್ಲಾಡಳಿತ ಎಚ್ಚೆತ್ತುಕೊಂಡಿದೆ. ಒಂದೆಡೆ ಮುರುಡೇಶ್ವರ ಕಡಲ ತೀರದಲ್ಲಿ ನಿರ್ಬಂಧ ಹೇರಲಾಗಿದ್ದು, ಇನ್ನೊಂದೆಡೆ ಮುಖ್ಯ ಶಿಕ್ಷಕಿ ಸೇರಿ ಒಟ್ಟು 7 ಶಿಕ್ಷಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಶಿಕ್ಷಕರ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ನಾಲ್ಕು ವಿದ್ಯಾರ್ಥಿನಿಯರ ಸಾವಿಗೆ ಕಾರಣ, ನಿರ್ಲಕ್ಷ್ಯ ಕುರಿತು ತನಿಖೆ ಕೈಗೊಂಡಿದ್ದಾರೆ.

ಈ ಮಧ್ಯೆ ಪ್ರವಾಸಿಗರಿಗೆ ಜಿಲ್ಲಾಡಳಿತ ಕಡಲ ತೀರಕ್ಕೆ ನಿರ್ಬಂಧ ಹೇರಿದೆ. ಇದೀಗ ಮುರುಡೇಶ್ವರ ಬಿಟ್ಟಿರುವ ಪಾರ್ಥಿವ ಶರೀರಗಳು ಇಂದು (ಡಿ.12) ಕೋಲಾರ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ತಲುಪಲಿದೆ. ಬಳಿಕ ಜಿಲ್ಲಾಡಳಿತದ ವತಿಯಿಂದ ಅಂತಿಮ ನಮನ ಸಲ್ಲಿಸಿ, ನಂತರ ಅವರವರ ಕುಟುಂಬಗಳಿಗೆ ಮೃತದೇಹಗಳನ್ನು ಹಸ್ತಾಂತರಿಸಲಾಗುತ್ತದೆ.

**ಘಟನೆ ಏನು?:** ಕೋಲಾರದ ಮುಳಬಾಗಿಲು ತಾಲೂಕಿನ ಕೊತ್ತೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಪ್ರವಾಸಕ್ಕೆ ತೆರಳಿದ್ದರು. ಈ ವೇಳೆ ಮುರುಡೇಶ್ವರ ಕಡಲ ತೀರದಲ್ಲಿ ಆಟ ಆಡುವಾಗ ಶಾಲೆಯ 7 ವಿದ್ಯಾರ್ಥಿನಿಯರು ನೀರು ಪಾಲಾಗಿದ್ದರು. 7 ವಿದ್ಯಾರ್ಥಿನಿಯರ ಪೈಕಿ 4 ವಿದ್ಯಾರ್ಥಿನಿಯರು ಸಾವನ್ನಪ್ಪಿದ್ದರು.

# ಫಲಾಪೇಕ್ಷೆ ಇಲ್ಲದ ಸೇವೆಗೆ ಮತ್ತೊಂದು ಹೆಸರೇ ಗೃಹರಕ್ಷಕರು

**ಪಿರಿಯಾಪಟ್ಟಣ:** ಯಾವುದೇ ಫಲಾಪೇಕ್ಷೆ ಬಯಸದೆ ಪೊಲೀಸ್ ಇಲಾಖೆ ಜೊತೆಜೊತೆಗೆ ನಾಗರೀಕ ಸಮಾಜದ ರಕ್ಷಣೆ ಮಾಡುತ್ತಿರುವ ಗೃಹರಕ್ಷಕರು ನಿಜವಾದ ಸಮಾಜ ಸೇವಕರು ಎಂದು ತಹಶೀಲ್ದಾರ್ ನಿಸರ್ಗ ಪ್ರಿಯಾ ತಿಳಿಸಿದರು.

ಪಟ್ಟಣದ ಹರವೆ ಮಲ್ಲರಾಜಪಟ್ಟಣದ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಅಖಿಲ ಭಾರತ ಗೃಹರಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಾನೂನು ಮತ್ತು ಶಿಸ್ತುಪಾಲನೆಯಲ್ಲಿ ಪೊಲೀಸ್ ಇಲಾಖೆ ಜೊತೆಗೂಡಿ ಕೆಲಸ ಮಾಡುವ ಗೃಹರಕ್ಷಕ ದಳವು, ಪ್ರಾಕೃತಿಕ ವಿಪತ್ತು ಮತ್ತು ಮಾನವ ನಿರ್ಮಿತ ವಿಷಮ ಪರಿಸ್ಥಿತಿಗಳ ವೇಳೆ ಜೀವ ಹಾಗೂ ಆಸ್ತಿ ಸಂರಕ್ಷಣೆ, ವಿಪತ್ತು ನಿರ್ವಹಣೆ, ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳಲ್ಲಿ ಸಮುದಾಯಕ್ಕೆ ಅಗತ್ಯ ನೆರವು ನೀಡುವ ಮೂಲಕ ನಾಗರಿಕ ಸಮಾಜವನ್ನು ರಕ್ಷಿಸುತ್ತಿದೆ ಎಂದರು.

ನಿವೃತ್ತ ಕುಲಸಚಿವ ಡಾ.ಮಾದೇಶ್ ಮಾತನಾಡಿ ಸಮಾಜದ ಎಲ್ಲಾ ವರ್ಗದ ಜನರಿಗೆ ರಕ್ಷಣೆ ನೀಡುವ ಧ್ಯೇಯದೊಂದಿಗೆ 'ನಿಷ್ಕಾಮ ಸೇವೆಯೇ' ಪರಮಗುರಿ ಎಂಬುದನ್ನು ಗೃಹರಕ್ಷಕರು ಮೈಗೂಡಿಸಿಕೊಂಡಿದ್ದಾರೆ. 2 ನೇ ಮಹಾಯುದ್ಧದ ವೇಳೆ ಹಿಟ್ಲರನ 'ನಾಜಿ' ಸೈನ್ಯಪಡೆಯನ್ನು ಹಿಮ್ಮೆಟ್ಟಿಸಲು, ಪೊಲೀಸ್ ಮತ್ತು ಮಿಲಿಟರಿಗೆ ಪರ್ಯಾಯವಾಗಿ, ದೇಶವನ್ನು ರಕ್ಷಿಸಲು ದೇಶದ ಜನರೇ ಹುಟ್ಟುಹಾಕಿದ ನಾಗರಿಕ ಪಡೆಯನ್ನು 'ಸ್ಥಳೀಯ ರಕ್ಷಣಾ ಸ್ವಯಂ ಸೇವಕರು' ಎಂದು ಕರೆಯಲಾಗುತ್ತಿತ್ತು.



1946ರಲ್ಲಿ ಮಹಾರಾಷ್ಟ್ರದ ಮುಂಬೈನಲ್ಲಿ ಗೃಹರಕ್ಷಕ ದಳ ಅಸ್ತಿತ್ವಕ್ಕೆ ಬಂದು, ನೌಕಾದಳ, ವಾಯುಪಡೆ ಮತ್ತು ಭೂಸೇನೆಯ ಜೊತೆಗೆ ಜನರಿಗೆ ಮತ್ತು ದೇಶಕ್ಕೆ ತುರ್ತು ಸಂದರ್ಭಗಳಲ್ಲಿ ರಕ್ಷಣೆ ನೀಡಲೆಂದು ಪೌರರಕ್ಷಣೆ ಮತ್ತು ಗೃಹರಕ್ಷಕ ದಳ ಎಂಬುದಾಗಿ ಇದು ಡಿಸೆಂಬರ್ 6 ರಂದು ಅಸ್ತಿತ್ವಕ್ಕೆ ಬಂತು. ಮೊರಾರ್ಜಿ ದೇಸಾಯಿಯವರು ಪ್ರಧಾನಿಯಾಗಿದ್ದಾಗ ಗೃಹರಕ್ಷಕ ದಳದ ಕಾಯ್ದೆ-ಕಾನೂನುಗಳನ್ನು ಗೃಹಸಚಿವಾಲಯದ ಅಡಿಯಲ್ಲಿ ತರಲಾಯಿತು, ಮತೀಯ ಗಲಭೆ, ಹಿಂಸಾಚಾರಗಳ ವೇಳೆ ಜನರಿಗೆ ರಕ್ಷಣೆಯೊದಗಿಸಲು ನಿಯೋಜಿಸಲಾಗಿತ್ತು. ನಂತರ ಈ ಪಡೆಯನ್ನು ದೇಶದ ಬೇರೆ ರಾಜ್ಯಗಳಲ್ಲೂ ಆರಂಭಿಸಲಾಯಿತು.

1962 ರ ಭಾರತ-ಚೀನಾ ಯುದ್ಧದ ವೇಳೆ ಈ ಪಡೆಯನ್ನು ರಕ್ಷಣಾ ಕಾರ್ಯಕ್ಕೆ ಬಳಸಲೆಂದು, ಕೇಂದ್ರ ಸರಕಾರವು ಎಲ್ಲಾ ರಾಜ್ಯ ಸರಕಾರ ಮತ್ತು ಕೇಂದ್ರಾಡಳಿತ ಪ್ರದೇಶಗಳ ಸ್ವಯಂಸೇವಕರ ತಂಡಗಳಿಗೆ 'ಗೃಹರಕ್ಷಕ ದಳ' ಎಂಬ ಮಾನ್ಯತೆಯೊಂದಿಗೆ ಖಾಕಿ ಸಮವಸ್ತ್ರವನ್ನು ನೀಡಿತು ಎಂದರು.

ಗೃಹರಕ್ಷಕ ದಳದ ಜಿಲ್ಲಾ ಕಮಾಂಡೆಂಟ್ ಡಾ.ಎಂ. ಕಾಂತರಾಜ್ ಮಾತನಾಡಿ ಕಾನೂನು ಮತ್ತು ಶಿಸ್ತುಪಾಲನೆಯಲ್ಲಿ ಪೊಲೀಸ್ ಇಲಾಖೆಗೆ ಪೂರಕಪಡೆಯಾಗಿ ಕೆಲಸ ಮಾಡುವ ಗೃಹರಕ್ಷಕ ದಳವು, ಪ್ರಾಕೃತಿಕ ವಿಪತ್ತು ಮತ್ತು ಮಾನವ ನಿರ್ಮಿತ ವಿಷಮ ಪರಿಸ್ಥಿತಿಗಳ ವೇಳೆ ಜೀವ ಹಾಗೂ ಆಸ್ತಿ ಸಂರಕ್ಷಣೆ, ವಿಪತ್ತು ನಿರ್ವಹಣೆ, ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳಲ್ಲಿ ಸಮುದಾಯಕ್ಕೆ ಅಗತ್ಯ ನೆರವು ನೀಡುತ್ತದೆ. ಅಗ್ನಿ ಅವಘಡ, ವೈಮಾನಿಕ ದಾಳಿ, ಸುನಾಮಿ, ಭೂಕಂಪಗಳಾದಾಗ, ಸಾಂಕ್ರಾಮಿಕ ರೋಗಗಳು ಉಲ್ಬಣಗೊಂಡಾಗ ಸಾಮಾಜಿಕ ಸುವ್ಯವಸ್ಥೆ-ಶಾಂತಿ- ನೆಮ್ಮದಿಯ ಮರುಸ್ಥಾಪನೆಗೆಗಾಗಿ ಕಾರ್ಯನಿರ್ವಹಿಸುತ್ತಿದ್ದು, ಸಮಾಜಸೇವೆಯ ಧ್ಯೇಯವನ್ನು ಹೊಂದಿರುವ ಎಲ್ಲರೂ ಗೃಹರಕ್ಷಕ ದಳವನ್ನು ಸೇರಬಹುವುದು ಎಂದರು.

ಕಾರ್ಯಕ್ರಮದಲ್ಲಿ ಗೃಹರಕ್ಷಕ ದಳದಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿರಿಯಾಪಟ್ಟಣದ ಎಸ್.ಕೆ.ಮಹದೇವಸ್ವಾಮಿ, ಕೆ.ಆರ್.ನಗರದ ಸಿದ್ದಯ್ಯ, ಹುಣಸೂರಿನ ಸಿದ್ದಲಿಂಗಪ್ಪ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಹಾಯಕ ಆಡಳಿತಾಧಿಕಾರಿ ಮಲ್ಲಿಕಾರ್ಜುನ್ ಎಂ.ನಯಕ್ವಾಡ್, ಜಿಲ್ಲಾ ಬೋಧಕ ಎಂ.ಆರ್. ಚಂದನ್, ಸಹಾಯಕ ಬೋಧಕ ಎಂ.ಮಂಜುನಾಥ್, ಬ್ಯಾಂಡ್ ಮಾಸ್ಟರ್ ಎಂ.ಸಿ.ವಸಂತಕುಮಾರ್, ಜಿಲ್ಲಾ ಸಸಸ್ರಪಡೆ ಕಮಾಂಡೆಂಟ್ ಎಂ.ಬಾಬುರಾವ್, ಪಿರಿಯಾಪಟ್ಟಣದ ಪಿಎಲ್ಸಿ ರೇವಣ್ಣ, ಹುಣಸೂರಿನ ಪಿಎಲ್ಸಿ ಸಂಪತ್ ಕುಮಾರ್, ಗೃಹರಕ್ಷಕ ದಳದ ಪದಾಧಿಕಾರಿಗಳಾದ ಎಂ.ಶಿಲ್ಪಾ, ಎಸ್.ವಿದ್ಯಾ, ಶೃತಿ ಶೆಣೈ, ಯೋಗೇಶ್, ನಾಗರಾಜ್, ಅಪ್ಪಾಜಿ ಚಾರಿ, ಸ್ವಾಮಿ, ಮಂಜು, ವಿಜಯ್, ಜಗದೀಶ್, ರಾಮಯ್ಯ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕೃಷಿ ಅಭಿವೃದ್ಧಿಗೆ ಹಲವು ಆಯಾಮಗಳು

**ಹುಳಿಯಾರು:** ಕೃಷಿಯ ಅಭಿವೃದ್ಧಿ ಒಂದೇ ಆಯಾಮವನ್ನು ಒಳಗೊಂಡಿರುವುದಲ್ಲ, ಅನೇಕ ಆಯಾಮಗಳನ್ನು ಒಳಗೊಂಡಿದೆ ಎಂದು ಮಾಸ್ ಟ್ರಸ್ಟ್ ಕಾರ್ಯದರ್ಶಿ ರಾಮಕೃಷ್ಣಪ್ಪ ಹೇಳಿದರು.

ಹುಳಿಯಾರು ಸಮೀಪದ ದೊಡ್ಡಬಿದರೆ ಗ್ರಾಮ ಪಂಚಾಯತಿಯಲ್ಲಿ ಮಂಗಳವಾರ ನಡೆದ ರೈತರ ಸಭೆಯಲ್ಲಿ ಉದಾಹರಣೆ ಸಹಿತ ವಿವಾರಿಸಿದರು.

ಕೃಷಿ ಅಭಿವೃದ್ಧಿಗೆ ವಾತಾವರಣದ ತಾಪಮಾನ, ಮಣ್ಣಿನ ಫಲವತ್ತತೆ, ನೀರಿನ ಲಭ್ಯತೆ, ಬೆಳಗಳ ಆರೋಗ್ಯ, ಬೆಳೆಗಳ ಜೊತೆಗೂಡಿರುವ ಜೀವಜಾಲ ಮತ್ತು ಜನರ ಆರೋಗ್ಯವನ್ನು ಪರಿಶೀಲಸಬೇಕಾಗುತ್ತದೆ ಎಂದು ವಿವರಿಸಿದರು. ಗಾಂಧಿ ಬೇಸಾಯ ಆಶ್ರಮದ ಕೃಷಿ ವಿಜ್ಞಾನಿ ಎಚ್ ಮಂಜುನಾಥ್ ರೂಪಿಸಿರುವ ಮತ್ತು ಲಂಚ ಮುಕ್ತ ಸಂಘಟನೆಯ ಮಲ್ಲಿಕಾರ್ಜುನ್ ಪ್ರಯತ್ನದಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿಗೆ ಬಂದಿರುವ ರೈತರ ಪರ ಯೋಜನೆ ಸಹಜ ಬೇಸಾಯ. ತಮ್ಮ ಗ್ರಾಮ ಪಂಚಾಯ್ತಿಯಲ್ಲಿ ನೊಂದಾಯಿಸಿ ಇದರ ಪ್ರಯೋಜನ ಪಡೆದುಕೊಳ್ಳಿ ಎಂದು ಮಾಸ್ ಟ್ರಸ್ಟ್ ಅಧ್ಯಕ್ಷೆ ಎನ್ ಇಂದಿರಮ್ಮ ರೈತರಿಗೆ ತಿಳಿಸಿದರು.

ತೋಟಗಾರಿಕೆ ಇಲಾಖೆಯ ತಂತ್ರಜ್ಞೆ ರೀತು ಯೋಜನೆಗೆ ಸೇರಿಕೊಳ್ಳಬೇಕಾದರೆ ಅಗತ್ಯ ದಾಖಲಾತಿಗಳ ಬಗ್ಗೆ ವಿವರಿಸಿದ್ದರು. ಸಭೆಯಲ್ಲಿ ಪಿಡಿಓ ನಾಗೇಶ್, ನರೇಗಾ ಯೋಜನೆಯ ತಂತ್ರಜ್ಞ ಪ್ರಕಾಶ್, ಪಂಚಾಯಿತಿ ಸಿಬ್ಬಂದಿ ರೈತರು ಮತ್ತು ರೈತ ಮಹಿಳೆಯರು ಉಪಸ್ಥಿತರಿದ್ದರು.



## 13, 14 ಹನುಮ ಜಯಂತಿ ಮಹೋತ್ಸವ

**ಹುಳಿಯಾರು:** ಹುಳಿಯಾರಿನ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ 16 ನೇ ವರ್ಷದ ವೈಭವದ ಹನುಮ ಜಯಂತಿ ಮಹೋತ್ಸವದ ಅಂಗವಾಗಿ ಡಿ.13 ರಂದು ಮಹಾರಥೋತ್ಸವ ಹಾಗೂ ಡಿ.14 ರಂದು ಸಂಜೆ ಸ್ವಾಮಿಯವರ ರಾಜಬೀದಿ ಉತ್ಸವ ಹಮ್ಮಿಕೊಳ್ಳಲಾಗಿದೆ. ಡಿ.13 ರ ಶುಕ್ರವಾರ ಬೆಳಗ್ಗೆ 6 ಗಂಟೆಗೆ ಗ್ರಾಮ ದೇವತೆಗಳಾದ ಶ್ರೀ ದುರ್ಗಾಪರಮೇಶ್ವರಿ ಹಾಗೂ ಹುಳಿಯಾರಮ್ಮನವರ ಆಗಮನ, ರಾಮಚಂದ್ರ ಭಟ್ಟರ ಪೌರೋಹಿತ್ಯದಲ್ಲಿ ಪವಮಾನ ಹೋಮ, 10 ಗಂಟೆಗೆ ಮಹಾಮಂಗಳಾರತಿ, 11 ಗಂಟೆಗೆ ಮಹಾರಥೋತ್ಸವ, ಮಧ್ಯಾಹ್ನ 1 ಗಂಟೆಗೆ ಅನ್ನಸಂಪರ್ಪಣೆ ಜರುಗಲಿದೆ. ಡಿ.14 ರ ಸೋಮವಾರ ಸಂಜೆ ಸ್ವಾಮಿಯವರ ವೈಭವದ ರಾಜಬೀದಿ ಉತ್ಸವ ನಡೆಯಲಿದೆ. ವೀರಗಾಸೆ, ಡೊಳ್ಳು ಕುಣಿತ, ತುಮಕೂರಿನ ನ್ಯೂ 7 ಬ್ರದರ್ಸ್ ಕಲಾತಂಡದಿಂದ ಬೊಂಬೆ ಬಳಗ ಕೀಲು ಕುದುರೆ, ಮಾಗಡಿ ನಾಗರಾಜು ಮತ್ತು ಕಲಾತಂಡದಿಂದ ಹುಲಿ ವೇಷ ಪಾಳೇಗಾರ, ತುಮಕೂರಿನ ವೀರೇಶ್ ಕಲಾತಂಡದಿಂದ ಭದ್ರಕಾಳಿ ಸಮೇತ ವೀರಭದ್ರನ ಕುಣಿತ ಬೊಂಬೆ ಬಳಗ ಹಾಗೂ ಡಿಜೆ ವಾದ್ಯ ಸಂಗೀತ ಉತ್ಸವಕ್ಕೆ ಮೆರಗು ತುಂಬಲಿದೆ. ರಥೋತ್ಸವ ಹಾಗೂ ಉತ್ಸವದ ಸಮಯದಲ್ಲಿ ದೇವಸ್ಥಾನದಿಂದ ಪ್ರಾರಂಭವಾಗಿ ರಾಜಬೀದಿಯ ಹತ್ತಕ್ಕೂ ಹೆಚ್ಚು ಸ್ಥಳಗಳಲ್ಲಿ ಸ್ವಾಮಿಯ ಸೇವಾಕರ್ತರುಗಳಿಂದ ಲಘು ಉಪಹಾರದ ವ್ಯವಸ್ಥೆ ನಡೆಯಲಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕಾಗಿ ದೇವಸ್ಥಾನ ಸಮಿತಿಯವರು ಕೋರಿದ್ದಾರೆ.

### ಪಾರ್ಥಿವ ಶರೀರದ ದರ್ಶನ ಪಡೆದ ಸಿದ್ದರಾಮಯ್ಯ

# ಜಯಣ್ಣಗೆ ಸಿಎಂ ಗೌರವ ನಮನ

**ಚಾಮರಾಜನಗರ:** ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕೊಳ್ಳೇಗಾಲ ಪಟ್ಟಣಕ್ಕೆ ಇಂದು ಭೇಟಿ ನೀಡಿ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ದಿವಂಗತ ಎಸ್. ಜಯಣ್ಣ ಅವರ ಪಾರ್ಥಿವ ಶರೀರದ ದರ್ಶನ ಪಡೆದು ಅಂತಿಮ ಗೌರವ ಸಲ್ಲಿಸಿದರು.

ಕೊಳ್ಳೇಗಾಲ ಪಟ್ಟಣದ ಎಂ.ಜಿ.ಎಸ್ .ವಿ ಕಾಲೇಜು ಮೈದಾನದ ಹೆಲಿಪ್ಯಾಡ್‌ಗೆ ಬಂದಿಳಿದ ಮುಖ್ಯಮಂತ್ರಿಯವರು ಅಲ್ಲಿಂದ ಕಾರಿನಲ್ಲಿ ಕೊಳ್ಳೇಗಾಲ ಪಟ್ಟಣದಲ್ಲಿರುವ ಕೊಳ್ಳೇಗಾಲದ ಪಟ್ಟಣದ ಮಹದೇಶ್ವರ ಕಾಲೇಜು ಬಡಾವಣೆಯಲ್ಲಿರುವ ಎಸ್. ಜಯಣ್ಣ ಅವರ ಅನುಗ್ರಹ ನಿಲಯಕ್ಕೆ ತೆರಳಿ ಅಂತಿಮ ದರ್ಶನ ಪಡೆದರು.

ಎಸ್. ಜಯಣ್ಣ ಅವರ ಪಾರ್ಥಿವ ಶರೀರಕ್ಕೆ ಪುಷ್ಪಗುಚ್ಛವಿರಿಸಿ ಅಂತಿಮ ಗೌರವ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಸಕಲ ಸರ್ಕಾರಿ ಗೌರವ ಸಲ್ಲಿಸಲಾಯಿತು.

ಮುಖ್ಯಮಂತ್ರಿಯವರೊಂದಿಗೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್, ಸಮಾಜ ಕಲ್ಯಾಣ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ, ಲೋಕಸಭಾ ಸದಸ್ಯರಾದ ಸುನಿಲ್ ಬೋಸ್, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಸಿ. ಪುಟ್ಟರಂಗಶೆಟ್ಟಿ, ಎಚ್.ಎಂ. ಗಣೇಶ್ ಪ್ರಸಾದ್, ಡಾ. ಯತೀಂದ್ರ ಸಿದ್ದರಾಮಯ್ಯ, ಎಂ.ಆರ್. ಮಂಜುನಾಥ್, ದರ್ಶನ್ ಧ್ರುವನಾರಾಯಣ, ಡಾ. ಡಿ. ತಿಮ್ಮಯ್ಯ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪಾ ಅಮರ್‌ನಾಥ್, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚುಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಇನ್ನಿತರ ಗಣ್ಯರು ಎಸ್. ಜಯಣ್ಣ ಅವರಿಗೆ ಅಂತಿಮ ಗೌರವ ನಮನ ಸಲ್ಲಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ತಹಶೀಲ್ದಾರ್ ಬಸವರಾಜು, ಇನ್ನಿತರ ಗಣ್ಯರು ಈ



ಸಂದರ್ಭದಲ್ಲಿ ಇದ್ದರು.

ಇದೇ ವೇಳೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಜಯಣ್ಣ ಅವರು ವಿದ್ಯಾರ್ಥಿ ದೆಸೆಯಿಂದಲೂ ನನ್ನ ಜತೆಗೆ ಆತ್ಮೀಯವಾದ ಸಂಬಂಧ ಹೊಂದಿದ್ದರು. ಶಾಸಕರಾದ ಮೇಲೆ ಮತ್ತಷ್ಟು ಹತ್ತಿರವಾದರು. ನಾನು ಯಾವುದೇ ತೀರ್ಮಾನ ತೆಗೆದುಕೊಂಡರೂ ಅದಕ್ಕೆ ಬದ್ಧರಾಗಿರುತ್ತಿದ್ದರು. ರಾಜಕೀಯದಲ್ಲಿ ಬಹಳ ಅಪರೂಪದ ವ್ಯಕ್ತಿ ಹಾಗೂ ಸೌಮ್ಯ ಸ್ವಭಾವದವರಾಗಿದ್ದರು ಎಂದರು.

ಜಯಣ್ಣ ಅವರು ಸಿದ್ಧಾಂತದ ಮೇಲೆ ನಂಬಿಕೆ ಇಟ್ಟವರಾಗಿದ್ದರು. ಯಾವುದೇ ಆಸೆ, ಆಮಿಷಗಳಿಗೆ ಒಳಗಾಗುತ್ತಿರಲಿಲ್ಲ. ಅವರು ನಂಬಿದ್ದ ಸಿದ್ಧಾಂತಗಳಲ್ಲಿ ಬದಲಾವಣೆ ಮಾಡುತ್ತಿರಲಿಲ್ಲ. ಅಜಾತಶತ್ರುವಾಗಿದ್ದ ಜಯಣ್ಣನವರು ಎಲ್ಲರನ್ನು ಪ್ರೀತಿಸುತ್ತಿದ್ದರು. ಎಂದೂ ದ್ವೇಷ ಮಾಡುತ್ತಿರಲಿಲ್ಲ ಎಂದು ಮುಖ್ಯಮಂತ್ರಿಗಳು ಹೇಳಿದರು.

ಸಮಾಜ ಕಲ್ಯಾಣ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ ಅವರು ಮಾತನಾಡಿ ಜಯಣ್ಣ ಅವರು ಅಧಿಕಾರ ಇರಲಿ, ಇಲ್ಲದಿರಲಿ ಒಂದೇ ತರಹ ಇರುತ್ತಿದ್ದರು. ಶಾಂತಚಿತ್ತ ಸ್ವಭಾವ ಅವರದ್ದಾಗಿತ್ತು. ಅಪಾರ ಜನರ ಪ್ರೀತಿ ಗಳಿಸಿದ್ದರು. ಅವರ ಅಗಲಿಕೆಯಿಂದ ವೈಯಕ್ತಿಕವಾಗಿ ಅಪ್ಪನನ್ನು ಕಳೆದುಕೊಂಡಂತಾಗಿದೆ ಎಂದರು.

ಲೋಕಸಭಾ ಸದಸ್ಯರಾದ ಸುನಿಲ್ ಬೋಸ್ ಅವರು ಮಾತನಾಡಿ ಜಯಣ್ಣ ಅವರು ಹಿರಿಯರಾಗಿ ನಮಗೆ ಮಾರ್ಗದರ್ಶನ ಮಾಡುತ್ತಿದ್ದರು. ಮೃದುಭಾಷಿಯಾಗಿದ್ದ ಅವರು ತಾಳ್ಮೆಯ ಗುಣ ಹೊಂದಿದ್ದರು. ಅವರ ಅಗಲಿಕೆ ನಮ್ಮಲ್ಲಿ ಅನಾಥ ಭಾವನೆ ಮೂಡಿಸಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಹೇಳಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಜಯಣ್ಣ ಅವರು ನನ್ನೊಂದಿಗೆ ಬಹಳ ಪ್ರೀತಿ ವಿಶ್ವಾಸದಿಂದಿದ್ದರು. ನನಗೆ ಬೆಂಬಲವಾಗಿ ಇದ್ದವರು. ಅವರ ಅಗಲಿಕೆ ನಮ್ಮೆಲ್ಲರಿಗೂ ನೋವು ಉಂಟುಮಾಡಿದೆ ಎಂದು ಸಂತಾಪ ವ್ಯಕ್ತಪಡಿಸಿದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪಾ ಅಮರ್‌ನಾಥ್ ಅವರು ಮಾತನಾಡಿ ಜಯಣ್ಣ ಅವರು ನೇರ ನಡೆ-ನುಡಿ, ಸಿದ್ಧಾಂತಗಳಿಗೆ ಬದ್ಧರಾಗಿದ್ದರು. ಪ್ರಾಮಾಣಿಕತೆಗೆ ಹೆಸರಾಗಿದ್ದ ಸರಳ ವ್ಯಕ್ತಿತ್ವದವರು. ಅವರನ್ನು ಕಳೆದುಕೊಂಡಿರುವುದು ಸಿದ್ಧಾಂತ ರಾಜಕಾರಣಕ್ಕೆ ತುಂಬಲಾರದ ನಷ್ಟ ಎಂದರು. ಬುಧವಾರ ಸಂಜೆ ಜಯಣ್ಣ ಅವರ ಹುಟ್ಟೂರಾದ ಮಾಬಳ್ಳಿಯಲ್ಲಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿತು.



## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶ್ರದ್ಧಾಂಜಲಿ

**ಚಾಮರಾಜನಗರ:** ಕೊಳ್ಳೇಗಾಲ ಮಾಜಿ ಶಾಸಕ ಎಸ್ ,ಜಯಣ್ಣ ಅವರ ನಿಧನದ ಗೌರವಾರ್ಥ ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಇದೇವೇಳೆ ಕಾಡಾಅಧ್ಯಕ್ಷ, ಜಿಲ್ಲಾಕಾಂಗ್ರೆಸ್ ಸಮಿತಿ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಎಸ್. ಜಯಣ್ಣ ಅವರು 2ಬಾರಿ ಕೊಳ್ಳೇಗಾಲ ಕ್ಷೇತ್ರದ ಶಾಸಕರಾಗಿ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ನೆರವೇರಿಸಿದ್ದಾರೆ. ಅವರು ಸಜ್ಜನರಾಜಕಾರಣಿಯಾಗಿದ್ದರು. ಪಕ್ಷ ಸಂಘಟನೆ ಕುರಿತು ಅನೇಕ ಮಾರ್ಗದರ್ಶನ ನೀಡುತ್ತಿದ್ದರು. ಅವರ ನಿಧನದಿಂದ ಪಕ್ಷ ಹಾಗೂ ಕ್ಷೇತ್ರಕ್ಕೆ ತುಂಬಲಾರದ ನಷ್ಟ ವಾಗಿದೆ ಎಂದರು. ಇದೇವೇಳೆ ಮೃತರ ಗೌರವಾರ್ಥ ಒಂದು ನಿಮಿಷ ಮೌನಾಚರಣೆ ಮಾಡಲಾಯಿತು. ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಚುಡಾಅಧ್ಯಕ್ಷಮಹಮದ್ ಅಸ್ಗರ್, ನಂಜೇದೇವನಪುರ ಗ್ರಾ,ಪಂ ಅಧ್ಯಕ್ಷ ಶೇಖರಪ್ಪ, ನಗ್ರರಸಭೆ ಮಾಜಿಸದಸ್ಯ ಪುಟ್ಟಸ್ವಾಮಿ, ನಾಗರಾಜು, ನಾಗವಳ್ಳಿನಾಗಯ್ಯ, ಕರಿನಂಜನಪುರಸ್ವಾಮಿ, ಬಸವರಾಜು, ಎ.ಎಚ್. ನಸ್ರುಲ್ಲಾಖಾನ್, ಮೋಹನ್‌ನಗು, ವಕೀಲ ನಾಗಾರ್ಜುನ್ (ಪೃಥ್ವಿ),ಪರ್ವಿಜ್ ಪಿಎಸಿಸಿ ನಿರ್ದೇಶಕ ಗುರುಸ್ವಾಮಿ, ಅಪ್ಸರ್ ಅಹಮದ್, ನಾಗಬಸವಣ್ಣ, ಸಿದ್ದರಾಜು ಮುತ್ತುರಾಜು,ಹಾಜರಿದ್ದರು.

## ಕ್ರೀಡಾಪಟುಗಳಿಂದ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ 2023 ನೇ ಕ್ಯಾಲೆಂಡರ್ ವರ್ಷದಲ್ಲಿ (01.01.2023 ರಿಂದ 31.12.2023) ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡುವ ಉದ್ದೇಶದಿಂದ ಜಿಲ್ಲೆಯ ಅರ್ಹ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಡಿಸೆಂಬರ್ 16 ರೊಳಗೆ ಜಿಲ್ಲಾ ಕಚೇರಿಯಲ್ಲಿ ಅರ್ಜಿ ನಮೂನೆಗಳು ಹಾಗೂ ಮಾರ್ಗಸೂಚಿಯನ್ನು ಪಡೆದು ಡಿಸೆಂಬರ್ 20 ಒಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಯಲ್ಲಿ ಸಲ್ಲಿಸಲು ಕೋರಿದೆ ಹಾಗೂ ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಭೇಟಿ ನೀಡುವಂತೆ ಅಥವಾ ದೂರವಾಣಿ ಸಂಖ್ಯೆ: 08156-270054ಗೆ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಸಿರಿಧಾನ್ಯಗಳ ನಡಿಗೆ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಕೃಷಿ ಇಲಾಖೆಯಿಂದ ಸಿರಿಧಾನ್ಯಗಳ ನಡಿಗೆ ಕಾರ್ಯಕ್ರಮವನ್ನು ಡಿಸೆಂಬರ್ 13 ರಂದು ಬೆಳಿಗ್ಗೆ 6 ಗಂಟೆಗೆ ನಗರದ ಸರ್.ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರು, ಇತರೆ ಜನಪ್ರತಿನಿಧಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸುತ್ತಿದ್ದು, ನಗರದ ಪ್ರಮುಖ ಬೀದಿಗಳ ಮುಖಾಂತರ ಸಿರಿಧಾನ್ಯಗಳ ಬಗ್ಗೆ ಹೆಚ್ಚು ಉತ್ತೇಜನ ನೀಡಲು ಮತ್ತು ಪ್ರೋತ್ಸಾಹಿಸಲು ಸಿರಿಧಾನ್ಯಗಳ ನಡಿಗೆ ಕಾರ್ಯಕ್ರಮವನ್ನು ಆಯೋಜಿಸಿದ್ದು, ಇಲಾಖೆಯ ಎಲ್ಲ ಅಧಿಕಾರಿ, ಸಿಬ್ಬಂದಿಯವರೆಲ್ಲರೂ ಡಿಸೆಂಬರ್ 13 ರಂದು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಿರಿಧಾನ್ಯ ನಡಿಗೆ ಕಾರ್ಯಕ್ರಮದ ಮಾರ್ಗ ಸರ್.ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಿಂದ ಪ್ರಾರಂಭವಾಗಿ- ಬಿ.ಬಿ ರಸ್ತೆ -ಶಿಡ್ಲಘಟ್ಟ ವೃತ್ತ - ಗಂಗಮ್ಮಗುಡಿ ವೃತ್ತ (ಗೌರಿಬಿದನೂರು ರಸ್ತೆ) - ಅಂಬೇಡ್ಕರ್ ಭವನ - ಶಿಡ್ಲಘಟ್ಟ ವೃತ್ತ - ಸರ್.ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದ ವರೆಗೆ ಸಾಗಲಿದೆ.

## ಡಿ. 21 ಕ್ಕೆ ದಿಶಾ ಸಭೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ, ಸದಸ್ಯರಾದ ಡಾ. ಕೆ.ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 21 ರಂದು ಬೆಳಗ್ಗೆ 10:30 ಗಂಟೆಗೆ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ಆಖಖಊಂ) ಸಭೆಯನ್ನು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 17 ರಂದು ಕನ್ನಡಕ್ಕಾಗಿ ಓಟ ಘೋಷವಾಕ್ಯದಡಿ ಮ್ಯಾರಥಾನ್ ಸ್ಪರ್ಧೆ

**ಮಂಡ್ಯ:** 87ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನವನ್ನು 2024 ಡಿಸೆಂಬರ್ 20, 21 ಮತ್ತು 22 ರಂದು ಮಂಡ್ಯಜಿಲ್ಲೆಯಲ್ಲಿ ಸಂಘಟಿಸಲಾಗುತ್ತಿದ್ದು, ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಅರ್ಥಪೂರ್ಣವಾಗಿಜಿಲ್ಲೆಯಲ್ಲಿಆಯೋಜಿಸುವ ಸಲುವಾಗಿ ಹಾಗೂ ಮಂಡ್ಯಜಿಲ್ಲೆಯಜನರುಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿಕನ್ನಡಕ್ಕಾಗಿಓಟ ಎಂಬ ಘೋಷವಾಕ್ಯದಡಿಡಿಸೆಂಬರ್ 17 ರಂದು ಬೆಳಿಗ್ಗೆ 6.00 ಗಂಟೆಗೆ ಮಾರಾಥಾನ್ ಸ್ಪರ್ಧೆಯನ್ನು ನಗರದ ಸರ್. ಎಂ.ವಿಶ್ವೇಶ್ವರಯ್ಯಕ್ರೀಡಾಂಗಣದಿಂದ ಸಮ್ಮೇಳನ ನಡೆಯುವ ಸ್ಥಳ (ಸ್ಯಾಂಟೋಆಸ್ಪತ್ರೆ, ಹಿಂಭಾಗ) ದವರೆಗೆ ಹಮ್ಮಿಕೊಳ್ಳಲಾಗಿದೆ. ಕನ್ನಡ ಸಾಹಿತ್ಯ ಸಮ್ಮೇಳನವು ಹಿಂದೆಂದಿಗಿಂತಲೂ ವಿಶಿಷ್ಟಮಯವಾಗಿ ಹಾಗೂ ವಿಶ್ವಮಟ್ಟದಲ್ಲಿ ಹೆಸರು ಮಾಡುವ ನಿಟ್ಟಿನಲ್ಲಿ ಮಂಡ್ಯಜಿಲ್ಲೆಯಲ್ಲಿರುವಎಲ್ಲಾ ಸಾರ್ವಜನಿಕರು, ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ಎಲ್ಲಾ ಸಂಘ-ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರುಗಳು, ಎಲ್ಲಾಅಧಿಕಾರಿ/ ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿಕನ್ನಡಕ್ಕಾಗಿಓಟ ಎಂಬ ಘೋಷವಾಕ್ಯದಡಿ ಸಂಘಟಿಸುತ್ತಿರುವ ಮ್ಯಾರಥಾನ್ ಸ್ಪರ್ಧೆಯಲ್ಲಿ ಭಾಗವಹಿಸಲಿ. ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ, ದ್ವಿತೀಯ, ಮತ್ತುತೃತೀಯ ಸ್ಥಾನವನ್ನ ಪಡೆಯುವ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಪ್ರಶಸ್ತಿ ಪತ್ರ ಮತ್ತು ಬಹುಮಾನ ನೀಡಲಾಗುವುದು.

## ನಾಳೆ ನೇರ ಸಂದರ್ಶನ

**ಮಂಡ್ಯ:** ಜಿಲ್ಲಾಉದ್ಯೋಗ ವಿನಿಮಯಕಛೇರಿ ಹಾಗೂ ಮೆ|| ಟೀಮ್ ಲೀಸ್, ಮೆ|| ಮೆಡ್ ಪ್ಲಸ್ ಮತ್ತು ಮೆ|| ದೀನಬಂಧು ಸ್ಕಿಲ್ ಡೆವಲಪ್‌ಮೆಂಟ್ ಸಂಸ್ಥೆಗಳ ಸಹಯೋಗದಲ್ಲಿ ನೇರಸಂದರ್ಶನ ನಡೆಯಲಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿಯಿರುವಆರ್.ಇ/ ಬಿ.ಆರ್.ಇ/ ಟೆಲಿ ಸೇಲ್ಸ್/ ರೀಟೆಲ್ ಸೇಲ್ಸ್, ಸಿ.ಎಸ್.ಎ ಟ್ರೈನರ್''ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಯಾವುದೇ ಪದವಿ ಹಾಗೂ ಸ್ನಾತಕೋತ್ತರ ಪದವಿ ಉತ್ತೀರ್ಣರಾದ 18 ರಿಂದ 32 ವರ್ಷದೊಳಗಿನ ಅಭ್ಯರ್ಥಿಗಳು ಡಿಸೆಂಬರ್ 13 ರಂದು ಬೆಳಿಗ್ಗೆ 10.30 ಗಂಟೆಗೆಜಿಲ್ಲಾಉದ್ಯೋಗ ವಿನಿಮಯಕಛೇರಿಯಲ್ಲಿ ನೇರ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ದೂ.ಸಂ: 08232-295124 ಮತ್ತು 9164642684, 8970646629 8660061488 ಸಂಪರ್ಕಿಸಬಹುದು.

# ಮುತ್ತುರಾಯಸ್ವಾಮಿ ಸಂಭ್ರಮದ ಜಾತ್ರೆ

**ಪಿರಿಯಾಪಟ್ಟಣ:** ಕಾರ್ತಿಕ ಅಧಿಕ ಮಾಸದ ಅಂಗವಾಗಿ ತಾಲೂಕಿನ ಆನೆ ಚೌಕೂರು ಮೀಸಲು ಅರಣ್ಯದ ಶ್ರೀ ಮುತ್ತುರಾಯ ಸ್ವಾಮಿ ದೇವಾಲಯದಲ್ಲಿ ಮುತ್ತುರಾಯ ಸ್ವಾಮಿ ಜಾತ್ರಾ ಮಹೋತ್ಸವ ಸೋಮವಾರ ವಿಜೃಂಭಣೆಯಿಂದ ನೆರವೇರಿತು.

ಈ ಜಾತ್ರಾ ಮಹೋತ್ಸವಕ್ಕೆ ಪಿರಿಯಾಪಟ್ಟಣ ಕೊಡಗು ಗಡಿ ಭಾಗದ ಗೋಣಿಕೊಪ್ಪಲು ಸುತ್ತಮುತ್ತಲಿನ ಗ್ರಾಮಗಳು ಲಕ್ಷ್ಮಿಪುರ, ಹಬಟೂರು, ಅಬ್ಬಳತಿ, ಬೂದಿ ತಿಟ್ಟು, ಚೌತಿ, ಮಾಲಂಗಿ, ಅಂಕನಳ್ಳಿ ಸೇರಿದಂತೆ ಪಿರಿಯಾಪಟ್ಟಣ ತಾಲೂಕಿನ ನಾನಾ ಗ್ರಾಮಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರಿಗೆ ಪೂಜೆ ಸಲ್ಲಿಸಿ ತಮ್ಮ ಭಕ್ತಿ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಶ್ರೀ ಮತ್ತರಾಯ ಸ್ವಾಮಿ ಸೇವಾ ಸಮಿತಿಯ ಅಧ್ಯಕ್ಷ ವಿ.ಎಸ್. ರಾಮಚಂದ್ರ, ಮಾತನಾಡಿ ಕೊಡಗು ಗಡಿಭಾಗದ ಅರಣ್ಯ ಪ್ರದೇಶದ ಮದ್ಯೆ ಇರುವ ಶ್ರೀ ಮುತ್ತರಾಯಸ್ವಾಮಿ ದೇವಾಲಯಕ್ಕೆ ನೂರಾರು ವರ್ಷಗಳ ಇತಿಹಾಸವಿದ್ದು, ಇಲ್ಲಿನ ಸುತ್ತಮುತ್ತಲಿನ ಗ್ರಾಮಗಳು ಇಲ್ಲಿ ಪೂಜೆ ಪುನಸ್ಕಾರ ನಡೆದುಕೊಂಡು ಬರುವುದರೊಳಗೆಮದುವೆ, ನಾಮಕರಣ ಸೇರಿದಂತೆ ಇನ್ನಿತರ ಶುಭ ಸಮಾರಂಭಗಳನ್ನು ನಡೆಸಿಕೊಂಡು ಬರಲಾಗುತ್ತಿತ್ತು ಆದರೆ ಈ ಭಾಗವನ್ನು ನಾಗರಹೊಳೆ ಮೀಸಲು ಅರಣ್ಯ ಎಂದು ಘೋಷಣೆಯಾದ ನಂತರ ಅರಣ್ಯ ಇಲಾಖೆ ಅಧಿಕಾರಿಗಳು ಇಲ್ಲಿ ಪೂಜೆ ಪುನಸ್ಕಾರ ನಡೆಸಲು ಅನುಮತಿ ನಿರಾಕರಿಸಿದ ಕಾರಣಕ್ಕೆ ಈ ಭಾಗದ ಭಕ್ತರಲ್ಲಿ ನಿರಾಸೆ ಮೂಡಿದೆ



ಈ ಬಗ್ಗೆ ಪಶುಪಾಲನಾ ಮತ್ತು ರೇಷ್ಮೆ ಖಾತೆ ಸಚಿವರಾದ ಶ್ರೀ ಕೆ. ವೆಂಕಟೇಶ್, ಅರಣ್ಯ ಇಲಾಖೆ ಸಚಿವ ಈಶ್ವರ ಖಂಡ್ರೆ, ಸೇರಿದಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಹತ್ತಾರು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಆದ್ದರಿಂದ ಈ ಭಾಗದ ಭಕ್ತರ ಆರಾಧ್ಯ ದೈವ ಮುತ್ತುರಾಯಸ್ವಾಮಿ ದೇವಾಲಯದಲ್ಲಿ ಶುಭ ಕಾರ್ಯಗಳು ಸೇರಿದಂತೆ ಪೂಜಾ ಕೈಂಕರ್ಯಗಳನ್ನು ನಡೆಸಲು ಅನುವು ಮಾಡಿಕೊಡಬೇಕೆಂದು ಮನವಿ ಮಾಡಿದರು. ಜಾತ್ರಾ ಮಹೋತ್ಸವಕ್ಕೆ ಆಗಮಿಸಿದ ಭಕ್ತರಿಗೆ ಅನ್ನ ಸಂತರ್ಪಣೆ ನೆರವೇರಿಸಲಾಯಿತು.

ಜಾತ್ರಾ ಮಹೋತ್ಸವಕ್ಕೆ ಡಿಸಿಎಫ್ ಸೀಮಾ, ಅರಣ್ಯಾಧಿಕಾರಿಗಳಾದ ಪಿ.ಎಲ್.ರಾಮಣ್ಣ, ಸುಬ್ರಹ್ಮಣ್ಯ, ಚಿಕ್ಕಮಾದು, ಮುತ್ತು ರಾಯಸ್ವಾಮಿ ಸೇವಾ ಸಮಿತಿಯ ಕಾರ್ಯದರ್ಶಿ ವಿ.ಟಿ.ಪಾಪಣ್ಣ, ಪದಾಧಿಕಾರಿಗಳಾದ ಶಿವರಾಜ್, ಕೃಷ್ಣೇಗೌಡ, ಪಟೇಲ್ ಶ್ರೀನಿವಾಸ್, ಸುರೇಶ್, ಹೆಚ್ .ವಿ.ರಮೇಶ್, ಹೆಚ್.ಎಸ್.ರಮೇಶ್, ಹೆಚ್.ಎನ್ .ನವೀನ್, ಮುತ್ತುರಾಜ್, ಬಿ.ಎಸ್.ವಿಶ್ವನಾಥ್, ಹೆಚ್.ಎಸ್.ಶ್ರೀನಿವಾಸ್, ಕಾಂತರಾಜು, ವಿ.ಎಸ್. ರಾಮಕೃಷ್ಣ ಸೇರಿದಂತೆ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರಿಗೆ ಪೂಜೆ ಸಮರ್ಪಿಸಿದರು.

# ಶಿಕ್ಷಣದಿಂದ ವಿಶ್ವಮಾನವನಾಗಲು ಸಾಧ್ಯ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾನವ ಗೌರವ ಮತ್ತು ವೈಯಕ್ತಿಕ ಜವಾಬ್ದಾರಿಯ ಆಳವಾದ ತಿಳುವಳಿಕೆಯನ್ನು ಬೆಳೆಸುವ ಉದ್ದೇಶದಿಂದ ಮಂಗಳವಾರದಂದು ಅಂತರಾಷ್ಟ್ರೀಯ ಮಾನವ ಹಕ್ಕುಗಳ ದಿನವನ್ನು ಆಚರಿಸಲಾಯಿತು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ವೀರಣ್ಣ ಎಸ್.ಸಿ ರವರು ಮಾತನಾಡಿ, ಮಾನವ ಹಕ್ಕುಗಳನ್ನು ಕಾಪಾಡುವುದು ಮತ್ತು ನಾಗರಿಕ ವ್ಯಕ್ತಿಗಳಾಗಿ ನಮ್ಮ ಜವಾಬ್ದಾರಿಯನ್ನು ಬೆಳೆಸಿಕೊಳ್ಳುವುದರ ನಡುವೆ ಬಲವಾದ ಸಂಬಂಧವಿದೆ ಎಂದು ಹೇಳಿದರಲ್ಲದೆ ಕುವೆಂಪು ಅವರ ವಿಶ್ವಮಾನವ ತತ್ವದ ಆಳವಾದ ಜ್ಞಾನವನ್ನು ತಿಳಿಸಿ ಶಿಕ್ಷಣದಿಂದ ಮಾತ್ರ ಅಲ್ಪ ಮಾನವ ವಿಶ್ವ ಮಾನವನಾಗಲು ಸಾಧ್ಯ. ನಿಜವಾದ ಸಮಾನತೆಯನ್ನು ಸ್ಥಾಪಿಸಲು ನಾವೂ ಬದುಕಬೇಕು ಮತ್ತು ಇತರರನ್ನು ಬದುಕಲು ಬಿಡಬೇಕು ಎಂಬ ನೈತಿಕ ತತ್ವವನ್ನು ಪಾಲಿಸುವ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದರು.

ಮುಖ್ಯ ಅತಿಥಿಯಾಗಿ ಶ್ರೀನಿವಾಸಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಮಂಜುನಾಥ್ ಕೆ.ಎಸ್. ರವರು ಮಾತನಾಡಿ ಮಾನವ ಹಕ್ಕುಗಳ ಉಲ್ಲಂಘನೆಯ ತಡೆಗಟ್ಟುವಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಬೇಕು. ಮಾನವ ಹಕ್ಕುಗಳು ಹುಟ್ಟಿನಿಂದ ಸಾಯುವವರೆಗೂ ಜೊತೆಯಲ್ಲೇ ಇರುವಂತಹ ಹಕ್ಕುಗಳಾಗಿವೆ. ಜೀವನ ಎಂದರೆ ಬರೀ ಜೀವಿಸುವುದಲ್ಲ ಉತ್ತಮವಾಗಿ ಜೀವಿಸುವುದು ಎಂದು ಮಾನವ ಹಕ್ಕು ದಿನದ ಮಹತ್ವವನ್ನು ಸಾರಿದರು.



ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಲಕ್ಷ್ಮೀ ಎಸ್. ಎಲ್ಲ ಧರ್ಮಕಿಂತ ಮಾನವ ಧರ್ಮವೇ ಮೇಲು (ಮಾನವ ಗೌರವವು ಎಲ್ಲ ಧರ್ಮಗಳಿಗಿಂತ ಮೇಲು). ಜಾತಿ, ಧರ್ಮ, ಲಿಂಗ, ಭಾಷೆ ಅಥವಾ ಸಾಮಾಜಿಕ-ಆರ್ಥಿಕ ಸ್ಥಿತಿಯ ಆಧಾರದ ಮೇಲೆ ಯಾವುದೇ ವಿಭಜನೆಗಳಿಗಿಂತ ತಮ್ಮ ಸಾಮಾನ್ಯ ಮಾನವೀಯತೆಗೆ ಆದ್ಯತೆ ನೀಡುವಂತೆ ತಿಳಿಸಿದರು.

**» ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯ ಪ್ರೊ.ವೀರಣ್ಣ ಎಸ್.ಸಿ. ಹೇಳಿಕೆ**

ರಾಜ್ಯಶಾಸ್ತ್ರ ವಿಭಾಗವು ಆಯೋಜಿಸಿದ್ದ ಮಾನವ ಹಕ್ಕುಗಳ ಕುರಿತಾದ ರಸಪ್ರಶ್ನೆ ಸ್ಪರ್ಧೆ ನಡಸಲಾಯಿತು. ಪ್ರಥಮ ಬಹುಮಾನವನ್ನು ಯಮುನಾ ಮತ್ತು ಅರ್ಪಿತಾ, ದ್ವಿತೀಯ ಬಹುಮಾನವನ್ನು ಶರತ್ ನಾಯ್ಕ ಮತ್ತು ವೇಣುಗೋಪಾಲ್, ತೃತೀಯ ಬಹುಮಾನವನ್ನು ಸೈಯದ್ ಅಫ್ರೀನ್ ಮತ್ತು ಕೆ.ಎಂ.ಚೈತ್ರ ಪಡೆದುಕೊಂಡರು. ಕಾರ್ಯಕ್ರಮದಲ್ಲಿ. ಉಪನ್ಯಾಸಕರಾದ ತಿಪ್ಪೇಸ್ವಾಮಿ ಎಂ.ಕೆ., ದೈಹಿಕ ಶಿಕ್ಷಣ ನಿರ್ದೇಶಕರಾದ ಯೋಗೇಶ್ ಬಿ., ಕನ್ನಡ ವಿಭಾಗದ ಪ್ರಾಧ್ಯಾಪಕರಾದ ಜಗದೀಶ್ ಮತ್ತು ಸುಮಯ್ಯಾ ಬಾನು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಿ.ಇಡಿ ವಿದ್ಯಾರ್ಥಿಗಳಿಂದ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಬಿ.ಎಡ್ ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಸೇವಾಸಿಂಧು (https://sevasindhu.Karnataka.gov.in) ಪೋರ್ಟಲ್ನಲ್ಲಿ ಆನ್ಲೈನ್ ಮೂಲಕ ಡಿಸೆಂಬರ್ 25 ರ ಒಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೆಬ್ಸೈಟ್ https://dom.karnataka.gov.in ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಾಯವಾಣಿ ಸಂಖ್ಯೆ: 8277799990, ಬೆಂಗಳೂರು ಗ್ರಾಮಾಂತರ ಜಿಲ್ಲಾ ದೂರವಾಣಿ ಸಂಖ್ಯೆ: 08022866966, ದೊಡ್ಡಬಳ್ಳಾಪುರ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 9986874857, ನೆಲಮಂಗಲ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 8660197516, ದೇವನಹಳ್ಳಿ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 9591176959, ಹೊಸಕೋಟೆ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 7676905779 ಇವರನ್ನು ಸಂಪರ್ಕಿಸಬಹುದಾಗಿದೆ.

## ಆಕ್ಷೇಪಣೆ ಸಲ್ಲಿಕೆಗೆ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ಸರ್ಕಾರವು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಈ ಕೆಳಕಂಡ ಸ್ಮಾರಕ, ದೇವಾಲಯಗಳನ್ನು ರಾಜ್ಯ ಸಂರಕ್ಷಿತ ಸ್ಮಾರಕವನ್ನಾಗಿ ಘೋಷಿಸಲು ಅಭಿಪ್ರಾಯ ಪಟ್ಟಿದೆ. ಹೊಸಕೋಟೆ ತಾಲೂಕಿನ ದೊಡ್ಡ ಹುಲ್ಲೂರು ಗ್ರಾಮದ ಶ್ರೀ ಸೋಮೇಶ್ವರ ದೇವಾಲಯ(ಈಶ್ವರ ದೇವಾಲಯ), ದೇವನಹಳ್ಳಿ ತಾಲೂಕಿನ ನಲ್ಲೂರು ಗ್ರಾಮದ ಶ್ರೀ ಚೆನ್ನಕೇಶವ ದೇವಾಲಯ, ಕಸಬಾ ಹೋಬಳಿಯ ಖಾಸ್ಬಾಗ್ ಗ್ರಾಮದ ಶ್ರೀ ಮಹದೇಶ್ವರ ದೇವಾಲಯ, ದೊಡ್ಡಬಳ್ಳಾಪುರ ತಾಲ್ಲೂಕಿನ ತಿಪ್ಪೂರು ಗ್ರಾಮದ ಗಂಗಾಶೈಲಿಯ ವೀರಗಲ್ಲು ಸ್ಮಾರಕ, ದೇವಾಲಯಗಳನ್ನು ರಾಜ್ಯ ಸಂರಕ್ಷಿತ ಸ್ಮಾರಕವನ್ನಾಗಿ ಘೋಷಿಸಲು ಪ್ರಾಥಮಿಕ ಅಧಿಸೂಚನೆ ಹೊರಡಿಸಿರುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಈ ಸ್ಮಾರಕಗಳನ್ನು ರಾಜ್ಯ ಸಂರಕ್ಷಿತ ಸ್ಮಾರಕ ಪ್ರದೇಶವೆಂದು ಘೋಷಿಸುವುದರಿಂದ ಭಾಧಿತರಾಗುವವರು ಆಕ್ಷೇಪಣೆಗಳನ್ನು ಡಿಸೆಂಬರ್ 24ರ ಒಳಗಾಗಿ ಸರ್ಕಾರದ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ ಕೊಠಡಿ ಸಂಖ್ಯೆ 05, ನೆಲ ಮಹಡಿ, ವಿಕಾಸಸೌಧ, ಬೆಂಗಳೂರು-56001 ಈ ವಿಳಾಸಕ್ಕೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಡಾ.ಎನ್ ಶಿವಶಂಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೋತಾಹ ಧನಕ್ಕಾಗಿ ಕ್ರೀಡಾಪಟುಗಳಿಂದ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ವತಿಯಿಂದ 2024-25 ಸಾಲಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡ ಉಪಯೋಜನೆ ಅಡಿಯಲ್ಲಿ 2023ನೇ ವರ್ಷದಲ್ಲಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಂದ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಭರ್ತಿ ಮಾಡಿದ ಅರ್ಜಿ ನಮೂನೆಯನ್ನು ಡಿಸೆಂಬರ್ 23 ರೊಳಗಾಗಿ ಜಿಲ್ಲಾ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಗೆ ಸಲ್ಲಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಟಿ.ಜಯಲಕ್ಷ್ಮೀ ತಿಳಿಸಿದ್ದಾರೆ.

## ಮಾರ್ಚ್ 9 ರಂದು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ತ್ರೈವಾರ್ಷಿಕ ಚುನಾವಣೆ

ಬೆಂಗಳೂರು: ರಾಜ್ಯದಲ್ಲಿ ವೈಜ್ಞಾನಿಕ ಮನೋಭಾವ ಜಾಗೃತಗೊಳಿಸುವ ಹಾಗೂ ವಿಜ್ಞಾನ ಜನಪ್ರಿಯಗೊಳಿಸಲು ಶ್ರಮಿಸುತ್ತಿರುವ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕಾರ್ಯಕಾರಿ ಸಮಿತಿಯ ಆಯ್ಕೆಗಾಗಿ ತ್ರೈವಾರ್ಷಿಕ ಚುನಾವಣೆಯನ್ನು ಮಾರ್ಚ್ 9 ರಂದು ಆಯಾ ಜಿಲ್ಲಾ ಕೇಂದ್ರ ಹಾಗೂ 150 ಕ್ಕಿಂತ ಹೆಚ್ಚು ಸದಸ್ಯರಿರುವ ತಾಲ್ಲೂಕು ಕೇಂದ್ರಗಳಲ್ಲಿ ನಡೆಸಲಾಗುವುದು ಎಂದು ರಾಜ್ಯ ವಿಜ್ಞಾನ ಪರಿಷತ್ತಿನ ಆಡಳಿತಾಧಿಕಾರಿ ಹಮೀದುಲ್ಲಾ ಖಾನ್ ತಿಳಿಸಿದ್ದಾರೆ. ಜನವರಿ 20 ರಿಂದ ಫೆಬ್ರವರಿ 1 ರವರೆಗೆ ನಾಮಪತ್ರ ಸಲ್ಲಿಸಲು ಅವಕಾಶವಿದ್ದು, ಫೆಬ್ರವರಿ 3 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಫೆಬ್ರವರಿ 10 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನಾಂಕವಾಗಿದ್ದು, ಮಾರ್ಚ್ 9 ರಂದು ರಾಜ್ಯಾದ್ಯಂತ ಚುನಾವಣೆ ನಡೆಯಲಿದೆ.

## ಸಖಿ ಒನ್ ಸ್ಟಾಪ್ ಸೆಂಟರ್ ನ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸಖಿ ಒನ್ ಸ್ಟಾಪ್ ಸೆಂಟರ್ ನ Counsellor (Psycho - Social counselling)-01 ಹುದ್ದೆಗೆ ತಾತ್ಕಾಲಿಕ ಗುತ್ತಿಗೆ ಆಧಾರದ ಮೇಲೆ ನೇಮಿಸಲು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜನವರಿ 10 ರೊಳಗೆ ಸಲ್ಲಿಸಹುದು. ವಿದ್ಯಾರ್ಹತೆ: ಎಂ.ಎಸ್.ಡಬ್ಲ್ಯು/ಎಂ.ಎಸ್ಸಿ ಹೋಮ್ ಸೈನ್ಸ್ (Development and Family Relation)/Psychology/ Psychiatry (with 3yrs Experience in counselling field). ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ನೂತನ ಜಿಲ್ಲಾಡಳಿತ ಭವನ, 1ನೇ ಮಹಡಿ, ಕೊಠಡಿ ಸಂಖ್ಯೆ: ಎಫ್ ಬಿ-05, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ ದೂರವಾಣಿ ಸಂಖ್ಯೆ: 8971841194, 8123733765 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ಲಾಸ್ಟಿಕ್ ಮುಕ್ತ ಜಿಲ್ಲೆಯಾಗಬೇಕು: ಅಪರ ಜಿಲ್ಲಾಧಿಕಾರಿ

**ಚಿಕ್ಕಬಳ್ಳಾಪುರ:** ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಹಾಗೂ ನಿಷೇದಿತ ಪ್ಲಾಸ್ಟಿಕ್ ಬಳಸದೆ ಪರಿಸರ ಸ್ನೇಹಿ ಮಾರ್ಗೋಪಾಯಗಳ ಬಗ್ಗೆ ತಿಳಿದುಕೊಂಡು ಮತ್ತಿತರರಿಗೂ ಅರಿವು ಮೂಡಿಸಲು ಜಿಲ್ಲೆಯ ಸಮಸ್ತ ನಾಗರೀಕರು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಿ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್ ಭಾಸ್ಕರ್ ಅವರು ಮನವಿ ಮಾಡಿದರು.



ಜಿಲ್ಲಾಡಳಿತ,ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ವತಿಯಿಂದ ವಾಯು ಮಾಲಿನ್ಯ ನಿಯಂತ್ರಣ ಮಾಸಾಚರಣೆ ನವೆಂಬರ್ - 2024 ರ ಅಂಗವಾಗಿ ಗುರುವಾರ ನಗರದ ಸೆಂಟ್ ಜೋಸೆಫ್ ಕಾನ್ವೆಂಟ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ''ವಾಹನಗಳಿಂದಾಗುವ ವಾಯುಮಾಲಿನ್ಯದ ವಿರುದ್ಧ ಸಮರ ಕಾರ್ಯಕ್ರಮ''ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಮಾಡಲು ಅಂಗಡಿ, ಮುಂಗಟ್ಟುಗಳಿಗೆ,ಪ್ಲಾಸ್ಟಿಕ್ ಮಾರಟಗಾರರ ಮಳಿಗೆಗಳ ಮೇಲೆ ದಾಳಿ ನಡೆಸಿ ದಂಡ ವಿಧಿಸಲಾಗುತ್ತಿದೆ. ಸಾರ್ವಜನಿಕರು ಪ್ಲಾಸ್ಟಿಕ್ ವಸ್ತುಗಳನ್ನು ಬಳಸುವುದು ಕಡಿಮೆ ಮಾಡಬೇಕು, ನಿಷೇದಿತ ಪ್ಲಾಸ್ಟಿಕ್ ನ್ನು ಬಳಸಲೇ ಬಾರದು ಹಾಗೂ ನಿಮ್ಮ ನೆರೆ ಹೊರೆಯವರಿಗೂ ಪ್ಲಾಸ್ಟಿಕ್ ಬಳಕೆಯ ದುಷ್ಪರಿಣಾಮದ ಕುರಿತು ಜಾಗೃತಿ ಮೂಡಿಸಬೇಕು ಎಂದರು.

ಪಠ್ಯ ಪುಸ್ತಕಗಳಲ್ಲಿ ವಾಯು ಮಾಲಿನ್ಯ, ಜಲ ಮಾಲಿನ್ಯ, ಮಣ್ಣಿನ ಮಾಲಿನ್ಯ, ಹಾಗೂ ಇತರೆ ಮಾಲಿನ್ಯಗಳ ಕುರಿತು ಹೆಚ್ಚಿನ ಪ್ರಮಾಣದಲ್ಲಿ ಮಾಹಿತಿ ಇದೆ ಅದನ್ನು ಅರ್ಥೈಸಿಕೊಂಡು ಇತರರಿಗೂ ಅರಿವು ಮೂಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಎ. ವಿವೇಕಾನಂದ ಅವರು ಮಾತನಾಡಿ 18 ವರ್ಷದೊಳಗಿನ ಮಕ್ಕಳು ವಾಹನ ಚಲಾಯಿಸುವಂತಿಲ್ಲ, ಅಂತಹ ಮಕ್ಕಳಿಗೆ ಪೋಷಕರು ವಾಹನ ಚಾಲನೆ ಮಾಡಲು ವಾಹನಗಳನ್ನು ನೀಡಬಾರದು.

ಜಿಲ್ಲೆಯಲ್ಲಿ ವಾಯು ಮಾಲಿನ್ಯದ ದುಷ್ಪರಿಣಾಮಗಳ ಕುರಿತು ತಿಳಸಲು ವಿವಿಧ ಶಾಲಾ ಕಾಲೇಜುಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.ಪರಿಸರ ಸ್ನೇಹಿ ಸಾರಿಗೆ, ಶಕ್ತಿ-ಸಮರ್ಥ ಮನೆಗಳು, ವಿದ್ಯುತ್ ಉತ್ಪಾದನೆ, ಉದ್ಯಮ ನಿಯಂತ್ರಣ, ಶುದ್ಧ ಇಂಧನ ಮತ್ತು ತಂತ್ರಜ್ಞಾನಗಳ ಬಳಕೆ ಮತ್ತು ಉತ್ತಮ ತ್ಯಾಜ್ಯ ನಿರ್ವಹಣೆಯನ್ನು ಬೆಂಬಲಿಸುವ ನೀತಿಗಳು ಮತ್ತು ಹೂಡಿಕೆಗಳು ವಾಯು ಮಾಲಿನ್ಯದ ಪ್ರಮುಖ ಮೂಲಗಳನ್ನು ಪರಿಣಾಮಕಾರಿಯಾಗಿ ಕಡಿಮೆ ಮಾಡಲಿವೆ. ಯುವ ಸಮುದಾಯ ಮಾಲಿನ್ಯಗಳ ಬಗ್ಗೆ ಹೆಚ್ಚು ಅರಿವು ಹೊಂದಿರಬೇಕು. ಇಂದಿನ ಜನಾಂಗದಿಂದ ಮುಂದಿನ ಪೀಳಿಗೆಗೆ ಉತ್ತಮ ವಾತವರಣ ನೀಡುವ ಕಾರ್ಯವಾಗಬೇಕು ಜಿಲ್ಲೆಯಲ್ಲಿ ವಾಹನಗಳಿಂದ 24% ರಷ್ಟು ವಾಯು ಮಾಲಿನ್ಯ ಉಂಟಾಗಿದೆ ಇದು ಮುಂದಿನ ದಿನಗಳಲ್ಲಿ ತಗ್ಗಬೇಕು ಎಂದು ತಿಳಿಸಿದರು.

ಹಿರಿಯ ಮೋಟಾರ್ ವಾಹನ ನೀರಿಕ್ಷರಾದ ನಾಗರಾಜ್ ನಾಯಕ್ ಅವರು ಮಾತನಾಡಿ ವಾಯುಮಾಲಿನ್ಯವು ಹೃದಯರಕ್ತನಾಳದ ಕಾಯಿಲೆಗೆ ಮುಖ್ಯ ಕಾರಣವಾದ ಅಂಶವಾಗಿದೆ, ಹೃದ್ರೋಗ, ಮತ್ತು ಪಾರ್ಶ್ವವಾಯು, ಶ್ವಾಸಕೋಶದ ಕ್ಯಾನ್ಸರ್, ಕಡಿಮೆ ಉಸಿರಾಟದ ಸೋಂಕುಗಳು, ಟೈಪ್ 2 ಡಯಾಬಿಟಿಸ್ ಗೆ ಪೂರಕವಾಗಲಿದೆ ಎಂದರು.

ವಾಹನಗಳಿಗೆ ಪೆಟ್ರೋಲ್, ಡೀಸೆಲ್ ಬಳಸುವದರಿಂದ ಕಾರ್ಬನ್ ಡೈ ಆಕ್ಸೈಡ್ ಹೊಗೆಯಿಂದಾಗಿ ಪರಿಸರದ ಮೇಲೆ ಹೆಚ್ಚು ಕೆಟ್ಟ ಪರಿಣಾಮ ಉಂಟಾಗುತ್ತದೆ.ಆದ್ದರಿಂದ ಸಮೂಹ ಸಾರಿಗೆಯನ್ನು ಹೆಚ್ಚು ಬಳಸಬೇಕು. ಈ ಮಾಹೆಯಲ್ಲಿ ಮಂಜಿನ ವಾತವರಣ ಹೆಚ್ಚಾಗಿದ್ದು ವಾಹನಗಳನ್ನು ನಿಧಾನವಾಗಿ ಚಲಾಯಿಸಬೇಕು. ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಮೂಲಕ ಪರಿಸರ ಮಾಲಿನ್ಯವನ್ನು ತಪ್ಪಿಸಬೇಕು ಎಂದು ತಿಳಿಸಿದರು. ಈ ವೇಳೆ ವಾಯುಮಾಲಿನ್ಯ ನಿಯಂತ್ರಣ ಜಾಗೃತಿ ಮೂಡಿಸುವ ಕರಪತ್ರ ಹಾಗೂ ಭಿತ್ತಿ ಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮೋಟಾರ್ ವಾಹನ ನಿರೀಕ್ಷಕರಾದ ಅರುಣಾ, ಸೆಂಟ್ ಜೋಸೆಫ್ ಕಾನ್ವೆಂಟ್ ಶಾಲೆಯ ಪ್ರಾಂಶುಪಾಲರು,ಹಾಗೂ ಬೋಧಕ, ಬೋಧಕೇತರ ವರ್ಗದವರು, ಪ್ರಾದೇಶಿಕ ಸಾರಿಗೆ ಇಲಾಖೆಯ ಆಡಳಿತ ಸಿಬ್ಬಂದಿಯವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಕರೆ

## ಮಾನವ ಹಕ್ಕುಗಳ ರಕ್ಷಣೆ ಮಾಡಿ

**ರಾಮನಗರ:** ಸಮಾಜದಲ್ಲಿ ಮಹಿಳೆಯರ ಹಾಗೂ ಶೋಷಿತರ ಹಕ್ಕುಗಳನ್ನು ಗೌರವಿಸುವುದು ಪ್ರತಿಯೊಬ್ಬ ನಾಗರೀಕನ ಜವಬ್ದಾರಿ ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ತಿಳಿಸಿದರು.

ಅವರು ಡಿ. 10ರ ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ವಕೀಲರ ಸಂಘ, ಸರ್ಕಾರಿ ಕಾನೂನು ಕಾಲೇಜು ಹಾಗೂ ಜಿಲ್ಲೆಯ ಎಲ್ಲಾ ಸ್ವಯಂ-ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಸಮಾಜದಲ್ಲಿ ಯಾವುದೇ ಜಾತಿ ಲಿಂಗ, ಧರ್ಮ ಬೇಧವಿಲ್ಲದೇ ನಮಗೆ ಸಿಕ್ಕಿರುವ ಹಕ್ಕುಗಳನ್ನು ಸಮಾನತೆಯಿಂದ ಇನ್ನೊಬ್ಬರನ್ನು ಗೌರವಿಸುವ ಮೂಲಕ ಮಾನವ ಹಕ್ಕುಗಳ ದಿನಾಚರಣೆಯನ್ನು ಆಚರಿಸಬೇಕು.ರಾಜ್ಯದ ಯಾವುದೇ ಕಚೇರಿ ಅಥವಾ ಸಂಸ್ಥೆಗಳಿಂದ ಮಾನವ ಹಕ್ಕುಗಳ ಉಲ್ಲಂಘನೆಯಾದಲ್ಲಿ ತೊಂದರೆಗೆ ಒಳಗಾದವರು ಅಥವಾ ಅವರ ಪರವಾಗಿ ಬೇರೆ ಯಾರಾದರೂ ಅವರ ಸಮಸ್ಯೆಗಳಿಗೆ ನ್ಯಾಯ ದೊರಕಿಸಿಕೊಳ್ಳಲು ಮಾನವ ಹಕ್ಕುಗಳ ಆಯೋಗವನ್ನು ಸಂಪರ್ಕಿಸಬಹುದು ಎಂದು ಹೇಳಿದರು. ಡಿವೈಎಸ್ಪಿ ದಿನಕರ್ ಶೆಟ್ಟಿ ಮಾತನಾಡಿ, ಮಾನವ ಹಕ್ಕುಗಳ ರಕ್ಷಣೆಗೆ ಮತ್ತು ಅವುಗಳ ಪರಿಣಾಮಕಾರಿ ಜಾರಿಗಾಗಿ ಮಾನವ ಹಕ್ಕುಗಳ ರಕ್ಷಣೆ ಕಾಯ್ದೆ 1993ರ ಅನ್ವಯ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮತ್ತು ರಾಜ್ಯ ಮಾನವ ಹಕ್ಕುಗಳ ಆಯೋಗಗಳನ್ನು ರಚನೆ ಮಾಡಲಾಗಿದೆ. ಸಮಾಜದ ಪ್ರತಿಯೊಬ್ಬ ಪ್ರಜೆಯ ಮಾನವ ಹಕ್ಕುಗಳನ್ನು ರಕ್ಷಿಸುವುದು ರಾಜ್ಯದ ಮತ್ತು ಇದರ ಎಲ್ಲಾ ಸಂಸ್ಥೆಗಳ ಆದ್ಯ ಕರ್ತವ್ಯ ಎಂದು ತಿಳಿಸಿದರು. ಬಸವನಪುರದ ಸರ್ಕಾರಿ ಕಾನೂನು ಕಾಲೇಜಿನ ಪ್ರಾಚಾರ್ಯರಾದ ಡಾ. ನಾಗಶೇಷಮ್ಮ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಎಸ್.ಸಿ. ಪದ್ಮರಾಜ್, ರಾಮನಗರ ನಗರಸಭೆ ಆಯುಕ್ತ ಜಯಣ್ಣ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಕಾನೂನು ಕಾಲೇಜಿನ ವಿದ್ಯಾರ್ಥಿಗಳು ಭಾಗಹಿಸಿದ್ದರು.

## ಮತದಾರರ ಪಟ್ಟಿ ಪ್ರಕಟಿಸಿದ ಜಿಲ್ಲಾಡಳಿತ

**ಮಂಡ್ಯ:** ಮಂಡ್ಯ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ ಗೆಜ್ಜಲಗೆರೆ ಆಡಳಿತ ಮಂಡಳಿಗೆ ಮುಂದಿನ 5 ವರ್ಷಗಳ ಅವಧಿಗೆ ನಿರ್ದೇಶಕರುಗಳ ಚುನಾವಣೆಯನ್ನು ನಡೆಸಲು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ. ಕರಡು ಮತದಾರರ ಪಟ್ಟಿಗೆ ಯಾವುದೇ ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ 30 ದಿನಗಳ ಒಳಗಾಗಿ (ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ) ಕಛೇರಿಯ ಅವಧಿಯಲ್ಲಿ ಸಲ್ಲಿಸಬಹುದಾಗಿರುತ್ತದೆ.ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ ಗೆಜ್ಜಲಗೆರೆ ಆಡಳಿತ ಕಛೇರಿಯಲ್ಲಿ, ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಎಲ್ಲಾ ತಾಲ್ಲೂಕು ಉಪ ಕಛೇರಿಗಳಲ್ಲಿ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಪರಿಶೀಲನೆಗೆ ಲಭ್ಯವಿರುತ್ತದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಫೆಡರಲ್ ಸಹಕಾರ ಸಂಘಗಳ ಚುನಾವಣಾಧಿಕಾರಿ ಡಾ ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನ

**ಮೈಸೂರು:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ.25,000 ಗಳಂತೆ ಶಿಷ್ಯ ವೇತನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಛಿಸುವ ಅರ್ಹ ಪರಿಶ್ಟಿ ಪಂಗಡದ ಅಭ್ಯರ್ಥಿಗಳು ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿಗಳ ಕಛೇರಿಯಿಂದ ಅರ್ಜಿ ಪಡೆದು ಡಿಸೆಂಬರ್ 20 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9742099989ಗೆ ಅನ್ನು ಸಂಪರ್ಕಿಸಬಹುದು ಎಂದು ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

ರಾಮನಗರ, 66/11ಕೆವಿ ಬಿ.ವಿ.ಹಳ್ಳಿ ಮತ್ತು 66/11ಕೆವಿ ಗುರುವಿನಪುರ ವಿದ್ಯುತ್ ಉಪಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಬಿ.ವಿ. ಹಳ್ಳಿ, ವಿರುಪಾಕ್ಷಿಪುರ, ಮಂಗಾಡಹಳ್ಳಿ, ಸಿಂಗರಾಜಿಪುರ, ಕೋಡಂಬಳ್ಳಿ, ಶ್ಯಾನುಭೋಗನಹಳ್ಳಿ, ಮೆಣಸಿಗನಹಳ್ಳಿ, ಸೋಮೆಗೌಡನದೊಡ್ಡಿ, ಅರಳಾಳುಸಂದ್ರ, ವಿಠೇಲನಹಳ್ಳಿ, ಗೊಲ್ಲರದೊಡ್ಡಿ, ಜಗದಾಪುರ, ಜೆ.ಬ್ಯಾಡರಹಳ್ಳಿ, ಕಾರೇಕೊಪ್ಪ, ಮಾದೇಗೌಡನದೊಡ್ಡಿ, ಲಿಂಗೇಗೌಡನದೊಡ್ಡಿ, ಯಲಿಯೂರು, ಸಿದ್ದಾಪುರ, ಗುವಾಪುರ, ಕಲ್ಲಾಪುರ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಇದೇ ಡಿ. 12 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಂತ್ರಗಳ ಬಾಡಿಗೆ ದರ ನಿಗದಿ ಬಗ್ಗೆ ಹೆಚ್ಚು ಪ್ರಚಾರವಾಗಲಿ

**ಮಂಡ್ಯ:** ಜಿಲ್ಲೆಯ ರೈತರಿಗೆ ಕಂಬೈಂಡ್ ಹಾರ್ವೆಸ್ಟರ್ ಯಂತ್ರಗಳ ಮೂಲಕ ಭತ್ತ ಹಾಗೂ ರಾಗಿ ಬೆಳೆಗಳ ಕಟಾವಿನ ಬಾಡಿಗೆ ದರ ನಿಗಧಿಯ ಬಗ್ಗೆ ಪತ್ರಿಕೆ ಹಾಗೂ ನಾಮಫಲಕಗಳಲ್ಲಿ ಹೆಚ್ಚು ಪ್ರಚಾರವಾಗಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ಕೃಷಿ ಇಲಾಖೆಗೆ ಸಂಬಂಧಿಸಿದ ವಿವಿಧ ವಿಷಯಗಳ ಬಗ್ಗೆ ಸಭೆ ನಡೆಸಿ ಮಾತನಾಡಿದರು. 2024 -25 ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯ ನೆರೆಯ ಜಿಲ್ಲೆಗಳ ವ್ಯಾಪ್ತಿಯಲ್ಲಿ ಭತ್ತ ಕಂಬೈಂಡ್ ಹಾರ್ವೆಸ್ಟರ್ಗಳ ಬಾಡಿಗೆ ದರಗಳನ್ನು ನಿಗದಿಪಡಿಸಿದರು. ಚೈನ್ ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 2,500 ರೂಗಳು, ಟೈರ್ (ಗ್ರಿಪ್) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 2000 ರೂ, ಟೈರ್ (ಸಾಮಾನ್ಯ) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 1,800 ರೂ ಹಾಗೂ ರಾಗಿ ಯಂತ್ರಕ್ಕೆ ಪ್ರತಿ ಗಂಟೆಗೆ 2,900 ರೂ ಗಳನ್ನು ನಿಗಧಿ ಪಡಿಸಿದರು. ಜಿಲ್ಲೆಯಲ್ಲಿ 2024-25 ನೇ ಸಾಲಿನ ಮುಂಗಾರು ಹಂಗಾಮಿನ ಭತ್ತ ಬೆಳೆಯ ಒಟ್ಟು ವಿಸ್ತೀರ್ಣ - 57,804 ಹೆಕ್ಟೇರ್, ರಾಗಿ-54,018 ಹೆಕ್ಟೇರ್ ಹಾಗೂ ಕಬ್ಬು ಬೆಳೆಯ ವಿಸ್ತೀರ್ಣವು - 40,361ಹೆಕ್ಟೇರ್ ಇದೆ ಎಂದರು.

ಕರ್ನಾಟಕ ರೈತ ಸುರಕ್ಷಾ -ಪ್ರಧಾನ ಮಂತ್ರಿ ಬಿಮಾ (ವಿಮಾ) ಯೋಜನೆಯು ಅತಿವೃಷ್ಟಿ/ ಅನಾವೃಷ್ಟಿ, ಅಕಾಲಿಕ ಮಳೆ ಮುಂತಾದ ಪ್ರಕೃತಿ ವಿಕೋಪಗಳು ಸೇರಿದಂತೆ ಹಲವು ಕಾರಣಗಳಿಂದ ಬೆಳೆನಷ್ಟ ಸಂಭವಿಸಿದ್ದರೆ ರೈತರಿಗೆ ಪರಿಹಾರ ನೀಡುವ ಮೂಲಕ ಭದ್ರತೆ ಒದಗಿಸುವುದು ಯೋಜನೆಯ ಉದ್ದೇಶವಾಗಿದೆ. ಇದರಿಂದ ರೈತರಿಗೆ ಕೃಷಿಯಲ್ಲಿ ಆಧುನಿಕ ಬೇಸಾಯ ಪದ್ಧತಿಯನ್ನು ಹೆಚ್ಚಿನ ಬೆಲೆ ಪರಿಕರಗಳನ್ನು ಹಾಗೂ ಉನ್ನತಮಟ್ಟದ ತಂತ್ರಜ್ಞಾನವನ್ನು ಅಳವಡಿಸಲು ಪ್ರೋತ್ಸಾಹ ನೀಡಿದಂತಾಗುತ್ತದೆ ಎಂದರು.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಭೀಮಾ ಯೋಜನೆಯು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಿಂಗಾರು ಹಂಗಾಮಿಗೆ ಮದ್ದೂರು, ಮಂಡ್ಯ, ನಾಗಮಂಗಲ, ಪಾಂಡವಪುರ ಮತ್ತು ಶ್ರೀರಂಗಪಟ್ಟಣ ತಾಲ್ಲೂಕುಗಳ ಅಧಿಸುಚಿತ ಗ್ರಾಮ ಪಂಚಾಯಿತಿಗಳಲ್ಲಿ ಹುರುಳಿ (ಮಳೆಯಾಶ್ರಿತ) ಬೆಳೆಗೆ ರೈತರು ಬೆಳೆ ವಿಮೆಗೆ ನೊಂದಾಯಿಸಬಹುದಾಗಿರುತ್ತದೆ. ಬೇಸಿಗೆ ಹಂಗಾಮಿಗೆ ಮಂಡ್ಯ, ಪಾಂಡವಪುರ ಮತ್ತು ಶ್ರೀರಂಗಪಟ್ಟಣ ತಾಲೂಕುಗಳ ಅಧಿಸೂಚಿತ ಗ್ರಾಮ ಪಂಚಾಯಿತಿಗಳಲ್ಲಿ ಭತ್ತ (ನೀರಾವರಿ) ಬೆಳೆಗೆ ರೈತರು ಬೆಳೆ ವಿಮೆಗೆ ನೋಂದಾಯಿಸಬಹುದಾಗಿರುತ್ತದೆ ಎಂದರು. ಹೋಬಳಿ ಮಟ್ಟದಲ್ಲಿ ಹಿಂಗಾರು ಹಂಗಾಮಿಗೆ ಮಂಡ್ಯ, ಮದ್ದೂರು, ಮಳವಳ್ಳಿ, ಪಾಂಡವಪುರ, ಕೆ ಆರ್ ಪೇಟೆ, ನಾಗಮಂಗಲ ಅಧಿಸೂಚಿತ ಹೋಬಳಿಗಳಲ್ಲಿ ಭತ್ತ (ನೀರಾವರಿ), ರಾಗಿ (ನೀರಾವರಿ), ರಾಗಿ (ಮಳೆ ಆಶ್ರಿತ) ಮತ್ತು ಹುರುಳಿ (ಮಳೆಯಾಶ್ರಿತ) ಬೆಳೆಗಳಿಗೆ ರೈತರು ಬೆಳೆ ವಿಮೆಗೆ ನೋಂದಾಯಿಸಬಹುದಾಗಿರುತ್ತದೆ. ಪಾಂಡವಪುರ ತಾಲೂಕಿನ ಚಿನಕುರಳಿ, ಮೇಲುಕೋಟೆ ಮತ್ತು ಕಸಬಾ ಹೋಬಳಿಗಳಲ್ಲಿ ಟಮೋಟ ಬೆಳೆಗೆ ವಿಮೆಗೆ ನೋಂದಾಯಿಸಬಹುದು.

ಬೇಸಿಗೆ ಹಂಗಾಮಿಗೆ ಮಂಡ್ಯ, ಮದ್ದೂರು, ಮಳವಳ್ಳಿ, ಪಾಂಡವಪುರ, ಕೆ ಆರ್ ಪೇಟೆ, ನಾಗಮಂಗಲ ಅಧಿಸೂಚಿತ ಹೋಬಳಿಗಳಲ್ಲಿ ಭತ್ತ (ನೀರಾವರಿ) ಮತ್ತು ರಾಗಿ (ನೀರಾವರಿ) ಬೆಳೆಗಳಿಗೆ ರೈತರು ಬೆಳೆ ವಿಮೆಗೆ ನೋಂದಾಯಿಸಬಹುದು ಹಾಗೂ ಪಾಂಡವಪುರ ತಾಲೂಕಿನ ಮೇಲುಕೋಟೆ ಹೋಬಳಿಯಲ್ಲಿ ಟಮೋಟ ಬೆಳೆಗೆ ನೋಂದಾಯಿಸಬಹುದು ಎಂದು ತಿಳಿಸಿದರು.

### ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ

**2024 -25 ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದಲ್ಲಿ ನೀರಿನ ಮಿತ ಬಳಕೆ ಹಾಗೂ ಲಭ್ಯವಿರುವ ನೀರನ್ನು ಸಮರ್ಥ ಬಳಕೆ ಮಾಡುವಲ್ಲಿ ಅನುವಾಗುವಂತೆ ಸೂಕ್ಷ್ಮ ನೀರಾವರಿ ಘಟಕಗಳಾದ ತುಂತುರು ಹಾಗೂ ಹನಿ ನೀರಾವರಿ ಘಟಕಗಳನ್ನು ಅಳವಡಿಸಿಕೊಳ್ಳಲು ಎಲ್ಲಾ ಅರ್ಹ ಸಣ್ಣ/ ಅತಿ ಸಣ್ಣ ರೈತರಿಗೆ ಗರಿಷ್ಠ ಎರಡು ಹೆಕ್ಟರ್ ಪ್ರದೇಶದವರೆಗೆ ಶೇಕಡ 90% ರವರೆಗೂ ಸಹಾಯಧನ ನೀಡಲಾಗುವುದು. ಎರಡು ಹೆಕ್ಟರ್ ಮೇಲ್ಪಟ್ಟ ದೊಡ್ಡ ರೈತರಿಗೆ ಶೇಕಡ 45% ರಷ್ಟು ಸಹಾಯಧನ ನೀಡಲಾಗುತ್ತದೆ.**

**ಜಿಲ್ಲೆಯ ರೈತರಿಗೆ ಅನುಕೂಲವಾಗುವಂತೆ ಎಲ್ಲಾ ಯೋಜನೆಗಳ ಬಗ್ಗೆ ಮಾಹಿತಿಯನ್ನು ಒದಗಿಸುವಲ್ಲಿ ಕೃಷಿ ಇಲಾಖೆಯು ಮುಂದಾಗಬೇಕು ಎಂದು ಡಿಸಿ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವಿರ್ ಆಸೀಫ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್ ಉಪಸ್ಥಿತರಿದ್ದರು.**



# ಕನ್ನಡ ಸಾಹಿತ್ಯ ಸಮ್ಮೇಳನ; ಶಾಲಾ ಮಕ್ಕಳ ರಸಪ್ರಶ್ನೆ ಸ್ಪರ್ಧಾ ಪರೀಕ್ಷೆಗೆ ಚಾಲನೆ

**ಮಂಡ್ಯ:** 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಪ್ರಚಾರ ಸಮಿತಿ ವತಿಯಿಂದ ಜಿಲ್ಲೆಯ ಪ್ರೌಢಶಾಲಾ ಮಕ್ಕಳಿಗೆ ಕನ್ನಡ ನಾಡು, ನುಡಿ, ಸಂಸ್ಕೃತಿ, ಸಾಹಿತ್ಯ ಮತ್ತು ವಿಶೇಷವಾಗಿ ಮಂಡ್ಯ ಜಿಲ್ಲಾ ಸಾಹಿತ್ಯ ಇತಿಹಾಸ ವೈಶಿಷ್ಟ್ಯಗಳ ಕುರಿತು ಹಮ್ಮಿಕೊಳ್ಳಲಾಗಿರುವ ರಸಪ್ರಶ್ನೆ ಸ್ಪರ್ಧಾ ಪರೀಕ್ಷೆಗೆ ಪ್ರಶ್ನೆಪತ್ರಿಕೆಯನ್ನು ಬಿಡುಗಡೆ ಮಾಡುವ ಮೂಲಕ ಜಿಲ್ಲಾಧಿಕಾರಿ ಡಾ ಕುಮಾರ ಅವರು ಇಂದು ನಗರದ ಕಾರ್ಮೆಲ್ ಕಾನ್ವೆಂಟ್ ಶಾಲೆಯಲ್ಲಿ ಚಾಲನೆ ನೀಡಿದರು.



ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಜಿಲ್ಲೆಯಲ್ಲಿ ಡಿಸೆಂಬರ್ 20,21,22 ರಂದು 3 ದಿನಗಳ ಕಾಲ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಮ್ಮಿಕೊಂಡಿರುವುದು ಬಹಳ ಸಂತೋಷ ಹಾಗೂ ಹೆಮ್ಮೆಯ ವಿಷಯವಾಗಿದೆ. ಕನ್ನಡ ಭಾಷೆಯ ಅಭಿವೃದ್ಧಿ ಹಾಗೂ ಸಾಹಿತ್ಯದ ಬೆಳವಣಿಗೆಯ ಉದ್ದೇಶದಿಂದ ಸಮ್ಮೇಳನವನ್ನು ಆಯೋಜಿಸಲಾಗುತ್ತದೆ. ಸಮ್ಮೇಳನದ ಅಂಗವಾಗಿ ಮಕ್ಕಳಲ್ಲಿ ಸಾಮಾನ್ಯ ಜ್ಞಾನದ ಜೊತೆಗೆ ಕನ್ನಡ ನಾಡು ನುಡಿಯ ಬಗ್ಗೆ ಎಷ್ಟು ಜ್ಞಾನವನ್ನು ಹೊಂದಿದ್ದಾರೆ ಎಂಬುದನ್ನು ತಿಳಿಯಲು ರಸ ಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಗಳು ಕೂಡ ಪಠ್ಯ ವಿಷಯದ ಜೊತೆಗೆ ಸಾಮಾನ್ಯ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು ಎಂದರು.

ಮಂಡ್ಯದಲ್ಲಿ ನಡೆಯುತ್ತಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಐತಿಹಾಸಿಕ ದಾಖಲೆಯಾಗಬೇಕು. ಜಿಲ್ಲೆಯಲ್ಲಿ 522 ಪ್ರೌಢಶಾಲೆಗಳಿದ್ದು, ಎಲ್ಲಾ ಶಾಲೆಯಿಂದ ಸುಮಾರು 68,865 ಮಕ್ಕಳಿದ್ದು ಎಲ್ಲಾ ಮಕ್ಕಳು ಈ ಪರೀಕ್ಷೆಯಲ್ಲಿ ಭಾಗವಹಿಸುತ್ತಿದ್ದಾರೆ ಎಂದರು.

ಪ್ರಶ್ನೆ ಪತ್ರಿಕೆಯಲ್ಲಿ 87 ಪ್ರಶ್ನೆಗಳಿದ್ದು, ಪರೀಕ್ಷೆಯಲ್ಲಿ ಭಾಗವಹಿಸುವ ಎಲ್ಲಾ ಮಕ್ಕಳ ಕುಟುಂಬಗಳಿಗೂ ಆಹ್ವಾನವನ್ನು ನೀಡಲಾಗಿದೆ. ಮಕ್ಕಳಿಗೆ ನಾಡು ನುಡಿಯ ಬಗ್ಗೆ ಅರಿವು ಮತ್ತು ಜಾಗೃತಿ ನೀಡುವುದರ ಜೊತೆಗೆ ಜಿಲ್ಲೆಯ ಸುಮಾರು 68,000 ಕುಟುಂಬಗಳಿಗೆ ಸಮ್ಮೇಳನದ ಆಹ್ವಾನವು ತಲುಪುತ್ತದೆ ಎಂದರು.

ಪರೀಕ್ಷೆ ಮೊದಲು ಶಾಲಾ ಹಂತದಲ್ಲಿ ಜಿಲ್ಲೆಯಾದ್ಯಂತ ಏಕಕಾಲಕ್ಕೆ ನಡೆಯಲಿದ್ದು, ನಂತರ ಪ್ರತಿ ಶಾಲೆಯಿಂದ ವಿಜೇತ ಒಬ್ಬ ವಿದ್ಯಾರ್ಥಿಯನ್ನು ಆಯ್ಕೆ ಮಾಡಿ ತಾಲ್ಲೂಕು ಹಂತದಲ್ಲಿ ಸ್ಪರ್ಧೆ ನಡೆಸಲಾಗುವುದು. ತಾಲೂಕು ಹಂತದಲ್ಲಿ ಆಯ್ಕೆಗೊಂಡ ಮಕ್ಕಳಿಗೆ ಬಹುಮಾನ, ಪ್ರಮಾಣ ಪತ್ರ ವಿತರಿಸಲಾಗುತ್ತದೆ. ತಾಲ್ಲೂಕು ಹಂತದಲ್ಲಿ ಪ್ರತಿ ತಾಲ್ಲೂಕಿನಿಂದ ಮೂರು ಮಕ್ಕಳನ್ನು ಆಯ್ಕೆ ಮಾಡಿ ಜಿಲ್ಲಾ ಹಂತದಲ್ಲಿ ಪರೀಕ್ಷೆ ನಡೆಸಲಾಗುತ್ತದೆ. ಜಿಲ್ಲಾ ಹಂತದಲ್ಲಿ ಆಯ್ಕೆಗೊಂಡ ಮೂರು ಮಕ್ಕಳಿಗೆ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮುಖ್ಯ ವೇದಿಕೆಯಲ್ಲಿ ಬಹುಮಾನ, ಪ್ರಮಾಣ ಪತ್ರ ವಿತರಿಸಲಾಗುತ್ತದೆ ಎಂದು ತಿಳಿಸಿದರು.

ಇದರಲ್ಲಿ ಜಿಲ್ಲೆಯಲ್ಲಿ ಸುಮಾರು 157 ಪದವಿ ಪೂರ್ವ ಕಾಲೇಜಿಗಳಿದ್ದು ಅದರಲ್ಲಿ ಸುಮಾರು 28,000 ಮಕ್ಕಳು ಈ ಪರೀಕ್ಷೆಯಲ್ಲಿ ಭಾಗವಹಿಸಲಿದ್ದಾರೆ. ಕಾಲೇಜು, ತಾಲೂಕು ಮತ್ತು ಜಿಲ್ಲಾ ಹಂತದಲ್ಲಿ ಪರೀಕ್ಷೆ ನಡೆಯಲಿದ್ದು, ಜಿಲ್ಲೆಯಲ್ಲಿ ಆಯ್ಕೆಗೊಂಡ ವಿಜೇತ ಮಕ್ಕಳಿಗೆ ಸಾಹಿತ್ಯ ಸಮ್ಮೇಳನ ಪ್ರಧಾನ ವೇದಿಕೆಯಲ್ಲಿ ಬಹುಮಾನ ಮತ್ತು ಪ್ರಮಾಣ ಪತ್ರ ವಿತರಿಸಲಾಗುತ್ತದೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ನ ಜಿಲ್ಲಾ ಸಂಚಾಲಕಿ ಮೀರಾ ಶಿವಲಿಂಗಯ್ಯ ಅವರು ಮಾತನಾಡಿ, ವಿದ್ಯಾರ್ಥಿ ದೆಸೆಯಲ್ಲಿ ನಾವು ಕನ್ನಡ ಪ್ರಜ್ಞೆ, ಕನ್ನಡ ಪ್ರೇಮವನ್ನು ಜಾಗೃತಿಗೊಳಿಸಬೇಕು. ಕನ್ನಡ ಭಾಷೆಯ ಮೂಲವನ್ನು ತಿಳಿದು ಭಾಷೆಯನ್ನು ಹೇಗೆ ಬೆಳೆಸಬಹುದು ಎಂಬುದರ ಬಗ್ಗೆ ನಮ್ಮ ಚಿತ್ತ ಹರಿಸಬೇಕು ಎಂದರು.

ಸಾಹಿತ್ಯ ಸಂಸ್ಕೃತಿ ಕ್ಷೇತ್ರದಲ್ಲಿ ಆಗುತ್ತಿರುವ ಬದಲಾವಣೆಗಳ ಬಗ್ಗೆ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ತಿಳಿದುಕೊಳ್ಳಬಹುದು. ಕನ್ನಡ ನೆಲ,ಜಲ, ಹೆಣ್ಣು ಭ್ರೂಣ ಹತ್ಯೆಗಳು ಹಾಗೂ ಮುಂತಾದ ಸಮಸ್ಯೆ ಬಗ್ಗೆ ತಜ್ಞರ ವಿಚಾರಗೋಷ್ಠಿ ನಡೆಸುವುದು ಹಾಗೂ ಅದೆಲ್ಲದರ ಬಗ್ಗೆ ಅರಿವು ಮೂಡಿಸುವುದು ಸಾಹಿತ್ಯ ಸಮ್ಮೇಳನದ ಆಶಯವಾಗಿದೆ ಎಂದು ತಿಳಿಸಿದರು.

ಸಾಹಿತ್ಯ ಸಮ್ಮೇಳನದಲ್ಲಿ ರಾಜ್ಯದ ಎಲ್ಲಾ ಸಾಂಸ್ಕೃತಿಕ ಕಲಾತಂಡಗಳಿಂದ ಕಲೆ ಪ್ರದರ್ಶನ ಇರುವುದರಿಂದ ಪ್ರತಿಯೊಬ್ಬರೂ ಪೋಷಕರೊಡನೆ ಬಂದು ಕಲೆಗಳ ಪ್ರಕಾರವನ್ನು ತಿಳಿದುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಸರ್ ಎಂ ವಿಶ್ವೇಶ್ವರಯ್ಯನವರು ಕನ್ನಡ ಸಾಹಿತ್ಯ ಪರಿಷತ್ತ್ ಅನ್ನು ಸ್ಥಾಪಿಸಿದವರಾಗಿದ್ದು, ಅವರುಗಳನ್ನು ಇಂದು ಸ್ಮರಿಸಬೇಕು. ಜಗತ್ತಿನ ಪರಿಪೂರ್ಣ ಭಾಷೆಗಳಲ್ಲಿ ಕನ್ನಡ ಭಾ?ಯೂ ಒಂದಾಗಿದ್ದು, ಕನ್ನಡ ಭಾಷೆಯ ವೈಶಿಷ್ಟ್ಯತೆಯನ್ನು ತಿಳಿದುಕೊಳ್ಳಲು ನಿಮಗೆ ರಸಪ್ರಶ್ನೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಾರ್ಮೆಲ್ ಕಾನ್ವೆಂಟ್ ನ ಸುಪೀರಿಯರ್ ಸಿಸ್ಟರ್ ಗ್ಲಾಡಿಸ್ ಕಾಸ್ಟಲಿನೋ, ಮುಖ್ಯೋಪಾಧ್ಯಾಯರು ಸಿಸ್ಟರ್ ಮೇರಿ ಪೌಲಿನೆ, ಬಿಇಒ ಮಹದೇವು, ಕನ್ನಡ ಸಾಹಿತ್ಯ ಪರಿಷತ್ ನ ಮಾಜಿ ಅಧ್ಯಕ್ಷ ಹಾಗೂ ಪ್ರಶ್ನೆ ಪತ್ರಿಕೆ ತಯಾರಕ ಮಹೇಶ್, ರೆಡ್ ಕ್ರಾಸ್ ಸಂಸ್ಥೆಯ ಜಂಟಿ ಕಾರ್ಯದರ್ಶಿ ರಂಗಸ್ವಾಮಿ, ಪದಾಧಿಕಾರಿಗಳು ಡಾ ಹುಸ್ಕೂರು ಕೃಷ್ಣಗೌಡ, ಚಂದ್ರಲಿಂಗು, ಈವೆಂಟ್ಸ್ ಅಧ್ಯಕ್ಷ ಸಬ್ಬನಹಳ್ಳಿ ಶಶಿಧರ, ಪ್ರಚಾರ ಸಮಿತಿಯ ಸದಸ್ಯರುಗಳಾದ ಕಬ್ಬನಹಳ್ಳಿ ಶಂಭು, ಎಂ ಮಂಚಶೆಟ್ಟಿ ಅವರು ಉಪಸ್ಥಿತರಿದ್ದರು.

## ಯುವನಿಧಿಗೆ ಅರ್ಹರಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್ ಲೋಡ್ ಮಾಡಿ

**2023-24 ನೇ ಸಾಲಿನಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಪದವಿ, ಐಟಿಐ, ಡಿಪ್ಲೋಮಾ ವಿದ್ಯಾರ್ಥಿಗಳ ಮಾಹಿತಿಯನ್ನು ಕಾಲೇಜುಗಳ ಪ್ರಾಂಶುಪಾಲರು ನ್ಯಾಡ್ ಪೋರ್ಟಲ್ ಗೆ ಅಪ್ ಲೋಡ್ ಮಾಡಿಸಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ ತಿಳಿಸಿದರು, ಇಂದು ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಯುವನಿಧಿ ನೋಂದಣಿ ಪ್ರಗತಿ ಪರಿಶೀಲನ ಸಭೆ ನಡೆಸಲಾಯಿತು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರೊಂದಿಗೆ ಸಭೆ ಏರ್ಪಡಿಸಲಾಗಿತ್ತು, ಪದವಿಪೂರ್ವ ಶಿಕ್ಷಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಉದ್ಯೋಗ ವಿನಿಮಯ ಕೇಂದ್ರಗಳ ಅಧಿಕಾರಿಗಳು ಯುವ ಯುವನಿಧಿ ಲಾಗಿನ್ ನಲ್ಲಿ ಬಾಕಿ ಇರುವ ವಿದ್ಯಾರ್ಥಿಗಳ ಅರ್ಜಿಗಳನ್ನು ವಿಲೇ ಮಾಡುವಂತೆ ಸೂಚಿಸಲಾಯಿತು, 2023 -24 ನೇ ಸಾಲಿನ ಅಭ್ಯರ್ಥಿಗಳಿಗೆ 'ಯುವನಿಧಿ' ಯೋಜನೆಯ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಿ ಹಾಗೂ ವಿಶ್ವವಿದ್ಯಾನಿಲಯ ಮತ್ತು ಪ್ರತಿ ಕಾಲೇಜಿನಲ್ಲಿಯೂ ಯುವನಿಧಿ ಯೋಜನೆಗೆ ಸಂಬಂಧಿಸಿ ದಂತೆ ಸಹಾಯವಾಣಿ ಕೇಂದ್ರ ಸ್ಥಾಪಿಸುವುದು ಹಾಗೂ 'ಯುವನಿಧಿ' ಯೋಜನೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು, ಯುವನಿಧಿ ಯೋಜನೆ ಅಡಿಯಲ್ಲಿ ಅಭ್ಯರ್ಥಿಗಳು ನೊಂದಾಯಿಸಿಕೊಳ್ಳಲು ತಾಲೂಕು ಮಟ್ಟ ಹಾಗೂ ಕಾಲೇಜುಗಳಲ್ಲಿ ವಿಶೇನೋಂದಣಿ ಅಭಿಯಾನವನ್ನು ಪ್ರಾರಂಭಿಸಿವುದು ಮತ್ತು 2023-24ನೇ ಸಾಲಿನಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಕಾಲೇಜುಗಳ ಪ್ರಾಂಶುಪಾಲರು ಯುವನಿಧಿ ಯೋಜನೆಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡತಕ್ಕದ್ದು ಎಂದು ತಿಳಿಸಿದರು. ಜಿಲ್ಲೆಯ ಎಲ್ಲಾ ತಾಲೂಕುಗಳ ತಹಶೀಲ್ದಾರರು ಮತ್ತು ಕಾರ್ಯನಿರ್ವಹಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ 'ಯುವನಿಧಿ ಯೋಜನೆಗೆ' ಅರ್ಹರಿರುವ ಅಭ್ಯರ್ಥಿಗಳು ನೋಂದಣಿ ಮಾಡಿಸಿಕೊಳ್ಳುವಂತೆ ವ್ಯಾಪಕ ಪ್ರಚಾರ ನಡೆಸಿ ಎಂದು ತಿಳಿಸಿಸಲಾಯಿತು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಕ್ ತನ್ವೀರ್ ಆಸಿಫ್ ,ಜಿಲ್ಲಾ ಉದ್ಯೋಗ ವಿನಿಮಯಾಧಿಕಾರಿ ನಾಗರಾಜ್, ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ನಾಗನಂದ್ ಆರ್ ಉಪಸ್ಥಿತರಿದ್ದರು.**

# ಸಂಜೆ ಟಿಪ್ಸ್

## ಐಪಿಒ ಬಿಡುಗಡೆಗಾಗಿ ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಕೆ

ಸ್ಟಾರ್ ಅಗ್ರಿವೇರ್ ಹೌಸಿಂಗ್ ಮತ್ತು ಕೊಲ್ಯಾಟರಲ್ ಮ್ಯಾನೇಜ್ ಮೆಂಮೆಂಟ್ ಕಂಪನಿಯು ಸಾರ್ವಜನಿಕ ಷೇರು ಮಾರಾಟ ಅಥವಾ ಆರಂಭಿಕ ಷೇರು ಬಿಡುಗಡೆ(ಐಪಿಒ)ಗಾಗಿ ಮಾರುಕಟ್ಟೆ ನಿಯಂತ್ರಕ ಸಂಸ್ಥೆ ಸೆಕ್ಯೂರಿಟೀಸ್ ಅಂಡ್ ಎಕ್ಸ್ ಚೇಂಜ್ ಬೋರ್ಡ್ ಆಫ್ ಇಂಡಿಯಾ(ಸೆಬಿ)ಗೆ ಕಂಪನಿ ವಹಿವಾಟಿನ ಸಂಕ್ಷಿಪ್ತ ವಿವರವುಳ್ಳ ದಾಖಲೆಪತ್ರ(ಡಿಆರ್ ಎಚ್ ಪಿ)ಗಳ ಕರಡು ಸಲ್ಲಿಸಿದೆ. ಕಂಪನಿಯು ತಂತ್ರಜ್ಞಾನದ ನೇತೃತ್ವದ ಸಮಗ್ರ ಕೃಷಿ ಮೌಲ್ಯ ಸರಪಳಿ ಸೇವೆಗಳ ವೇದಿಕೆಯಾಗಿದ್ದು, ಖರೀದಿ, ವ್ಯಾಪಾರ ಸುಗಮಗೊಳಿಸುವಿಕೆ, ಗೋದಾಮು, ಮೇಲಾಧಾರ(ಅಡಮಾನ) ನಿರ್ವಹಣೆ, ಹಣಕಾಸು ಪರಿಹಾರಗಳು, ಡಿಜಿಟಲ್ ಮಾರುಕಟ್ಟೆ ಮತ್ತು ತಂತ್ರಜ್ಞಾನ ಆಧಾರಿತ ಮೌಲ್ಯವರ್ಧಿತ ದತ್ತಾಂಶದಂತಹ ನಾನಾ ಸೇವೆಗಳನ್ನು ಒದಗಿಸುವಲ್ಲಿ ತೊಡಗಿಸಿಕೊಂಡಿದೆ. ಸಾರ್ವಜನಿಕ ಷೇರು ಮಾರಾಟ ಅಥವಾ ಆರಂಭಿಕ ಷೇರು ಬಿಡುಗಡೆ(ಐಪಿಒ) ಮೂಲಕ ಕಂಪನಿಯು ನಿಧಿ ಕ್ರೋಡೀಕರಣಕ್ಕೆ ಮುಂದಾಗಿದೆ. ಈಕ್ವಿಟಿ ಷೇರುಗಳ ಮಾರಾಟದ ಒಟ್ಟು ಗಾತ್ರದಲ್ಲಿ, 4,500 ದಶಲಕ್ಷ(450 ಕೋಟಿ ರೂ.) ರೂ. ಮೊತ್ತದ ತಾಜಾ ಈಕ್ವಿಟಿ ಷೇರುಗಳು ಮತ್ತು ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ(ಒಎಫ್‌ಎಸ್) ಮೂಲಕ 2,69,19,270 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲು ಯೋಜಿಸಿದೆ. ಸಾರ್ವಜನಿಕ ಷೇರು ಮಾರಾಟ ಕೊಡುಗೆಯಿಂದ ಬರುವ ನಿವ್ವಳ ಆದಾಯ(ನಿಧಿ)ವನ್ನು ಕಂಪನಿಯು ಈ ಕೆಳಕಂಡ ಉದ್ದೇಶಗಳಿಗೆ ಬಳಸಲು ಚಿಂತಿಸಿದೆ. 1. ಕಂಪನಿಯ ದುಡಿಮೆ ಬಂಡವಾಳದ ಅಗತ್ಯಗಳಿಗಾಗಿ 1,200 ದಶಲಕ್ಷ ರೂ.(120 ಕೋಟಿ ರೂ.), 2. ಕಂಪನಿಯ ಮೆಟೀರಿಯಲ್ ಸಬ್ಸಿಡಿಯರಿ ಮತ್ತು ಎಫ್‌ಎಫ್‌ಐಪಿಎಲ್‌ನ ದುಡಿಮೆ ಬಂಡವಾಳ ಅಗತ್ಯಗಳಿಗೆ 1250 ದಶಲಕ್ಷ ರೂ.(125 ಕೋಟಿ ರೂ.), 3. ಮೆಟೀರಿಯಲ್ ಸಬ್ಸಿಡಿಯರಿ, ಎಎಫ್‌ಎಲ್ ಮತ್ತು ಬಂಡವಾಳ ಉದ್ದೇಶಗಳಿಗಾಗಿ 1,000 ದಶಲಕ್ಷ ರೂ. (100 ಕೋಟಿ ರೂ.) ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಉಳಿದ ಮೊತ್ತವನ್ನು ಬಳಸಲು ಉದ್ದೇಶಿಸಿದೆ ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ ಮೂಲಕ ಅಮಿತ್ ಅಗರ್ವಾಲ್ ಅವರಿಗೆ 13,18,126 ಈಕ್ವಿಟಿ ಷೇರುಗಳು, ಅಮಿತ್ ಗೋಯಲ್ ಅವರಿಗೆ 43,93,754 ಈಕ್ವಿಟಿ ಷೇರುಗಳು, ಅಮಿತ್ ಖಂಡೇಲ್ವಾಲ್ ಅವರಿಗೆ 15,005 ಈಕ್ವಿಟಿ ಷೇರುಗಳು, 15,00,000 ವರೆಗಿನ ಈಕ್ವಿಟಿ ಷೇರುಗಳನ್ನು ಸುರೇಶ್ ಚಂದ್ರ ಗೋಯಲ್ ಅವರಿಗೆ ಮಾರಾಟ ಮಾಡಲಿದೆ.

## ಮಟನ್ ಕೈಮಾ ಉಂಡೆ ಸಾರು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮಟನ್ ಕೈಮಾ ಅರ್ಧ ಕೆಜಿ, ಈರುಳ್ಳಿ-2, ಟಮೋಟೋ-1, ಬೆಳ್ಳುಳ್ಳಿ-1, ಶುಂಠಿ ಸ್ವಲ್ಪ, ಹುರಿಗಡಲೆ-2 ಚಮಚ, ತುರಿದ ತೆಂಗಿನಕಾಯಿ ಅರ್ಧ ಕಪ್, ಹಸಿ ಮೆಣಸಿನಕಾಯಿ-4, ಚಕ್ಕೆ-2, ಲವಂಗ-4, ಕಾಳು ಮೆಣಸು-10, ಧನಿಯಾ ಪುಡಿ- ಅರ್ಧ ಚಮಚ, ಅರಿಶಿಣ-1 ಚಮಚ, ಅಡುಗೆ ಎಣ್ಣೆ ಸ್ವಲ್ಪ, ಮೊಟ್ಟೆ-1

### ಮಾಡುವ ವಿಧಾನ

ಮೇಲೆ ತಿಳಿಸಿರುವ ಎಲ್ಲಾ ಮಸಾಲೆ ಪದಾರ್ಥಗಳನ್ನು ಚೆನ್ನಾಗಿ ರುಬ್ಬಿಕೊಳ್ಳಿ. ಈ ಮಸಾಲೆಯಲ್ಲಿ ಸ್ವಲ್ಪ ತೆಗೆದಿಟ್ಟುಕೊಳ್ಳಿ, ನಂತರ ಜಾರ್ ಗೆ ಮಟನ್ ಕೈಮಾ ಹಾಕಿ ರುಬ್ಬಿಕೊಳ್ಳಿ, ಮಸಾಲೆ ಮತ್ತು ಕೈಮಾ ಎರಡನ್ನು ಒಟ್ಟಿಗೆ ಹಾಕಿ ರುಬ್ಬಿ, ನಂತರ ಅದಕ್ಕೆ ಮೊಟ್ಟೆ ಒಡೆದು ಕಲೆಸಿ, ಅದಾದ ನಂತರ ಬೇಕಾದ ಗಾತ್ರಕ್ಕೆ ಉಂಡೆ ಮಾಡಿಕೊಳ್ಳಿ, ಇದಾದ ನಂತರ ಬೇರೊಂದು ಬಾಣಲೆಗೆ ಎಣ್ಣೆ ಹಾಕಿ ಈರುಳ್ಳಿ ಮತ್ತು ಟಮೋಟೋ ಹಾಕಿ ಬಾಡಿಸಿಕೊಳ್ಳಿ, ಅದಕ್ಕೆ ರುಬ್ಬಿದ ಮಿಶ್ರಣ ಸೇರಿಸಿ ಹಸಿ ವಾಸನೆ ಹೋಗುವವರೆಗೂ ಹುರಿಯಿರಿ, ಚೆನ್ನಾಗಿ ಕುದಿ ಬಂದ ನಂತರ, ಅದಕ್ಕೆ ಕೈಮಾ ಉಂಡೆಗಳನ್ನು ಹಾಕಿ ಬೇಯಿಸಿ, ಸುಮಾರು ಅರ್ಧ ಗಂಟೆ ಬೇಯಿಸಿ, ಕೊನೆಯಲ್ಲಿ ಕೊತ್ತಂಬರಿ ಸೊಪ್ಪು ಹಾಕಿ. ಚಪಾತಿ ಮತ್ತು ಅನ್ನದ ಜೊತೆ ಬಡಿಸಿ.

## ಸಮಂತಾ ಸೆನ್ಸೇಷನಲ್ ಪೋಸ್ಟ್ ವೈರಲ್!



ನಾಗ ಚೈತನ್ಯ ಜೊತೆಗಿನ ವಿಚ್ಛೇದನದ ನಂತರ ಸಮಂತಾ ಅನೇಕ ಕಷ್ಟಗಳನ್ನು ಎದುರಿಸಿದರು. ಮೈಯೋಸಿಟಿಸ್ ನಿಂದಾಗಿ ಕೆಲ ವರ್ಷಗಳಿಂದ ಸಿನಿಮಾಗಳಿಂದ ದೂರ ಉಳಿದಿದ್ದ ಸಮಂತಾ ಸದ್ಯ ಸರಣಿ ಚಿತ್ರಗಳಿಗೆ ಗ್ರೀನ್ ಸಿಗ್ನಲ್ ನೀಡುತ್ತಿದ್ದಾರೆ. ಅದರಲ್ಲೂ ನಾಗ ಚೈತನ್ಯ ಜೊತೆ ಬ್ರೇಕ್ ಅಪ್ ಆದ ನಂತರ ತುಂಬಾ ಸೆಲೆಕ್ಟಿವ್ ಆಗಿ ಸಿನಿಮಾ ಮಾಡುತ್ತಿದ್ದಾರೆ. ಇತ್ತೀಚೆಗೆ ಬಾಲಿವುಡ್ ನಲ್ಲಿ ಅವರು 'ಸಿಟಾಡೆಲ್ (ಹನಿ, ಬನ್ನಿ)' ವೆಬ್ ಸರಣಿಯಲ್ಲಿ ನಟಿಸಿದ್ದಾರೆ. ಈ ವೆಬ್ ಸರಣಿಯಲ್ಲಿ ವರುಣ್ ಧವನ್ ನಾಯಕ. ಇತ್ತೀಚೆಗಷ್ಟೇ ಪ್ರೇಕ್ಷಕರ ಮುಂದೆ ಬಂದಿರುವ ಈ ಚಿತ್ರ ಮಿಶ್ರ ಟಾಕ್ ಪಡೆದುಕೊಂಡಿದೆ. ನಾಯಕ ವರುಣ್ ಧವನ್ ಜೊತೆ ಸಮಂತಾ ಡೀಪ್ ಲಿಪ್ ಲಾಕ್ ದೃಶ್ಯಗಳಲ್ಲಿ ನಟಿಸಿದ್ದಾರೆ. ಮತ್ತೊಂಡೆದೆ ಸಮಂತಾ ಮಾಜಿ ಪತಿ ನಾಗ ಚೈತನ್ಯ ಎರಡನೇ ಬಾರಿಗೆ ನಟಿ ಸೋಭಿತಾ ಅವರನ್ನು ಪ್ರೀತಿಸಿ ಮದುವೆಯಾದರು. ಇದರೊಂದಿಗೆ ಸಮಂತಾ ಎರಡನೇ ಮದುವೆ ಬಗ್ಗೆ ಹಲವು ಗಾಸಿಪ್ ಗಳು ತೆರೆಗೆ ಬಂದಿದ್ದವು.

ಸ್ಟಾರ್ ಡೈರೆಕ್ಟರ್ ಜೊತೆ ಸಮಂತಾ ರಿಲೇಶನ್ ಶಿಪ್ ನಲ್ಲಿದ್ದಾರೆ ಎಂಬ ಸುದ್ದಿ ಹಬ್ಬಿತ್ತು. ಆ ಸ್ಟಾರ್ ಡೈರೆಕ್ಟರ್ ಬೇರೆ ಯಾರೂ ಅಲ್ಲ ರಾಜು ನಿಡುಮೋರು. ಸಮಂತಾ ಅಭಿನಯದ ಫ್ಯಾಮಿಲಿ ಮ್ಯಾನ್ ವೆಬ್ ಸರಣಿಯನ್ನು ರಾಜು ನಿಡುಮೋರು ನಿರ್ದೇಶಿಸಿದ್ದಾರೆ. ಇದರಿಂದಾಗಿ ಇವರಿಬ್ಬರು ಬಹಳ ದಿನಗಳಿಂದ ಡೇಟಿಂಗ್ ಮಾಡುತ್ತಿದ್ದಾರೆ ಎಂದು ಹೇಳಲಾಗುತ್ತಿತ್ತು.. ಫ್ಯಾಮಿಲಿ ಮ್ಯಾನ್ ವೆಬ್ ಸೀರೀಸ್ ವೇಳೆಯೇ ಇವರಿಬ್ಬರ ನಡುವೆ ಪ್ರೇಮದ ಮೊಳಕೆಯೊಡೆದಿತ್ತು ಎಂಬ ವರದಿಗಳಿವೆ.

ಅವರಿಗೆ ಈಗಾಗಲೇ ಮದುವೆಯಾಗಿದ್ದು, ಸದ್ಯದಲ್ಲೇ ಪತ್ನಿಗೆ ವಿಚ್ಛೇದನ ನೀಡಿ ಸಮಂತಾ ಅವರನ್ನು ಮದುವೆಯಾಗಲು ಸಿದ್ಧರಾಗಲಿದ್ದಾರೆ ಎಂದು ಬಾಲಿವುಡ್ ಮಾಧ್ಯಮಗಳಲ್ಲಿ ಹರಿದಾಡುತ್ತಿತ್ತು.. ಇದೇ ವೇಳೇ ಸಮಂತಾ ಸ್ಟೋರಿ ಶೇರ್ ಮಾಡುವ ಮೂಲಕ ತಮ್ಮ ಎರಡನೇ ಮದುವೆಯ ಬಗ್ಗೆ ಹಿಂಟ್‌ವೊಂದನ್ನು ಬಿಟ್ಟುಕೊಟ್ಟಿದ್ದಾರೆ.. 2025 ಕ್ಕೆ ಯಾವುದೇ ದೊಡ್ಡ ಪ್ಲಾನ್‌ಗಳಿಲ್ಲ.. ನಿಷ್ಠಾವಂತ ಸಂಗಾತಿ ಸಿಕ್ಕರೇ ಮದುವೆಯಾಗುವುದು.. ಕೆಲಸದಲ್ಲಿ ಬ್ಯುಸಿಯಾಗಿರುವುದು.. ಒಳ್ಳೆಯ ಹಣ ಸಂಪಾದಿಸುವುದು ಎಂದು ಬರೆದಿರುವ ಪೋಸ್ಟ್ ಹಂಚಿಕೊಂಡಿದ್ದಾರೆ.. ಸದ್ಯ ಸಮಂತಾ ಮಾಡಿರುವ ಪೋಸ್ಟ್ ವೈರಲ್ ಆಗಿದೆ.

## ಬಾಯಿಯಿಂದ ಕೆಟ್ಟ ವಾಸನೆ



### ಹೆಲ್ತ್ ಟಿಪ್ಸ್

ಬಾಯಿಯಿಂದ ಕೆಟ್ಟ ವಾಸನೆ ಬರುವುದೂ ಒಂದು ಸಮಸ್ಯೆ. ಇದರಿಂದ ಪರಿಹಾರ ಪಡೆಯಲು ಅನೇಕರು ಹೆಣಗಾಡುತ್ತಿದ್ದಾರೆ. ನಿಮಗಿರುವ ಬಾಯಿ ವಾಸನೆ ಸಮಸ್ಯೆಯಿಂದ ಅನೇಕರು ನಿಮ್ಮ ಜತೆ ಮಾತನಾಡಲು ಭಯ ಬೀಳುತ್ತಿರಬಹುದು. ಹೀಗಾಗಿ ಇದು ನೇರವಾಗಿ ನಿಮ್ಮ ವ್ಯಕ್ತಿತ್ವದ ಮೇಲೆ ಪರಿಣಾಮ ಬೀರುತ್ತದೆ ಎಂದರೂ ತಪ್ಪಾಗಲಾರದು. ಹಲ್ಲು ಉಜ್ಜದೆ ಬಾಯಿ ವಾಸನೆ ಬರುವುದು ಬೇರೆ. ಆದರೆ, ಪ್ರತಿದಿನ ಹಲ್ಲುಜ್ಜಿದ ನಂತರವೂ ಬಾಯಿಯಿಂದ ದುರ್ವಾಸನೆ ಬರುತ್ತಿದೆ ಎಂದರೆ ನಿಮ್ಮಲ್ಲಿ ಸಮಸ್ಯೆ ಇದೆ ಎಂದರ್ಥ. ಮೂತ್ರಪಿಂಡ ಮತ್ತು ಪಿತ್ತಜನಕಾಂಗದ ಹಾನಿಯಿಂದಲೂ ಬಾಯಿವಾಸನೆ ಬರುತ್ತದೆ

ಸಾಬೀತಾಗಿದೆ. ಬಾಯಿಯ ದುರ್ವಾಸನೆಯನ್ನು ತಡೆಯಲು ಮೌತ್ ಫ್ರೆಶ್ನರ್ ಅಥವಾ ರಾಸಾಯನಿಕ ಭರಿತ ಟೂತ್‌ಪೇಸ್ಟ್‌ಗಳನ್ನು ಬಳಕೆ ಮಾಡಲಾಗುತ್ತದೆ. ಇದರ ಜತೆಗೆ ಮನೆ ಮದ್ದಿನ ಮೂಲಕವೂ ಬಾಯಿ ವಾಸನೆಯಿಂದ ಮುಕ್ತಿ ಪಡೆಯಬಹುದು.

**ಹೆಚ್ಚು ನೀರು ಕುಡಿಯಿರಿ:** ಬಾಯಿಯಿಂದ ಕೆಟ್ಟ ವಾಸನೆಯನ್ನು ತೆಗೆದುಹಾಕಲು ಇದು ರಾಮಬಾಣ. ಬಾಯಿಯಿಂದ ದುರ್ವಾಸನೆ ಬರುತ್ತಿದ್ದರೆ, ಆಗಾ ಬಾಯಿಯನ್ನು ನೀರಿನಿಂದ ತೊಳೆಯಿರಿ ಮತ್ತು ಹೆಚ್ಚು ಹೆಚ್ಚು ನೀರನ್ನು ಕುಡಿಯಿರಿ. ಕಡಿಮೆ ಪ್ರಮಾಣದಲ್ಲಿ ನೀರು ಕುಡಿಯುವುದು ಕೂಡ ಬಾಯಿ ವಾಸನೆಗೆ ಕಾರವಾಗಬಹುದು. ಹೀಗಾಗಿ, ಆಗ್ಗಾಗ ನೀರು ಕುಡಿದರೆ ಬಾಯಿ ತಾಜಾತನದಿಂದ ಕೂಡಿರುತ್ತದೆ.

**ಸಾಸಿವೆ ಎಣ್ಣೆ:** ಬಾಯಿ ವಾಸನೆ ಎಂಬುದು ಯಾವಾಗಲೂ ಕಾಡುತ್ತಿದೆಯೇ? ಹಾಗಿದ್ದರೆ ಈ ದುರ್ವಾಸನೆಯನ್ನು ತೊಡೆದುಹಾಕಲು, ಸಾಸಿವೆ ಎಣ್ಣೆಗೆ ಪ್ರತಿದಿನ ಉಪ್ಪು ಬೆರೆಸಿ ಒಸಡು ಮತ್ತು ಹಲ್ಲುಗಳಿಗೆ ಮಸಾಜ್ ಮಾಡಿ. ಇದು ಬಹಳ ಪ್ರಯೋಜನಕಾರಿ ಎಂದು ಸಾಬೀತಾಗಿದೆ.

**ಒಣ ಕೊತ್ತಂಬರಿ:** ಒಣ ಕೊತ್ತಂಬರಿ ಸೇವನೆಯಿಂದ ಬಾಯಿ ತಾಜಾತನದಿಂದ ಕೂಡಿರುತ್ತದೆ. ಇಡೀ ಕೊತ್ತಂಬರಿಯನ್ನು ಅಗಿಯುವುದರಿಂದ ಬಾಯಿಯ ದುರ್ವಾಸನೆ ಹೋಗುತ್ತದೆ.

**ವಿಟಮಿನ್ ಸಿ ಬಳಕೆ:** ಬಾಯಿಯ ಕೆಟ್ಟ ವಾಸನೆಯನ್ನು ತೆಗೆದುಹಾಕಲು ವಿಟಮಿನ್ ಸಿ ತುಂಬಾ ಪ್ರಯೋಜನಕಾರಿ ಎಂಬುದು ಸಾಬೀತಾಗಿದೆ. ವಿಟಾಮಿನ್ ಸಿ ಬ್ಯಾಕ್ಟೀರಿಯಾಗಳ ವಿರುದ್ಧ ಹೋರಾಡುವ ಶಕ್ತಿಯನ್ನು ಹೊಂದಿದೆ. ಹೀಗಾಗಿ, ನಿಂಬೆ, ಕಿತ್ತಳೆ, ದ್ರಾಕ್ಷಿ ಮುಂತಾದ ಹಣ್ಣುಗಳನ್ನು ತಿನ್ನುವುದರಿಂದ ಬಾಯಿಯ ದುರ್ವಾಸನೆಯನ್ನು ಹೋಗಲಾಡಿಸಬಹುದು.

**ಸೋಂಪು:** ಬಾಯಿಯ ದುರ್ವಾಸನೆಯನ್ನು ತೆಗೆದುಹಾಕಲು ಸೋಂಪು ಅತ್ಯಂತ ಪರಿಣಾಮಕಾರಿ ಮಾರ್ಗವಾಗಿದೆ. ಅದೇ ರೀತಿ ಲವಂಗ ಅಥವಾ ಏಲಕ್ಕಿಯನ್ನು ಸಹ ಬಳಸಬಹುದು. ಇವುಗಳು ಹಲ್ಲು ಮತ್ತು ಬಾಯಿಯ ದುರ್ವಾಸನೆಯನ್ನು ತಡೆಯುತ್ತದೆ.

## ಪುರುಷರಿಗೆ ಸೌಂದರ್ಯ ಸಲಹೆ

### ಬ್ಯೂಟಿ ಟಿಪ್ಸ್



**ಟೊಮ್ಯಾಟೋ ಜ್ಯೂಸ್:** ಚರ್ಮಕ್ಕೆ ಸಂಬಂಧಿಸಿದ ಕೆಲವು ಸಮಸ್ಯೆಗಳ ನಿವಾರಣೆಗೆ ಟೊಮ್ಯಾಟೋ ರಾಮಬಾಣ ಇದ್ದಂತೆ. ಟೊಮ್ಯಾಟೋದಲ್ಲಿ ಅಥವಾ ಟೊಮ್ಯಾಟೋ ರಸದಲ್ಲಿ ಬಹಳಷ್ಟು ವಿಟಮಿನ್ ಸಿ ಇರುತ್ತದೆ. ವಾರಕ್ಕೆ ಕನಿಷ್ಠ ಎರಡು ಬಾರಿಯಾದರೂ ಟೊಮ್ಯಾಟೋ ರಸಕ್ಕೆ ಸ್ವಲ್ಪ ನಿಂಬೆ ರಸವನ್ನು ಮಿಕ್ಸ್ ಮಾಡಿ ಇದನ್ನು ಮುಖ ಮತ್ತು ಕುತ್ತಿಗೆಯ ಬಾಗಕ್ಕೆ ಮಾಸ್ಕ್ ರೀತಿ ಹಚ್ಚಿ. ಅದು ಒಣಗಿದ ನಂತರ ಮುಖ ತೊಳೆಯಿರಿ. ಇದು ನಿಮ್ಮ ಚರ್ಮವನ್ನು ಹೊಳೆಯುವಂತೆ ಮಾಡುತ್ತದೆ.

**ಕಡಲೆ ಹಿಟ್ಟು ಮತ್ತು ಮೊಸರು:** ಮೊಡವೆಗಳು, ಕಲೆಗಳು, ಟ್ಯಾನಿಂಗ್ ಇತ್ಯಾದಿ ಚರ್ಮದ ಸಮಸ್ಯೆಗಳನ್ನು ಹೋಗಲಾಡಿಸಲು ಕಡಲೆ ಹಿಟ್ಟು ಮತ್ತು ಮೊಸರಿನಿಂದ ಮಾಡಿದ ಫೇಸ್ ಪ್ಯಾಕ್ ಅನ್ನು ಹಚ್ಚಿ. ಮೊಸರು ಮತ್ತು ಕಡಲೇ ಹಿಟ್ಟನ್ನು ಸಮಾನ ಪ್ರಮಾಣದಲ್ಲಿ ಮಿಶ್ರಣ ಮಾಡಿ ಮತ್ತು ಅದನ್ನು ಮುಖ ಮತ್ತು ಕುತ್ತಿಗೆಗೆ ಹಚ್ಚಿ. 10-15 ನಿಮಿಷಗಳ ನಂತರ ಪೇಸ್ಟ್ ಒಣಗಿದಾಗ, ಮುಖವನ್ನು ಶುದ್ಧ ನೀರಿನಿಂದ ತೊಳೆಯಿರಿ. ವಾರಕ್ಕೆ ಎರಡು ಬಾರಿ ಈ ಪರಿಹಾರವನ್ನು ಅನುಸರಿಸಿ.

**ಸೇಬು:** ಎಣ್ಣೆಯುಕ್ತ ಚರ್ಮ, ಮೊಡವೆ ಇತ್ಯಾದಿ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಸೇಬಿನ ತುಂಡನ್ನು ಚೆನ್ನಾಗಿ ಪೇಸ್ಟ್ ಮಾಡಿ, ನಂತರ 1 ಟೀಚಮಚ ಮೊಸರು, 1 ಟೀಚಮಚ ನಿಂಬೆ ಮಿಶ್ರಣ ಮಾಡಿ ಮತ್ತು ಅದನ್ನು ಮುಖಕ್ಕೆ ಹಚ್ಚಿ. ಇದು ಒಣಗಿದ ನಂತರ 10-15 ನಿಮಿಷಗಳ ನಂತರ ಮುಖವನ್ನು ಶುದ್ಧ ನೀರಿನಿಂದ ತೊಳೆಯಿರಿ.

## ಕ್ರಿಸ್ಮಸ್ ಮತ್ತು ಹೊಸ ವರ್ಷ ಸಂಭ್ರಮಕ್ಕಾಗಿ ವಂಡರ್ ಲಾ ವಿಶೇಷ ಪಾಸ್ ಕೊಡುಗೆ




ಭಾರತದ ಅತಿ ದೊಡ್ಡ ಅಮ್ಯೂಸ್ಮೆಂಟ್ ಪಾರ್ಕ್ ಚೈನ್ ಆದ ವಂಡರ್ ಲಾ ಹಾಲಿಡೇಸ್ ಲಿ., ಡಿಸಂಬರ್ 21ರಿಂದ ವಿಶೇಷವಾದ ಕ್ರಿಸ್ಮಸ್ ಮತ್ತು ಹೊಸ ವರ್ಷದ ಪಾಸ್ ಕೊಡುಗೆಗಳು ಹಾಗೂ ಅನೇಕ ಥೀಮ್ ಇರುವ ಚಟುವಟಿಕೆಗಳನ್ನು ತನ್ನ ಬೆಂಗಳೂರು ಪಾರ್ಕ್‌ನಲ್ಲಿ ಹಬ್ಬದ ಸಂಭ್ರಮಾಚರಣೆಗಳನ್ನು ಘೋಷಿಸಿದೆ.

ಕ್ರಿಸ್ಮಸ್ ಮತ್ತು ಹೊಸ ವರ್ಷದ ಪಾಸ್, ಅಥಿತಿಗಳು, ತಮಗೆ ಅನುಕೂಲವಾಗುವ ರೀತಿಯಲ್ಲಿ ಪಾರ್ಕ್‌ಅನ್ನು ಆನಂದಿಸುವ ಅಂತಿಮ ಪರಿವರ್ತನಾ ಆಯ್ಕೆಯಾಗಿ ನೀಡಿದೆ. ಡಿಸಂಬರ್ 10 ಮತ್ತು ಜನವರಿ 5 ನಡುವೆ, ಯಾವುದೇ ದಿನದಲ್ಲಾದರೂ ಅತಿಥಿಗಳು ಈ ಪಾಸ್ಗಳನ್ನು ಬುಕ್ ಮಾಡಿ ಭೇಟಿ ನೀಡಬಹುದು-ಇದಕ್ಕೆ ಯಾವುದೇ ಪೂರ್ವ ಆಯ್ಕೆ ದಿನಾಂಕಗಳು ಅಗತ್ಯವಿಲ್ಲ. ಈ ಪಾಸ್ ಪಾರ್ಕ್ ಟಿಕೆಟ್ಗಳ ಮೇಲೆ 30% ರಿಯಾಯಿತಿ ಹಾಗೂ ವಿಶೇಷವಾಗಿ ರಚಿಸಲಾದ ಆಹಾರ ಕಾಂಬೋ ಪ್ಯಾಕೇಜಸ್ ಮೇಲೆ 30% ರಿಯಾಯಿತಿಯೊಂದಿಗೆ ಅದ್ವಿತೀಯ ಮೌಲ್ಯವನ್ನೂ ಒದಗಿಸುತ್ತದೆ. ಈ ಕೊಡುಗೆಗಳು ಆನ್ಲೈನ್ ಬುಕಿಂಗ್ಗಳಿಗೆ ಮಾತ್ರ ಲಭ್ಯವಿರುತ್ತದೆ.

ಕ್ರಿಸ್ಮಸ್ ಮತ್ತು ಹೊಸ ವರ್ಷದ ಆಚರಣೆಯ ಚೈತನ್ಯಕ್ಕೆ ತಕ್ಕಂತೆ ಅದ್ಬುತವಾದ ಅಲಂಕಾರಗಳೊಂದಿಗೆ ಆರಂಭಗೊಂಡು, ಅತಿಥಿಗಳು ತಮ್ಮ ಪ್ರೀತಿಪಾತ್ರರೊಡನೆ ಆನಂದಿಸುವಂತಹ ಮನಮೋಹಕ ವಾತಾವರಣ ಸೃಷ್ಟಿಸುತ್ತದೆ. ವಿಶೇಷವಾಗಿ ರಚಿಸಲಾದ ಫುಡ್ ಫೆಸ್ಟಿವಲ್ ಋತುಮಾನಿಕ ಟ್ರೀಟ್ಗಳನ್ನು ಮತ್ತು ಈ ಹಬ್ಬದ ಸಂಭ್ರಮದಲ್ಲಿ ಇತರ ವಿಶೇಷ ತಿನಿಸುಗಳನ್ನೂ, ಅದರ ಜೊತೆಗೆ ವಿಶೇಷ ಡಿನ್ನರ್ ಬಫೆ ಒಳಗೊಂಡಿರುತ್ತದೆ. ಒಂದು ಜೋಡಿಗೆ ರೂ. 349 ಕೈಗೆಟುಕುವ ದರದಲ್ಲಿ ಡಿಸಂಬರ್ 21ರಿಂದ ಜನವರಿ 1ರವರೆಗೆ, ವಿಶೇಷವಾಗಿ ರಚಿಸಲಾದ ಮೆನು ಇರುವ ವಂಡರ್ ಲಾದ ಐತಿಹಾಸಿಕ ಸ್ಕೈ ವೀಲ್ ಮೇಲೆ ವಿಶೇಷವಾದ ಸೆಲೆಬ್ರೆಟೊರಿ ಸ್ಕೈ-ಡೈನ್ ಆಯ್ಕೆಯನ್ನೂ ಪಾರ್ಕ್ ಒದಗಿಸುತ್ತಿದೆ.

ಕ್ರಿಸ್ಮಸ್-ಥೀಮ್ ಇರುವ ಉಡುಗೊರೆಗಳು, ವಸ್ತ್ರಗಳು ಮತ್ತು ಚಟುವಟಿಕೆಯ ಫ್ಲೀ ಮಾರ್ಕೆಟ್ ಕೂಡ ಲಭ್ಯವಿದ್ದು, ನಿಖರ ರಜಾ ಸ್ಮರಣೆಗಳನ್ನು ಖಾತರಿಪಡಿಸುತ್ತವೆ. ದಿನಕ್ಕೆರೆಡು ಬಾರಿ ನಡೆಯುವ ಅದ್ದೂರಿ ಕ್ರಿಸ್ಮಸ್ ಮೆರವಣಿಗೆ ಅತಿಥಿಗಳಿಗಾಗಿ ಈ ವರ್ಷದ ಆಚರಣೆಗಳನ್ನು ಅವಿಸ್ಮರಣೀಯಗೊಳಿಸುತ್ತದೆ. ರಾತ್ರಿಯಾಗುತ್ತಿದ್ದಂತೆ, ಐಇಡಿ ಜಗ್ಲಿಂಗ್ ಪ್ರದರ್ಶನ, ಮ್ಯಾಜಿಕ್ ಶೋ, ವಯೊಲಿನ್ ಶೋ, ಡಿಜೆ ಸೆಟ್ಗಳು ಮತ್ತು ಜೂಂಬಾ ಡ್ಯಾನ್ಸ್ ಒಳಗೊಂಡಂತೆ ಅನೇಕ ಕೌತುಕಮಯವಾದ ಚಟುವಟಿಕೆಗಳು ಸಾಲುಸಾಲಾಗಿ ಕಾದಿರುತ್ತವೆ. ಪ್ರತಿಯೊಂದು ಸಂಜೆಯೂ ಕಾರ್ಯಕ್ರಮಗಳ ವಿಶಿಷ್ಟ ಮಿಶ್ರಣ ಒಳಗೊಂಡಿರುತ್ತದೆ. ಇದರ ಜೊತೆಗೆ ಭಾಗವಹಿಸುವವರು, ಮೋಜು, ಸಂತೋಷ ಹಾಗೂ ಅವಿಸ್ಮರಣೀಯ ಕ್ಷಣಗಳಿಂದ ತುಂಬಿದ ಋತುವನ್ನು ಕೂಡ ನಿರೀಕ್ಷಿಸಬಹುದು.

ವಂಡರ್ ಲಾ ಹಾಲಿಡೇಸ್ ಲಿ.,ನ ವ್ಯವಸ್ಥಾಪಕ ನಿರ್ದೇಶಕ ಅರುಣ್ ಕೆ. ಚಿಟ್ಟಿಲಪಿಳ್ಳಿ ಯವರು, ''ಈ ಹಬ್ಬದ ಋತುವಿನಲ್ಲಿ, ಬೆಂಗಳೂರಿನ ವಂಡರ್ಲಾಗೆ ಕ್ರಿಸ್ಮಸ್ ಹಾಗೂ ಹೊಸವರ್ಷದ ಮಾಯೆಯನ್ನು ತರುವುದಕ್ಕೆ ನಮಗೆ ಅತ್ಯಂತ ಹರ್ಷವೆನಿಸುತ್ತಿದೆ. ಕೌತುಕಮಯವಾದ ಕೊಡುಗೆಗಳು, ಮನಮೋಹಕ ಅಲಂಕರಣಗಳು ಹಾಗೂ ಕುಟುಂಬದವರು ಮತ್ತು ಸ್ನೇಹಿತರಿಗಾಗಿ ಅನೇಕ ಚಟುವಟಿಕೆಗಳ ಮಿಶ್ರಣದೊಂದಿಗೆ ನಾವು ನಮ್ಮ ಸಂದರ್ಶಕರಿಗಾಗಿ ಅವಿಸ್ಮರಣೀಯ ಮನೋರಂಜನೆ ಸೃಷ್ಟಿಸುವ ಗುರಿ ಇರಿಸಿಕೊಂಡಿದ್ದೇವೆ. ಋತುವಿನ ಚೈತನ್ಯವನ್ನು ಹಿಡಿದಿಡುವ ಮನಸೂರೆಗೊಳ್ಳುವ ಮತ್ತು ಮೋಜಿನಿಂದ-ಕೂಡಿದ ಅನುಭವವನ್ನು ಒದಗಿಸುವ ಸಮಯದಲ್ಲೇ ಎಲ್ಲರೂ ಆಶ್ಚರ್ಯಗೊಳ್ಳುವ ವಿಶೇಷ ರಿಯಾಯಿತಿಗಳನ್ನು ಒದಗಿಸುವುದು ನಮ್ಮ ಧ್ಯೇಯೋದ್ದೇಶವಾಗಿದೆ.'' ಎಂದು ಹೇಳಿದರು.

ಆನ್ಲೈನ್ ಪೋರ್ಟಲ್ https://bookings.wonderla.com/ ಮೂಲಕ ತಮ್ಮ ಎಂಟ್ರಿ ಟಿಕೆಟ್ ಬುಕ್ ಮಾಡಲು ವಂಡರ್ ಲಾ ಸಂದರ್ಶಕರನ್ನು ಪ್ರೋತ್ಸಾಹಿಸುತ್ತದೆ. ಅಥವಾ ಇದಕ್ಕಾಗಿ ಅವರು ಬೆಂಗಳೂರು ಪಾರ್ಕ್‌ಅನ್ನು ಈ ಸಂಖ್ಯೆಯಲ್ಲೂ ಸಂಪರ್ಕಿಸಬಹುದು -: +91 80372 30333, +91 9945557777.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಧಾರ್ಮಿಕ ಮತ್ತು ಆಧ್ಯಾತ್ಮಿಕ ಚಿಂತನೆ, ತಂದೆಯಿಂದ ಅನುಕೂಲ, ಉನ್ನತ ವಿದ್ಯಾಭ್ಯಾಸದ ಹಂಬಲ, ಶುಭಕಾರ್ಯಗಳ ಯೋಚನೆ.

**ವೃಷಭ:** ದೂರ ಪ್ರಯಾಣ, ಪ್ರಯಾಣದಲ್ಲಿ ಅಡತಡೆ, ಆಯುಷ್ಯದ ಭೀತಿ, ಆಕಸ್ಮಿಕ ಧನಾಗಮನ.

**ಮಿಥುನ:** ಪ್ರೀತಿ ಪ್ರೇಮದಲ್ಲಿ ಯಶಸ್ಸು, ಭಾವನಾತ್ಮಕ ಚಿಂತನೆ, ದೈಹಿಕ ಅಸಮತೋಲನ, ಪಾಲುದಾರಿಕೆಯಲ್ಲಿ ನಷ್ಟ.

**ಕಟಕ:** ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ದಾಂಪತ್ಯದಲ್ಲಿ ಮನಸ್ತಾಪ, ವ್ಯಾಪಾರ ವ್ಯವಹಾರದಲ್ಲಿ ನಷ್ಟ, ಸಾಲದ ಚಿಂತೆಗಳು.

**ಸಿಂಹ:** ಮಕ್ಕಳಿಂದ ಅನುಕೂಲ, ಉದ್ಯೋಗ ನಷ್ಟದ ಭೀತಿ, ಉದ್ಯೋಗದಲ್ಲಿ ಒತ್ತಡಗಳು, ಸ್ಪರ್ಧಾತ್ಮಕ ವಿಷಯಗಳ ಕಡೆ ಆಸಕ್ತಿ.

**ಕನ್ಯಾ:** ಆರ್ಥಿಕ ಅನುಕೂಲ, ಸ್ಥಿರಾಸ್ತಿಯ ಮೇಲೆ ಸಾಲ, ಕೋರ್ಟ್ ಕೇಸುಗಳ ಚಿಂತೆ, ಪ್ರಯಾಣದಲ್ಲಿ ಅನುಕೂಲ.

**ತುಲಾ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಶುಭಕಾರ್ಯದಲ್ಲಿ ಯಶಸ್ಸು, ಆಕಸ್ಮಿಕ ಪ್ರಯಾಣ, ಸ್ತ್ರೀಯರಿಂದ ಅನುಕೂಲ.

**ವೃಶ್ಚಿಕ:** ಪಾಲುದಾರಿಕೆಯಿಂದ ಧನಾಗಮನ, ಸಂಗಾತಿಯಿಂದ ಆರ್ಥಿಕ ಅನುಕೂಲ, ಶುಭ ಕಾರ್ಯದಲ್ಲಿ ಯಶಸ್ಸು, ರತ್ನಾಭರಣ ಖರೀದಿ.

**ಧನಸ್ಸು:** ಸಾಲದ ಚಿಂತೆಗಳು, ಗೌರವ ಮತ್ತು ಕೀರ್ತಿಯ ಹಂಬಲ, ಅನಾರೋಗ್ಯದಿಂದ ಮುಕ್ತಿ, ವಿದ್ಯಾಭ್ಯಾಸದಲ್ಲಿ ಒತ್ತಡಗಳು.

**ಮಕರ:** ಭಾವನಾತ್ಮಕ ಸೋಲು, ಪ್ರೀತಿ ಪ್ರೇಮದಲ್ಲಿ ಹಿನ್ನಡೆ, ಮಕ್ಕಳು ದೂರ, ಅಪಕೀರ್ತಿ ಮತ್ತು ಅಪವಾದಗಳು.

**ಕುಂಭ:** ಸ್ಥಿರಾಸ್ತಿ ಯೋಗ ಮತ್ತು ಲಾಭ, ವಾಹನ ಅನುಕೂಲ, ತಾಯಿಯಿಂದ ಸಹಕಾರ, ಗುಪ್ತ ಆಲೋಚನೆಗಳಲ್ಲಿ ಯಶಸ್ಸು.

**ಮೀನ:** ಉದ್ಯೋಗದಲ್ಲಿ ಒತ್ತಡ, ಧನ ನಷ್ಟಗಳು, ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ಅಪಮೃತ್ಯು ಭಯ.

## ಇಂಟರ್‌ನ್ಯಾಷನಲ್ ಯುನಿವರ್ಸಲ್ ಹೆಲ್ತ್ ಕವರೇಜ್ ಡೇ

ಇಂಟರ್ ನ್ಯಾಷನಲ್ ಯುನಿವರ್ಸಲ್ ಹೆಲ್ತ್ ಕವರೇಜ್ ಡೇ ಅನ್ನು ಡಿಸೆಂಬರ್ 12 ರಂದು ಆಚರಿಸಲಾಗುತ್ತದೆ, ಇದು ವಿಶ್ವಸಂಸ್ಥೆಯಿಂದ ಪ್ರಾರಂಭವಾದ ಅಂತರರಾಷ್ಟ್ರೀಯ ರಜಾದಿನವಾಗಿದೆ. ಪ್ರಪಂಚದ ಎಲ್ಲಾ ನಾಗರಿಕರಿಗೆ ಕೈಗೆಟುಕುವ ಮತ್ತು ಗುಣಮಟ್ಟದ ಆರೋಗ್ಯವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಕೈಗೆಟುಕುವ ಔಷಧಿ ಮತ್ತು ಚಿಕಿತ್ಸೆಗೆ ಪ್ರವೇಶವನ್ನು ಹೊಂದುವುದು ಪ್ರತಿಯೊಬ್ಬರಿಗೂ ಲಭ್ಯವಾಗಬೇಕಾದ ಮೂಲಭೂತ ಮಾನವ ಹಕ್ಕು. ಇದು ಪ್ರಸ್ತುತ ಅಲ್ಲ ಮತ್ತು U.N ಬದಲಾವಣೆಗೆ ಕರೆ ನೀಡುತ್ತಿದೆ.

ಯಾವುದೇ ಧ್ವನಿಗಳಿಲ್ಲದ ಅಥವಾ ಆಗಾಗ್ಗೆ ಕೇಳಿಸಿಕೊಳ್ಳದವರ ಪರವಾಗಿ ವಕಾಲತ್ತು ವಹಿಸಲು ವಿಶ್ವಸಂಸ್ಥೆಯು ಬಹಳ ಹಿಂದಿನಿಂದಲೂ ತನ್ನನ್ನು ತಾನೇ ತೆಗೆದುಕೊಂಡಿದೆ. ಇಂಟರ್ನ್ಯಾಷನಲ್ ಯೂನಿವರ್ಸಲ್ ಹೆಲ್ತ್ ಕವರೇಜ್ ಡೇ ಪ್ರತಿಯೊಬ್ಬರಿಗೂ ಕೈಗೆಟುಕುವ ಆರೋಗ್ಯವನ್ನು ಪ್ರವೇಶಿಸುವಂತೆ ಉತ್ತೇಜಿಸುತ್ತದೆ. ಎಲ್ಲಾ ಮಾನವರು ಆರೋಗ್ಯ ರಕ್ಷಣೆಯ ಹಕ್ಕನ್ನು ಹೊಂದಿದ್ದಾರೆ ಎಂಬ ಕಲ್ಪನೆಯನ್ನು ಮುಂದಿಡಲು ಅವರು ಈ ರಜಾದಿನವನ್ನು ಪ್ರಾರಂಭಿಸಿದರು. ಎಲ್ಲಾ ರಾಷ್ಟ್ರಗಳು ತಮ್ಮ ನಾಗರಿಕರನ್ನು ಸಮಾನವಾಗಿ ಬೆಂಬಲಿಸಲು ಮತ್ತು ಆರೋಗ್ಯ ರಕ್ಷಣೆ ಮೂಲಭೂತ ಮಾನವ ಹಕ್ಕಾಗಿರುವುದರಿಂದ ಯಾರನ್ನೂ ಬಿಡಬೇಡಿ ಎಂದು ಇದು ಕರೆಯಾಗಿದೆ. ಈ ರಜಾದಿನವನ್ನು 2017 ರಲ್ಲಿ ಘೋಷಿಸಲಾಯಿತು ಮತ್ತು ವಾರ್ಷಿಕವಾಗಿ ಡಿಸೆಂಬರ್ 12 ರಂದು ಆಚರಿಸಲಾಗುತ್ತದೆ. ಅವರ ಪಾಲುದಾರರು ವಿಶ್ವ ಆರೋಗ್ಯ ಸಂಸ್ಥೆ, ದಿ ರಾಕ್ಫೆಲ್ಲರ್ ಫೌಂಡೇಶನ್, ಆಕ್ಸ್ಫಾಮ್, ವಿಶ್ವ ಬ್ಯಾಂಕ್ ಗುಂಪು ಮತ್ತು ಮಕ್ಕಳನ್ನು ಉಳಿಸಿ. ಇದು ಮಾನವ ಹಕ್ಕುಗಳನ್ನು ಮುನ್ನಡೆಸುವ ಗುರಿಯನ್ನು ಹೊಂದಿರುವ ವಿಶ್ವಸಂಸ್ಥೆಯ ಯೋಜನೆಗಳಲ್ಲಿ ಒಂದಾಗಿದೆ. ಯುನಿವರ್ಸಲ್ ಹೆಲ್ತ್ ಕವರೇಜ್ ಅನ್ನು 2015 ರಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಸೇರಿಸಲಾಗಿದೆ. ಸುಸ್ಥಿರ ಅಭಿವೃದ್ಧಿ ಗುರಿಗಳು ಅಥವಾ ಜಾಗತಿಕ ಗುರಿಗಳು ಎಲ್ಲರಿಗೂ ಹೆಚ್ಚು ಸಮರ್ಥನೀಯ ಭವಿಷ್ಯವನ್ನು ರಚಿಸಲು ಸಹಾಯ ಮಾಡುವ 17 ಗುರಿಗಳಾಗಿವೆ. ಈ ಗುರಿಗಳನ್ನು 2015 ರಲ್ಲಿ ಸ್ಥಾಪಿಸಲಾಯಿತು ಮತ್ತು 2030 ರ ವೇಳೆಗೆ ಸಾಧಿಸಲು ಉದ್ದೇಶಿಸಲಾಗಿದೆ.



# ಟಿಐಇ ಜಾಗತಿಕ ಶೃಂಗಸಭೆಗೆ ಅದ್ಧೂರಿ ಚಾಲನೆ

**ಬೆಂಗಳೂರು:** ಬೆಂಗಳೂರಿನ ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರ, (ಬಿಐಇಸಿ)ಯಲ್ಲಿ ಇಂದು ಟಿಐಇ ಜಾಗತಿಕ ಶೃಂಗಸಭೆ 2024 (ಟಿಜಿಎಸ್24)ಕ್ಕೆ ಅದ್ಧೂರಿ ಚಾಲನೆ ದೊರೆಯಿತು. ಜಾಗತಿಕ ನಾಯಕರು, ಉದ್ಯಮಿಗಳು, ಹೂಡಿಕೆದಾರರು ಮತ್ತು ನೀತಿನಿರೂಪಕರನ್ನು ಒಂದೇ ವೇದಿಕೆಯಲ್ಲಿ ಈ ಶೃಂಗಸಭೆ ತಂದಿದೆ. ಟಿಐಇ ಬೆಂಗಳೂರು ಆಯೋಜಿಸಿರುವ ಈ ಶೃಂಗಸಭೆಯು ಜಾಗತಿಕ ಉದ್ಯಮಿಗಳು, ಹೂಡಿಕೆದಾರರು ಮತ್ತು ಚಿಂತಕರನ್ನು ಒಟ್ಟಿಗೆ ಸೇರಿಸಿದ್ದು, ಇವರೆಲ್ಲಾ ಸೇರಿ ನಾವೀನ್ಯತೆ, ಸಹಭಾಗಿತ್ವ ಮತ್ತು ಭವಿಷ್ಯದ ಉದ್ಯಮಶೀಲತೆಯ ಪ್ರಮುಖ ವಿಷಯಗಳ ಬಗ್ಗೆ ಚಿಂತನ-ಮಂಥನ ನಡೆಸಲಿದ್ದಾರೆ. ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಸಚಿವಾಲಯದ ಬೆಂಬಲ ನೀಡುತ್ತಿದ್ದು, ಇದರ ಪಾಲುದಾರಿಕೆಯೊಂದಿಗೆ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ (ಎಂಇಐಟಿವೈ), ಭಾರತ ಸರ್ಕಾರದ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ಸ್ ಆಫ್ ಇಂಡಿಯಾ (ಎಸ್ಟಿಪಿಐ) ಶೃಂಗಸಭೆಯ ಸಹ-ಆತಿಥ್ಯ ವಹಿಸಿವೆ. ಜಾಗತಿಕ ವಾಣಿಜ್ಯೋದ್ಯಮದ ಲ್ಯಾಂಡ್‌ಸ್ಕೇಪ್ ಅನ್ನು ''ಉದ್ಯಮಶೀಲತೆಯನ್ನು ಮೊದಲ ಸ್ಥಾನಕ್ಕೆ ತರುವುದು'' ಎಂಬ ವಿಷಯದಡಿಯಲ್ಲಿ ಮರುವ್ಯಾಖ್ಯಾನಿಸುವ ಗುರಿಯನ್ನು ಹೊಂದಿದೆ.

ಅಂತ್ರಪ್ರೇರಣ ಶೃಂಗಸಭೆಯೊಂದಿಗೆ ಈ ಶೃಂಗಸಭೆ ಆರಂಭವಾಯಿತು. ಸುಸ್ಥಿರತೆ, ನಾವೀನ್ಯತೆ ಮತ್ತು




ಉದ್ಯಮಶೀಲತೆಯ ಪರಿಸರ ವ್ಯವಸ್ಥೆಗಳನ್ನು ನಿರ್ಮಾಣ ಮಾಡುವ ಸಂವಾದಗಳೊಂದಿಗೆ ಈ ಶೃಂಗಸಭೆಗೆ ಚಾಲನೆ ನೀಡಲಾಯಿತು. ಇದರಲ್ಲಿನ ಸೆಶನ್‌ಗಳು ಜಾಗತಿಕ ಸವಾಲುಗಳನ್ನು ನಿಭಾಯಿಸಲು ಮತ್ತು ಸುಸ್ಥಿರ ಬೆಳವಣಿಗೆಯನ್ನು ಉತ್ತೇಜಿಸಲು ಕ್ರಿಯಾಶೀಲ ಒಳನೋಟಗಳನ್ನು ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿದವು.

ಕರ್ನಾಟಕ ಸರ್ಕಾರದ ಐಟಿ, ಬಿಟಿ, ಆರ್ಡಿಪಿಆರ್ ಸಚಿವರಾದ ಪ್ರಿಯಾಂಕ್ ಖರ್ಗೆ, ನ್ಯೂಜೆರ್ಸಿಯ ಲೆಫ್ಟಿನೆಂಟ್ ಗರ್ನರ್ ಮತ್ತು ಸೆಕ್ರೆಟರಿ ಆಫ್ ಸ್ಟೇಟ್ ತಹೇಶ ವೇ, ಎಸ್ಟಿಪಿಐ ಪ್ರಧಾನ ನಿರ್ದೇಶಕ ಅರವಿಂದ್ ಕುಮಾರ್, ಕರ್ನಾಟಕ ಸರ್ಕಾರದ ಇ, ಐಟಿ, ಬಿಟಿ ಎಸ್‌ಟಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಏಕರೂಪ್ ಕೌರ್, ಚೆನ್ನೈನಲ್ಲಿ ಯುಎಸ್ ಕೌನ್ಸುಲ್ ಜನರಲ್ ಕ್ರಿಸ್ ಹೋಡ್ಜ್ಸ್, ಕರ್ನಾಟಕ ವಿಷನ್ ಬೋರ್ಡ್ ಅಧ್ಯಕ್ಷ ಅಂಡ್ ಏಸೆಲ್ ಇಂಡಿಯಾದ ಸಂಸ್ಥಾಪಕ ಪಾಲುದಾರ ಪ್ರಶಾಂತ್ ಪ್ರಕಾಶ್, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಅಧ್ಯಕ್ಷ ಬಿವಿ. ನಾಯ್ಡು. ಎಸ್ಟಿಪಿಐನ ಜ್ಯೂರಿಸ್ಡಿಕ್ಷನಲ್ ಡೈರೆಕ್ಟರ್ ಡಾ.ಸಂಜಯ್ ತ್ಯಾಗಿ, ಎನ್‌ಎಸ್‌ಇ ವ್ಯವಸ್ಥಾಪಕ ನಿರ್ದೇಶಕ ಮುಖ್ಯಕಾರ್ಯನಿರ್ವಹಣಾಧಿಕಾರಿ ಆಶಿಶ್ ಚೌಹಾಣ್, ಕರ್ನಾಟಕ ಡಿಜಿಟಲ್ ಮಿಷನ್ (ಕೆಡಿಇಎಂ)ನ ಸಿಇಒ ಸಂಜೀವ್ ಗುಪ್ತಾ, ಟಿಐಇ ಗ್ಲೋಬಲ್ನ ಜಾಗತಿಕ ಅಧ್ಯಕ್ಷ ಅಮಿತ್ ಗುಪ್ತಾ, ಟಿಐಇ ಗ್ಲೋಬಲ್ನ ಅಧ್ಯಕ್ಷ ಎ.ಜೆ.ಪಟೇಲ್, ಕೆಪಿಎಂಜಿಯ ಗ್ಲೋಬಲ್ ಸೈಬರ್ ಸೆಕ್ಯೂರಿಟಿ ಲೀಡರ್ ಅಖಿಲೇಶ್ ಟುನೇಜಾ, ಟಿಐಇ ಬೆಂಗಳೂರು ಅಧ್ಯಕ್ಷ ಮತ್ತು ಟಿಜಿಎಸ್2024 ರ ಅಧ್ಯಕ್ಷ ಮದನ್ ಪದಕಿ ಮತ್ತು ಐಎನ್ಕೆ ಟಾಕ್ಸ್‌ನ ಸಿಇಒ ಲಕ್ಷಿ?ಮ ಪ್ರಟೂರಿ ಸೇರಿದಂತೆ ಇನ್ನಿತರೆ ಗಣ್ಯರು ಉದ್ಘಾಟನಾ ಸಮಾರಂಭಕ್ಕೆ ಸಾಕ್ಷಿಯಾದರು.

ಉದ್ಘಾಟನೆ ದಿನದಂದು ''ಎಂಟರ್‌ಪ್ರಿನ್ಯೂರ್‌ಶಿಪ್ ಥ್ರೂ ದಿ ಲೆನ್ಸ್ ಆಫ್ ಸ್ಟೋರಿಟೆಲ್ಸ್'' ಎಂಬ ವಿಷಯದ ಮೇಲೆ ಸಂವಾದವನ್ನು ಏರ್ಪಡಿಸಲಾಗಿತ್ತು. ಟಿಐಇ ಬೆಂಗಳೂರು ಅಧ್ಯಕ್ಷ ಮತ್ತು ಟಿಐಇ ಜಾಗತಿಕ ಶೃಂಗಸಭೆ 2024 ರ ಅಧ್ಯಕ್ಷ ಮದನ್ ಪದಕಿ, ಭಾರತೀಯ ಖ್ಯಾತ ಚಿತ್ರನಟಿ ವಿದ್ಯಾ ಬಾಲನ್ ಮತ್ತು ಚಿತ್ರ ನಿರ್ಮಾಪಕ ಸಿದ್ಧಾರ್ಥ್ ರಾಯ್ ಕಪೂರ್ ಅವರು ಪಾಲ್ಗೊಂಡಿದ್ದರು. ಉದ್ಯಮಶೀಲತೆಯ ಅಸಂಪ್ರದಾಯಿಕ ಪ್ರಯಾಣಗಳು, ಎದುರಾಗಬಹುದಾದ ಹಿನ್ನಡೆಗಳನ್ನು ಮೆಟ್ಟಿ ಮುಂದೆ ಸಾಗುವ ಸ್ಥಿತಿಸ್ಥಾಪಕತ್ವ ಮತ್ತು ನಿರಂತರತೆಯ ಶಕ್ತಿಯನ್ನು ಹೇಗೆ ಅನ್ವೇಷಣೆ ಮಾಡಿಕೊಳ್ಳಬೇಕೆಂಬುದರ ಬಗ್ಗೆ ಈ ಸೆಶನ್ನಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು. ವಿದ್ಯಾಬಾಲನ್ ಅವರು, ಹೊಸ ಹೊಸ ದೃಷ್ಟಿಕೋನದಿಂದ ಪ್ರತಿಯೊಂದು ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಮುನ್ನಡಿ ಇಡುವ ಬಗ್ಗೆ ವಿವರಿಸಿದರೆ, ಸಿದ್ಧಾರ್ಥ್ ಅವರು, ಉದ್ದೇಶಗಳ ಪ್ರಾಮುಖ್ಯತೆ ಮತ್ತು ಸವಾಲುಗಳನ್ನು ಎದುರಿಸುವಲ್ಲಿ ತೆಗೆದುಕೊಳ್ಳಬೇಕಾದ ಪ್ರಮುಖ ಹೆಜ್ಜೆಗಳ ಬಗ್ಗೆ ವಿವರಣೆ ನೀಡಿದರು.

## ಸ್ವಂತ ಬಲದ ಮೇಲೆ ಏಕಾಂಗಿ ಹೋರಾಟ: ಕೇಜ್ರಿವಾಲ್ ಸ್ಪಷ್ಟನೆ

**ನವದೆಹಲಿ:** ಮುಂದಿನ ವರ್ಷದ ಆರಂಭದಲ್ಲೇ ಎದುರಾಗಲಿರುವ ರಾಷ್ಟ್ರ ರಾಜಧಾನಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ ಏಕಾಂಗಿಯಾಗಿ ಸ್ಪರ್ಧಿಸಲಿದೆ ಎಂದು ಎಎಪಿ ಸಂಚಾಲಕ ಅರವಿಂದ್ ಕೇಜ್ರಿವಾಲ್ ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಳ್ಳುವ ಯಾವುದೇ ಪ್ರಸ್ತಾಪಗಳು ನಮ್ಮ ಮುಂದೆ ಇಲ್ಲ ಎಂದು ಅವರು ದೃಢಪಡಿಸಿದ್ದಾರೆಕಾಂಗ್ರೆಸ್ ಮತ್ತು ಎಎಪಿ ನಡುವೆ ಮೈತ್ರಿ ಏರ್ಪಟ್ಟಿದೆ ಎಂಬ ಗಾಳಿ ಸುದ್ದಿಗೆ ಎಕ್ಸ್ ಮೂಲಕ ಅವರು ಸ್ಪಷ್ಟನೆ ನೀಡಿರುವ ಕೇಜ್ರಿವಾಲ್, ನಮ್ಮ ಪಕ್ಷ ಏಕಾಂಗಿಯಾಗಿ ಸ್ವಂತ ಬಲದ ಮೇಲೆ ಹೋರಾಟ ನಡೆಸಲಿದೆ. ಕಾಂಗ್ರೆಸ್ ಜೊತೆಗೆ ಯಾವುದೇ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದು ಅವರು ಹೇಳಿದ್ದಾರೆ. ಕಳೆದ ಕೆಲವು ದಿನಗಳ ಹಿಂದೆ ದೆಹಲಿಯಲ್ಲಿ ಬಿಜೆಪಿ ವಿರುದ್ಧ ಹೋರಾಡಲು ಕಾಂಗ್ರೆಸ್ ಮತ್ತು ಎಎಪಿ ಮೈತ್ರಿ ಮಾಡಿಕೊಳ್ಳಲಿವೆ. ಕಾಂಗ್ರೆಸ್- ಎಎಪಿ ಮೈತ್ರಿ ಒಪ್ಪಂದವೂ ಅಂತಿಮ ಹಂತದಲ್ಲಿ ಇದೆ ಎಂಬ ಸುದ್ದಿಗಳು ಹರದಾಡಿದ್ದವು. ಈ ಎಲ್ಲ ಊಹಾಪೋಹಗಳಿಗೆ ಅರವಿಂದ ಕೇಜ್ರಿವಾಲ್ ತೆರೆ ಎಳೆದಿದ್ದಾರೆ. ಇಂಡಿಯಾ ಒಕ್ಕೂಟದ ಭಾಗವಾಗಿದ್ದರೂ ಕಾಂಗ್ರೆಸ್ ಜೊತೆ ಮೈತ್ರಿಗೆ ಎಎಪಿ ನಿರಾಕರಿಸಿರುವುದು ಇದು ಮೊದಲ ಬಾರಿಯೇನೂ ಅಲ್ಲ. ಈ ಮೊದಲು ಕೂಡ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ನಾವು ಕಾಂಗ್ರೆಸ್ ಸಖ್ಯ ಬೆಳೆಸುವುದಿಲ್ಲ ಎಂದಿದ್ದರು. ಕಾಂಗ್ರೆಸ್ ಕೂಡ ತಾವು ದೆಹಲಿಯಲ್ಲಿ ಏಕಾಂಗಿಯಾಗಿ ಕಣಕ್ಕೆ ಇಳಿಯುವುದಾಗಿ ಘೋಷಿಸಿತ್ತು. ದೆಹಲಿ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ದೇವೇಂದ್ರ ಯಾದವ್ ಮಾತನಾಡಿ, ನಮ್ಮ ಪಕ್ಷ 70 ವಿಧಾನಸಭಾ ಕ್ಷೇತ್ರದಲ್ಲಿ ಏಕಾಂಗಿಯಾಗಿ ಹೋರಾಟ ಮಾಡಲಿದೆ ಎಂದಿದ್ದರು. 2024ರ ಲೋಕಸಭಾ ಚುನಾವಣೆಯಲ್ಲಿ ಪಂಜಾಬ್‌ನಲ್ಲಿ ಕಾಂಗ್ರೆಸ್ ಮೈತ್ರಿಯನ್ನು ಕೇಜ್ರಿವಾಲ್ ನಿರಾಕರಿಸಿ, 13 ಕ್ಷೇತ್ರದಲ್ಲಿ ಸ್ವಯಂ ಬಲದ ಮೇಲೆ ಸ್ಪರ್ಧಿಸಿತು. ಹರಿಯಾಣದ ವಿಧಾನಸಭೆ ಚುನಾವಣೆಯಲ್ಲೂ ಈ ಎರಡು ಪಕ್ಷಗಳು ಸೀಟು ಹಂಚಿಕೆ ಒಪ್ಪಂದದಲ್ಲಿ ವಿಫಲಗೊಂಡು ಸ್ವತಂತ್ರವಾಗಿ ಸ್ಪರ್ಧಿಸಿದವು.



## ಯುವ ಜನತೆ ಎದುರಿಸುವ ಸವಾಲು ನಿವಾರಿಸಲು ಕೇಂದ್ರ ಬದ್ಧ: ಮೋದಿ

**ದೆಹಲಿ:** 'ದೇಶದ ಯುವ ಜನತೆ ಎದುರಿಸುವ ಸವಾಲುಗಳನ್ನು ನಿವಾರಿಸಲು ಕೇಂದ್ರ ಸರ್ಕಾರ ಹಲವು ಸುಧಾರಣಾ ಕ್ರಮಗಳನ್ನು ಪರಿಚಯಿಸುತ್ತಿದೆ'' ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ನ ಗ್ರ್ಯಾಂಡ್ ಫಿನಾಲೆಯಲ್ಲಿ ಅವರು ಮಾತನಾಡಿದರು.

''ಯುವ ಜನತೆ ಮತ್ತು ತಂತ್ರಜ್ಞಾನ ಭಾರತದ ಶಕ್ತಿ. ವೈಜ್ಞಾನಿಕ ಮನೋಭಾವವನ್ನು ಬೆಳೆಸಲು ನಾವು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಪರಿಚಯಿಸಿದ್ದೇವೆ. ಸುಧಾರಣೆಗಳನ್ನು ಪರಿಚಯಿಸುವ ಮೂಲಕ ಸರ್ಕಾರವು ದೇಶದ ಯುವಜನತೆಯ ಸಾಧನೆಯ ಹಾದಿಯಲ್ಲಿನ ಅಡೆತಡೆಗಳನ್ನು ತೆಗೆದುಹಾಕುತ್ತಿದೆ'' ಎಂದು ಮೋದಿ ವಿಡಿಯೊ ಕಾನ್ಫರೆನ್ಸ್ ಮೂಲಕ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ತಿಳಿಸಿದರು. ಭವಿಷ್ಯದ ವಿಶ್ವವು ನಾವೀನ್ಯತೆ ಮತ್ತು ಜ್ಞಾನದಿಂದ ನಡೆಸಲ್ಪಡುತ್ತದೆ. ಭಾರತದ ಯುವಜನತೆ ದೇಶದ ಸವಾಲುಗಳಿಗೆ ಪರಿಹಾರಗಳನ್ನು ಕಂಡುಹಿಡಿಯುವತ್ತ ಗಮನ ಹರಿಸುತ್ತಿದ್ದಾರೆ'' ಎಂದು ಅವರು ಹೇಳಿದರು.



ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ನ 7ನೇ ಆವೃತ್ತಿ ದೇಶಾದ್ಯಂತ 51 ನೋಡಲ್ ಕೇಂದ್ರಗಳಲ್ಲಿ ಆರಂಭವಾಗಿದೆ. ವಿದ್ಯಾರ್ಥಿಗಳಲ್ಲಿರುವ ಸೃಜನಶೀಲತೆಯನ್ನು ರಾಷ್ಟ್ರದ ಅಭಿವೃದ್ಧಿಗೆ ಬಳಸಿಕೊಳ್ಳಲು ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಆಯೋಜಿಸುತ್ತಿದೆ. ಸತತ 36 ಗಂಟೆಗಳ ಪ್ರೊಗ್ರಾಮಿಂಗ್ ಸ್ಪರ್ಧೆ ಇದಾಗಿದ್ದು, ನೋಡೆಲ್ ಸೆಂಟರ್ಗಳಲ್ಲಿ ಆಯೋಜಿಸಲಾಗುತ್ತದೆ. ಹಾರ್ಡ್‌ವೇರ್ ಸ್ಪರ್ಧೆ ಡಿ. 11ರಿಂದ ಡಿ. 15ರ ತನಕ ನಡೆಯಲಿದೆ.

## ಧನ್ಕರ್ ಸರಕಾರದ ವಕ್ತಾರರಂತೆ ವರ್ತಿಸುತ್ತಿದ್ದಾರೆ: ಖರ್ಗೆ ವಾಗ್ದಾಳಿ

**ಹೊಸದಿಲ್ಲಿ:** ತಮ್ಮ ಮುಂದಿನ ಬಡ್ತಿಗಾಗಿ ರಾಜ್ಯಸಭಾ ಸ್ಪೀಕರ್ ಜಗದೀಪ್ ಧನ್ಕರ್ ಸರಕಾರದ ವಕ್ತಾರರಾಗಿ ವರ್ತಿಸುತ್ತಿದ್ದಾರೆ ಎಂದು ಬುಧವಾರ ರಾಜ್ಯಸಭಾ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದ್ದು, ನಿಯಮಗಳ ಬದಲಿಗೆ ರಾಜಕೀಯ ಮೇಲುಗೈ ಸಾಧಿಸಿರುವುದರಿಂದ ಮೇಲ್ಮನೆಯಲ್ಲಿ ಜಗದೀಪ್ ಧನ್ಕರ್ ಅವರೇ ಅತಿ ದೊಡ್ಡ ಅಡಚಣೆಗಾರರು ಎಂದು ಅವರು ಟೀಕಿಸಿದ್ದಾರೆ.

ಉಪ ರಾಷ್ಟ್ರಪತಿ ಹುದ್ದೆಯಿಂದ ಜಗದೀಪ್ ಧನ್ಕರ್ ಅವರನ್ನು ತೆಗೆದು ಹಾಕಬೇಕು ಎಂದು ಇಂಡಿಯಾ ಮೈತ್ರಿಕೂಟದ ಪಕ್ಷಗಳು ನೋಟಿಸ್ ನೀಡಿದ ಮರುದಿನವೇ, ತಾವೇಕೆ ಈ ಕ್ರಮಕ್ಕೆ ಮುಂದಾಗಿದ್ದೇವೆ ಎಂಬುದನ್ನು ವಿವರಿಸಲು ಕಾಂಗ್ರೆಸ್, ಡಿಎಂಕೆ, ತೃಣಮೂಲ ಕಾಂಗ್ರೆಸ್, ಸಮಾಜವಾದಿ ಪಕ್ಷ, ಆರ್ ಜೆಡಿ, ಶಿವಸೇನೆ (ಯುಬಿಟಿ), ಜೆಎಂಎಂ, ಸಿಪಿ(ಐ) ಎಂ, ಸಿಪಿಐ ಹಾಗೂ ಎನ್ಸಿಪಿ ಸೇರಿದಂತೆ ಇಂಡಿಯಾ ಮೈತ್ರಿಕೂಟದ ನಾಯಕರು ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷಾಚರಣೆಯ ಸಂದರ್ಭದಲ್ಲಿ ರಾಜ್ಯಸಭಾ



ಸ್ಪೀಕರ್ ಅವರ ಪಕ್ಷಪಾತೀಯ ಹಾಗೂ ಪಕ್ಷಭೇದದ ನಿಲುವು ಹಾಗೂ ನಾನು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮನುಷ್ಯ ಎಂದು ಬಹಿರಂಗವಾಗಿ ಹೇಳಿಕೆ ನೀಡುತ್ತಿರುವ ಕಾರಣಕ್ಕೆ ಈ ಕ್ರಮ ಕೈಗೊಳ್ಳುವಂತಾಗಿರುವುದು ಬೇಸರದ ಸಂಗತಿ ಎಂದು ಖರ್ಗೆ ಹೇಳಿದರು. ಇಂತಹ ಯಾವ ಕ್ರಮಗಳೂ ಅವರು ಹೊಂದಿರುವ ಹುದ್ದೆಗೆ ಘನತೆ ತರುವುದಿಲ್ಲ. ವಿಶೇಷವಾಗಿ, ಅವರು ವಿಪಕ್ಷಗಳ ನಾಯಕರನ್ನು ತಮ್ಮ ವಿರೋಧಿಗಳಂತೆ ನೋಡುತ್ತಿದ್ದಾರೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. 1952ರಿಂದ ಇಲ್ಲಿಯವರೆಗೆ ರಾಜ್ಯಸಭಾ ಸ್ಪೀಕರ್ ಆಗಿದ್ದ ಎಲ್ಲರೂ ನಿಷ್ಪಕ್ಷಪಾತಿಗಳಾಗಿದ್ದುದರಿಂದ ಇಂತಹ ಯಾವುದೇ ನಿರ್ಣಯಗಳನ್ನು ರಾಜ್ಯಸಭಾ ಸ್ಪೀಕರ್ ವಿರುದ್ಧ ಮಂಡಿಸಲಾಗಿರಲಿಲ್ಲ ರಾಜ್ಯಸಭಾಧ್ಯಕ್ಷರನ್ನು ತೆಗೆದು ಹಾಕಲು ನೀಡಿರುವ ನೋಟಿಸ್ ವೈಯಕ್ತಿಕ ಕುಂದುಕೊರತೆಗಳು ಅಥವಾ ರಾಜಕೀಯ ಕದನಕ್ಕಾಗಿಯಲ್ಲ ಎಂದು ಖರ್ಗೆ ಸ್ಪಷ್ಟಪಡಿಸಿದ್ದಾರೆ.

## ಆತ್ಮಾಹುತಿ ಬಾಂಬ್ ದಾಳಿ ತಾಲಿಬಾನ್ ಪ್ರಭಾವಿ ಸಚಿವ ಸಾವು

**ಕಾಬೂಲ್:** ಅಫ್ಘಾನಿಸ್ತಾನದ ರಾಜಧಾನಿ ಕಾಬೂಲ್‌ನಲ್ಲಿ ಭಯೋತ್ಪಾದಕರು ನಡೆಸಿದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ತಾಲಿಬಾನ್ ನಿರಾಶ್ರಿತರ ಸಚಿವ ಖಲೀಲ್ ಉರ್-ರಹಮಾನ್ ಹಕ್ಕಾನಿ ಹಾಗೂ ಇತರ ಇಬ್ಬರು ಮೃತಪಟ್ಟಿದ್ದಾರೆ. ಇದು ಮೂರು ವರ್ಷಗಳ ಹಿಂದೆ ಅಧಿಕಾರಕ್ಕೆ ಮರಳಿದ ನಂತರ ತಾಲಿಬಾನ್ ಹಿರಿಯ ಅಧಿಕಾರಿ ಮೇಲಿನ ಅತ್ಯಂತ ಮಹತ್ವದ ದಾಳಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಚಿವಾಲಯದ ಆವರಣದಲ್ಲೇ ಸ್ಫೋಟ ಸಂಭವಿಸಿದ್ದು, ನಿರಾಶ್ರಿತರ ಸಚಿವ ಖಲೀಲ್ ಹಕ್ಕಾನಿ ಹತರಾಗಿದ್ದಾರೆ. ಇವರು ತಾಲಿಬಾನ್ ಆಡಳಿತದಲ್ಲಿ ಮತ್ತೊಬ್ಬ ಪ್ರಭಾವಿ ನಾಯಕನಾಗಿರುವ ಗೃಹ ಸಚಿವ ಸಿರಾಜುದ್ದೀನ್ ಹಕ್ಕಾನಿಯವರ ಚಿಕ್ಕಪ್ಪ. ಈ ದಾಳಿಯ ಹೊಣೆಯನ್ನು ಯಾವುದೇ ಸಂಘಟನೆ ಸದ್ಯಕ್ಕೆ ಹೊತ್ತುಕೊಂಡಿಲ್ಲ. ಈ ಕುರಿತು ತಾಲಿಬಾನ್ ಸರ್ಕಾರದ ಪ್ರಾಥಮಿಕ ವಕ್ತಾರರಾದ ಜಬಿಹುಲ್ಲಾ ಮುಜಾಹಿದ್ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಅಲ್ಲದೇ ಹಕ್ಕಾನಿ ಅವರ ಮರಣವು ಅತ್ಯಂತ ಗಮನಾರ್ಹವಾದುದು. ಇಸ್ಲಾಂ ಧರ್ಮ ರಕ್ಷಣೆಗಾಗಿ ಹಕ್ಕಾನಿ ಜೀವವನ್ನೇ ಮುಡಿಪಾಗಿಟ್ಟಿದ್ದರು. ಅವರೊಬ್ಬ ನಿಜವಾದ ಧಾರ್ಮಿಕ ಯೋಧ ಎಂದು ಬಣ್ಣಿಸಿದ್ದಾರೆ.

## ನಕ್ಸಲೀಯರಿಂದ ಬಿಜೆಪಿ ಕಾರ್ಯಕರ್ತನ ಹತ್ಯೆ

**ಬಿಜಾಪುರ(ಛತ್ತೀಸ್ಗಢ):** ಪೊಲೀಸರಿಗೆ ತಮ್ಮ ಜಾಡಿನ ಸುಳಿವು ನೀಡುತ್ತಿರುವ ಶಂಕೆಯ ಮೇಲೆ ನಕ್ಸಲೀಯರು ಬಿಜೆಪಿ ಕಾರ್ಯಕರ್ತನನ್ನು ಹತ್ಯೆಗೈದ ಘಟನೆ ಛತ್ತೀಸ್ಗಢದ ಬಿಜಾಪುರ ಜಿಲ್ಲೆಯಲ್ಲಿ ಮಂಗಳವಾರ ರಾತ್ರಿ ನಡೆದಿದೆ. ಕಳೆದ ಒಂದು ವಾರದಲ್ಲಿ ಇದು ಐದನೇ ನಾಗರಿಕ ಹತ್ಯೆ ಎಂದು ಪೊಲೀಸರು ತಿಳಿಸಿದ್ದಾರೆ. ಕೊಲೆಯಾದ ವ್ಯಕ್ತಿಯನ್ನು 35 ವರ್ಷದ ಕುಡಿಯಮ್ ಎಂದು ಗುರುತಿಸಲಾಗಿದೆ. ಫರ್ಸೆಗಢ್ ಪೊಲೀಸ್ ಠಾಣಾ ವ್ಯಾಪ್ತಿಯ ಸೋಮನ್ಪಲ್ಲಿ ಗ್ರಾಮದ ನಿವಾಸಿಯಾಗಿದ್ದ ಇವರು ಬಿಜೆಪಿಯ ಸಕ್ರಿಯ ಕಾರ್ಯಕರ್ತ ಹಾಗು ಪೊಲೀಸರಿಗೆ ಮಾಹಿತಿದಾರರಾಗಿದ್ದರು ಎಂದು ಸ್ಥಳೀಯರು ಹೇಳಿದ್ದಾರೆ. ಮಂಗಳವಾರ ರಾತ್ರಿ ಕುಡಿಯಮ್ ಮನೆಯ ಮೇಲೆ ದಾಳಿ ಮಾಡಿದ ನಕ್ಸಲೀಯರು, ಆತನನ್ನು ಹೊರಗೆ ಎಳೆದುಕೊಂಡು ಬಂದು ಕತ್ತು ಹಿಸುಕಿ ಕೊಲೆ ಮಾಡಿದ್ದಾರೆ. ಸ್ಥಳದಲ್ಲಿ ಸಿಕ್ಕ ಕರಪತ್ರದ ಪ್ರಕಾರ, ಮಾವೋವಾದಿಗಳ ನ್ಯಾಷನಲ್ ಪಾರ್ಕ್ ಏರಿಯಾ ಕಮಿಟಿ ಹತ್ಯೆ ಮಾಡಿದ್ದಾಗಿ ತಿಳಿದು ಬಂದಿದೆ. ಕುಡಿಯಮ್ ಪೊಲೀಸ್ ಮಾಹಿತಿದಾರ ಎಂಬ ಶಂಕೆಯ ಮೇಲೆ ಹತ್ಯೆ ಮಾಡಿದ್ದಾಗಿ ಅದರಲ್ಲಿ ಉಲ್ಲೇಖಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಘಟನೆಯ ಮಾಹಿತಿ ತಿಳಿದ ಪೊಲೀಸರು ಸ್ಥಳಕ್ಕೆ ಧಾವಿಸಿ, ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ದಾಳಿಕೋರರ ಪತ್ತೆ ಹಚ್ಚಲು ಸುತ್ತಲಿನ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಳೆದ ಏಳು ದಿನಗಳಲ್ಲಿ ಇದು ಐದನೇ ಕೊಲೆಯಾಗಿದೆ. ಅದರಲ್ಲಿ ಇಬ್ಬರು ಬಿಜೆಪಿ ಕಾರ್ಯಕರ್ತರಿದ್ದಾರೆ. ಡಿಸೆಂಬರ್ 4ರಂದು ಬಿಜಾಪುರ ಜಿಲ್ಲೆಯ ಪ್ರತ್ಯೇಕ ಸ್ಥಳಗಳಲ್ಲಿ ಇಬ್ಬರು ಮಾಜಿ ಸರಪಂಚ್ಗಳನ್ನು ಹತ್ಯೆ ಮಾಡಲಾಗಿತ್ತು. ಅದರಲ್ಲಿ ಒಬ್ಬರು ಬಿಜೆಪಿ ಕಾರ್ಯಕರ್ತ ಎಂದು ಅಧಿಕಾರಿಗಳು ಹೇಳಿದ್ದಾರೆ.

## 58,642 ಖಾಲಿ ಹುದ್ದೆಗಳ ನೇಮಕಾತಿ: ಅಶ್ವಿನಿ ವೈಷ್ಣವ್

**ನವದೆಹಲಿ:** ಕೇಂದ್ರ ಸರ್ಕಾರದ ಪ್ರಕಾರ ರೈಲ್ವೇಯಲ್ಲಿ ಯುವಕರಿಗೆ ಗರಿಷ್ಠ ಅವಕಾಶಗಳನ್ನು ಒದಗಿಸಲು ಭಾರತೀಯ ರೈಲ್ವೇ ಬದ್ಧವಾಗಿದೆ. 58,642 ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಬುಧವಾರ ತಿಳಿಸಿದ್ದಾರೆ.

ರೈಲ್ವೆ ಸಚಿವ ವೈಷ್ಣವ್ ಅವರು ಲೋಕಸಭೆಯಲ್ಲಿ ರೈಲ್ವೆ (ತಿದ್ದುಪಡಿ) ಮಸೂದೆ 2024 ರ ಮೇಲಿನ ಚರ್ಚೆಗೆ ಉತ್ತರಿಸಿದರು. ಕಾಂಗ್ರೆಸ್ನ ಯುಪಿಎ ಸರ್ಕಾರದ ಅವಧಿಯಲ್ಲಿ 4,11,000 ಜನರಿಗೆ ರೈಲ್ವೆಯಲ್ಲಿ ಉದ್ಯೋಗ ದೊರೆತಿದ್ದರೆ, ಮೋದಿ ಸರ್ಕಾರದಲ್ಲಿ 5,02,000 ಯುವಕರನ್ನು ರೈಲ್ವೇಯಲ್ಲಿ ನೇಮಕ ಮಾಡಿಕೊಳ್ಳಲಾಗಿದೆ. ರೈಲ್ವೇಯಲ್ಲಿ ಖಾಲಿ ಇರುವ 58,642 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಕೇಂದ್ರದ ಮೋದಿ ಸರ್ಕಾರದ ಅಡಿಯಲ್ಲಿ, ಯುವಕರಿಗೆ ಗರಿಷ್ಠ ಅವಕಾಶಗಳನ್ನು ಒದಗಿಸಲು ರೈಲ್ವೆ ಬದ್ಧವಾಗಿದೆ ಎಂದು ಹೇಳಿದ್ದಾರೆ. ದೇಶದಲ್ಲಿ ನಡೆಯುತ್ತಿರುವ ರೈಲ್ವೇ ನೇಮಕಾತಿ ಪರೀಕ್ಷೆಗಳನ್ನು ಉಲ್ಲೇಖಿಸಿದ ರೈಲ್ವೆ ಸಚಿವರು, ಪ್ರಶ್ನೆ ಪತ್ರಿಕೆ ಸೋರಿಕೆಯ ಯಾವುದೇ ದೂರುಗಳಿಲ್ಲದೆ ಈ ಪರೀಕ್ಷೆಗಳನ್ನು ಸುಗಮವಾಗಿ ನಡೆಸಲಾಗುತ್ತಿದೆ ಎಂದು ಹೇಳಿದರು. ದಶಕಗಳ ಹಿಂದಿನ ಬೇಡಿಕೆಯಂತೆ ವಾರ್ಷಿಕ ಕ್ಯಾಲೆಂಡರ್ ಪ್ರಕಾರ ನೇಮಕಾತಿ ಮಾಡಲಾಗುತ್ತದೆ. ರೈಲ್ವೇ ಸಚಿವರೇ ಹೇಳುವಂತೆ ಈ ಸರ್ಕಾರಕ್ಕೂ ಮುನ್ನ ರೈಲ್ವೆ ಬಜೆಟ್ 25-30 ಸಾವಿರ ಕೋಟಿ ಇತ್ತು ಆದರೆ ಪ್ರಧಾನಿ ಮೋದಿ ನೇತೃತ್ವದಲ್ಲಿ 2.52 ಲಕ್ಷ ಕೋಟಿಗೆ ಏರಿಸಲಾಗಿದೆ ಎಂದು ಹೇಳಿದರು. ಈ 10 ವರ್ಷಗಳಲ್ಲಿ 31 ಸಾವಿರ ಕಿಲೋಮೀಟರ್ಗಳಷ್ಟು ಹೊಸ ಹಳಿಗಳನ್ನು ಹಾಕಲಾಗಿದೆ ಎಂದು ರೈಲ್ವೆ ಸಚಿವರು ಹೇಳಿದರು. 15 ಸಾವಿರ ಕಿಲೋಮೀಟರ್ ರೈಲು ಹಳಿಗಳಲ್ಲಿ ರೈಲ್ ಪ್ರೊಟೆಕ್ಷನ್ ಸಿಸ್ಟಮ್ ರಕ್ಷಾಕವಚ ಕೆಲಸ ಮಾಡಲಾಗಿದೆ. ಶ್ರೀಮಂತ ರಾಷ್ಟ್ರಗಳಲ್ಲಿ 20 ವರ್ಷ ತೆಗೆದುಕೊಂಡ ಕೆಲಸವನ್ನು ಭಾರತದಲ್ಲಿ ಐದು ವರ್ಷಗಳಲ್ಲಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

## ಹಿಂದೂ, ಅಲಸಂಖ್ಯಾತರ ಮೇಲಿನ ದಾಳಿ ಒಪ್ಪಿಕೊಂಡ ಬಾಂಗ್ಲಾ ಸರ್ಕಾರ; 88 ಪ್ರಕರಣ ದಾಖಲು, 70 ಮಂದಿ ಬಂಧನ

**ಢಾಕಾ:** ಆಗಸ್ಟ್‌ನಲ್ಲಿ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ನಿರ್ಗಮನದ ನಂತರ ಬಾಂಗ್ಲಾದೇಶವು ಅಲ್ಪಸಂಖ್ಯಾತರನ್ನು, ಮುಖ್ಯವಾಗಿ ಹಿಂದೂಗಳನ್ನು ಗುರಿಯಾಗಿಸಿಕೊಂಡು 88 ಕೋಮು ಹಿಂಸಾಚಾರದ ಪ್ರಕರಣಗಳನ್ನು ಅಲ್ಲಿನ ಹಂಗಾಮಿ ಸರ್ಕಾರ ದೃಢಪಡಿಸಿದೆ. ಹಂಗಾಮಿ ಸರ್ಕಾರದ ಮುಖ್ಯಸ್ಥ ಮುಹಮ್ಮದ್ ಯೂನಸ್ ಅವರ ಪತ್ರಿಕಾ ಕಾರ್ಯದರ್ಶಿ ಶಫೀಕುಲ್ ಆಲಂ ಅಂಕಿ-ಅಂಶಗಳನ್ನು ಬಹಿರಂಗಪಡಿಸಿದ್ದು, ದಾಳಿಗೆ ಸಂಬಂಧಿಸಿದಂತೆ 70 ವ್ಯಕ್ತಿಗಳನ್ನು ಬಂಧಿಸಲಾಗಿದೆ ಎಂದು ಹೇಳಿರುವುದನ್ನು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ. ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ 2-3 ದಿನಗಳ ಹಿಂದೆ ಬಾಂಗ್ಲಾಗೆ ಭೇಟಿ ನೀಡಿದ್ದು, ಬಾಂಗ್ಲಾದೇಶದ ನಾಯಕತ್ವದೊಂದಿಗಿನ ಸಭೆಗಳಲ್ಲಿ ಬಾಂಗ್ಲಾದೇಶದ ಅಲ್ಪಸಂಖ್ಯಾತರ ಸುರಕ್ಷತೆ ಮತ್ತು ಕ್ಷೇಮದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದರು. ಹೆಚ್ಚುತ್ತಿರುವ ದಾಳಿಗಳ ಬಗ್ಗೆ ಭಾರತದ ಆತಂಕವನ್ನು ಮಿಶ್ರಿ ವ್ಯಕ್ತಪಡಿಸಿದ್ದರು, ದುರ್ಬಲ ಸಮುದಾಯಗಳ ವರ್ಧಿತ ರಕ್ಷಣೆಗಾಗಿ ಒತ್ತಾಯಿಸಿದ್ದರು. ಈ ಬೆನ್ನಲ್ಲೇ ಬಾಂಗ್ಲಾ ಹಂಗಾಮಿ ಸರ್ಕಾರ ಅಲ್ಪಸಂಖ್ಯಾತರ ಮೇಲಿನ ದಾಳಿಗಳನ್ನು ಒಪ್ಪಿಕೊಂಡಿದೆ. ಭಾರತ ಬಾಂಗ್ಲಾದೇಶದೊಂದಿಗೆ ಸಕಾರಾತ್ಮಕ ಮತ್ತು ಪರಸ್ಪರ ಪ್ರಯೋಜನಕಾರಿ ಸಂಬಂಧವನ್ನು ಬಯಸುತ್ತದೆ, ರಚನಾತ್ಮಕ ಮತ್ತು ಜನಕೇಂದ್ರಿತ ಪಾಲುದಾರಿಕೆಯ ಬಯಕೆಯನ್ನು ಒತ್ತಿಹೇಳುತ್ತದೆ ಎಂದು ತಮ್ಮ ಭೇಟಿಯಲ್ಲಿ ಮಿಸ್ರಿ ಹೇಳಿದ್ದರು. ಈ ಗುರಿಗಳನ್ನು ಸಾಧಿಸಲು ಬಾಂಗ್ಲಾದೇಶದ ಪ್ರಸ್ತುತ ಮಧ್ಯಂತರ ಸರ್ಕಾರದೊಂದಿಗೆ ನಿಕಟವಾಗಿ ಕೆಲಸ ಮಾಡಲು ಭಾರತದ ಇಚ್ಛೆಯನ್ನು ಅವರು ವ್ಯಕ್ತಪಡಿಸಿದ್ದರು.

## ಆಸ್ಟ್ರೇಲಿಯಾದ ಲ್ಯಾಬ್‌ನಿಂದ 300ಕ್ಕೂ ಹೆಚ್ಚು ಮಾರಣಾಂತಿಕ ವೈರಸ್ ಮಾದರಿಗಳು ನಾಪತ್ತೆ

**ಅಮೆರಿಕ:** ಜೈವಿಕ ಸುರಕ್ಷತಾ ಪ್ರೋಟೋಕಾಲ್ಗಳ ಉಲ್ಲಂಘನೆಯ ಬಗ್ಗೆ ತಕ್ಷಣ ತನಿಖೆ ನಡೆಸುವಂತೆ ಸರ್ಕಾರ ಆಸ್ಟ್ರೇಲಿಯಾದ ಸಾರ್ವಜನಿಕ ಆರೋಗ್ಯ ಇಲಾಖೆಗೆ ನಿರ್ದೇಶನ ನೀಡಿದೆ. ಆಗಸ್ಟ್ 2023 ರಲ್ಲಿ ಕ್ವೀನ್ಸ್‌ಲ್ಯಾಂಡ್ನ ಸಾರ್ವಜನಿಕ ಆರೋಗ್ಯ ವೈರಾಲಜಿ ಪ್ರಯೋಗಾಲಯದಿಂದ ಹೆಂಡ್ರಾ ವೈರಸ್, ಲೈಸ್ಸಾವೈರಸ್ ಮತ್ತು ಹ್ಯಾಂಟವೈರಸ್ ಸೇರಿದಂತೆ ಹಲವಾರು ಸಾಂಕ್ರಾಮಿಕ ವೈರಸ್ಗಳ 323 ಬಾಟಲುಗಳು ಕಾಣೆಯಾಗಿವೆ ಎಂದು ವರದಿಯಾಗಿದೆ.

ಆಸ್ಟ್ರೇಲಿಯಾದ ಕ್ವೀನ್ಸ್‌ಲ್ಯಾಂಡ್ ಪ್ರಯೋಗಾಲಯದಿಂದ ಹೆಂಡ್ರಾ, ಲೈಸಾವೈರಸ್ ಮತ್ತು ಹ್ಯಾಂಟವೈರಸ್ ಸೇರಿದಂತೆ 323 ಮಾರಣಾಂತಿಕ ವೈರಸ್ ಮಾದರಿಗಳು ಕಾಣೆಯಾಗಿವೆ. ವರದಿಗಳ ಪ್ರಕಾರ, ವೈರಸ್ ಮಾದರಿಗಳನ್ನು ಕಳವು ಮಾಡಲಾಗಿದೆಯೇ ಅಥವಾ ನಾಶಪಡಿಸಲಾಗಿದೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಆಸ್ಟ್ರೇಲಿಯಾದ ಸಚಿವ ತಿಮೋತಿ ನಿಕೋಲ್ಸ್, ''ಜೈವಿಕ ಸುರಕ್ಷತಾ ಪ್ರೋಟೋಕಾಲ್ಗಳ ಉಲ್ಲಂಘನೆ ಮತ್ತು ಸಾಂಕ್ರಾಮಿಕ ವೈರಸ್ ಮಾದರಿಗಳು ಕಣ್ಮರೆಯಾಗಿರುವುದು ಬಹಳ ಗಂಭೀರ ವಿಷಯವಾಗಿದೆ. ಇದು ಮತ್ತೆ ಸಂಭವಿಸದಂತೆ ಕ್ವೀನ್ಸ್ ಲ್ಯಾಂಡ್ ಆರೋಗ್ಯ ಇಲಾಖೆ ಈ ಬಗ್ಗೆ ತನಿಖೆ ನಡೆಸಬೇಕು. ಬೋಸ್ಟನ್ ನ ಈಶಾನ್ಯ ವಿಶ್ವವಿದ್ಯಾಲಯದ ಎಐ ಮತ್ತು ಲೈಫ್ ಸೈನ್ಸಸ್ ನಿರ್ದೇಶಕ ಸ್ಯಾಮ್ ಸ್ಕಾರ್ಪಿನೊ, ಆಸ್ಟ್ರೇಲಿಯಾದ ಪ್ರಯೋಗಾಲಯದಿಂದ ವೈರಸ್ ಕಣ್ಮರೆಯಾಗಿರುವುದು ಗಂಭೀರ ಜೈವಿಕ ಸುರಕ್ಷತಾ ಲೋಪವಾಗಿದೆ ಎಂದು ಹೇಳುತ್ತಾರೆ. ಹೆಂಡ್ರಾ, ಆಸ್ಟ್ರೇಲಿಯಾದಲ್ಲಿ ಮಾತ್ರ ಕಂಡುಬರುವ ಝೂನೋಟಿಕ್ (ಪ್ರಾಣಿಯಿಂದ ಮನುಷ್ಯನಿಗೆ) ವೈರಸ್ ಆಗಿದೆ. ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ ಪ್ರಕಾರ, ಹ್ಯಾಂಟವೈರಸ್ಗಳು ಗಂಭೀರ ಅನಾರೋಗ್ಯ ಮತ್ತು ಸಾವಿಗೆ ಕಾರಣವಾಗುವ ವೈರಸ್ಗಳ ಕುಟುಂಬವಾಗಿದೆ. ಲೈಸಾವೈರಸ್ ರೇಬೀಸ್ಗೆ ಕಾರಣವಾಗುವ ವೈರಸ್ಗಳ ಗುಂಪಾಗಿದೆ.





## ಸಿರಿಯಾದಲ್ಲಿನ ಭಾರತೀಯರ ರಕ್ಷಣೆ

**ನವದೆಹಲಿ:** ಸಿರಿಯಾದಲ್ಲಿ ಉಂಟಾದ ಬಿಕ್ಕಟ್ಟು ಇತರ ದೇಶಗಳಲ್ಲಿ ಆತಂಕ ಸೃಷ್ಟಿಸಿದೆ. ಅಲ್ಲಿನ ಅಧ್ಯಕ್ಷ ಬಶರ್ ಅಸ್ಸಾದ್ ಸರ್ಕಾರವನ್ನು ಬಂಡುಕೋರರು ಪತನಗೊಳಿಸಿದ್ದು, ಹೊಸ ಸರ್ಕಾರ ರಚನೆಗೆ ಸಿದ್ಧತೆ ನಡೆದಿದೆ. ಸದ್ಯ ದೇಶದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿರುವ ಹಿನ್ನೆಲೆ ಸಿರಿಯಾದಲ್ಲಿ ಭಾರತೀಯ ಪ್ರಜೆಗಳ ರಕ್ಷಣೆಗೆ ಭಾರತ ಸರ್ಕಾರ ಮುಂದಾಗಿದೆ. ಈ ನಿಟ್ಟಿನಲ್ಲಿ ಮಂಗಳವಾರ ಸಿರಿಯಾದಿಂದ 75 ಭಾರತೀಯ ಪ್ರಜೆಗಳನ್ನು ಸ್ಥಳಾಂತರಿಸುವ ಕಾರ್ಯ ನಡೆದಿದೆ. ಡಮಾಸ್ಕಸ್ ಮತ್ತು ಬೈರುತ್ನಲ್ಲಿನ ಭಾರತೀಯ ರಾಯಭಾರಿ ಕಚೇರಿ ಈ ಸ್ಥಳಾಂತರಕ್ಕೆ ಮುಂದಾಗಿದೆ. ಅಲ್ಲಿನ ಭದ್ರತೆಯ ಹಿತದೃಷ್ಟಿಯ ಮೌಲ್ಯಮಾಪನದ ಬಳಿಕ ಈ ನಿರ್ಧಾರಕ್ಕೆ ಬರಲಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಈ ಸಂಬಂಧ ತಡರಾತ್ರಿ ಹೇಳಿಕೆ ಹೊರಡಿಸಿರುವ ಸಚಿವಾಲಯ, ಸಿರಿಯಾ ದೇಶದಲ್ಲಿನ ಇತ್ತೀಚಿನ ಬೆಳವಣಿಗೆ ಹಿನ್ನೆಲೆ ಭಾರತ ಸರ್ಕಾರವು ಇಂದು 75 ಭಾರತೀಯರ ಸ್ಥಳಾಂತರ ಮಾಡಿದೆ. ಅದರಲ್ಲಿ ಸೈದಾ ಜೈನಬ್ನಲ್ಲಿ ಸಿಲುಕಿದ್ದ 44 ಮಂದಿ ಜಮ್ಮು ಮತ್ತು ಕಾಶ್ಮೀರದ ಜೈರೀನ್ಗಳು ಇದ್ದಾರೆ. ಎಲ್ಲಾ ಭಾರತೀಯರು ಸುರಕ್ಷಿತವಾಗಿ ಲೆಬನಾನ್ ಗಡಿ ದಾಟಿದ್ದು, ಲಭ್ಯವಿರುವ ವಾಣಿಜ್ಯ ವಿಮಾನದಲ್ಲಿ ಭಾರತಕ್ಕೆ ಮರಳಲಿದ್ದಾರೆ ಎಂದು ತಿಳಿಸಿದೆ.

ವಿದೇಶದಲ್ಲಿ ಸಿಲುಕಿರುವ ಭಾರತೀಯರ ಸುರಕ್ಷತೆ ಮತ್ತು ಭದ್ರತೆಯು ಭಾರತ ಸರ್ಕಾರದ ಆದ್ಯತೆಯಾಗಿದೆ ಎಂದು ಸಚಿವಾಲಯ ತಿಳಿಸಿದೆ. ಈ ಹಿನ್ನೆಲೆ ಸಿರಿಯಾದಲ್ಲಿ ಸಿಲುಕಿರುವ ಭಾರತೀಯರು ಡಮಾಸ್ಕಸ್‌ನಲ್ಲಿರುವ ಭಾರತೀಯ ರಾಯಭಾರಿ ಕಚೇರಿ ಸಂಪರ್ಕಿಸುವಂತೆ ಸಲಹೆ ನೀಡಲಾಗಿದೆ. ಸಿರಿಯಾದಲ್ಲಿನ ಪರಿಸ್ಥಿತಿ ಕುರಿತು ಭಾರತ ಕುರಿತು ಸೂಕ್ಷ್ಮ ಮೇಲ್ವಿಚಾರಣೆ ನಡೆಸಲಿದೆ ಎಂದಿದೆ. ಸಿರಿಯಾದಲ್ಲಿ ಸಿಲುಕಿರುವ ಭಾರತೀಯರು ಡಮಾಸ್ಕಸ್ನಲ್ಲಿರುವ ತುರ್ತು ಸಹಾಯವಾಣಿ +963 993385973ಗೆ ವಾಟ್ಸಾಪ್ ಮತ್ತು hoc.damascus@mea.gov.in ಇಮೇಲ್ ಮೂಲಕ ಸಂಪರ್ಕಿಸುವಂತೆ ಸಲಹೆ ನೀಡಿದೆ.

## ಹಠಾತ್ ಸಾವಿಗೆ ಕೋವಿಡ್ ಲಸಿಕೆ ಕಾರಣವಲ್ಲ: ಸಚಿವ ಜೆ.ಪಿ.ನಡ್ಡಾ ಸ್ಪಷ್ಟನೆ

**ದೆಹಲಿ:** ಇತ್ತೀಚಿನ ದಿನಗಳಲ್ಲಿ ಯುವಜನತೆಯಲ್ಲಿನ ಹೃದಯಾಘಾತದ ಪ್ರಮಾಣ ಹೆಚ್ಚಾಗುತ್ತಿದ್ದು, ಇದಕ್ಕೆ ಕೋವಿಡ್-19 ವಿರುದ್ಧದ ಲಸಿಕೆ ಕಾರಣವಲ್ಲ ಎಂದು ರಾಜ್ಯಸಭೆಯಲ್ಲಿ ಆರೋಗ್ಯ ಸಚಿವ ಜೆ.ಪಿ.ನಡ್ಡಾ ತಿಳಿಸಿದ್ದಾರೆ. ಇದಕ್ಕೆ ಪೂರಕವಾಗಿ ಅವರು ದಿ ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರಿಸರ್ಚ್ ನ ಸಂಶೋಧನಾ ವರದಿಯನ್ನು ಉಲ್ಲೇಖಿಸಿದ್ದಾರೆ. ರಾಜ್ಯಸಭೆಯಲ್ಲಿ ಕೇಳಿದ ಪ್ರಶ್ನೆಯೊಂದಕ್ಕೆ ಉತ್ತರಿಸಿ ಅವರು ಈ ಸ್ಪಷ್ಟನೆ ನೀಡಿದ್ದಾರೆ.

ಕೆಲವೊಮ್ಮೆ ನೃತ್ಯ ಮಾಡುವಾಗ ಮತ್ತು ಕೆಲವೊಮ್ಮೆ ಜಿಮ್ನಲ್ಲಿ ವರ್ಕೌಟ್ ಮಾಡುವಾಗ ಹೃದಯಾಘಾತದಿಂದ ಸಾವನ್ನಪ್ಪುವ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ದೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವರದಿಯಾಗುತ್ತಿದೆ. ಹಲವರು ಇದಕ್ಕೆ ಕಾರಣ ಕೊರೊನಾ ಲಸಿಕೆ ಕಾರಣ ಎನ್ನುತ್ತಿದ್ದಾರೆ. ಈ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆ ನಡೆಯುತ್ತಿದೆ. ಈ ವದಂತಿಗೆ ಇದೀಗ ಕೇಂದ್ರ ಫುಲ್‌ಸ್ಟಾಪ್ ಇಟ್ಟಿದೆ.

ಐಸಿಎಂಆರ್-ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಎಪಿಡೆಮಿಯಾಲಜಿ ಕಳೆದ ವರ್ಷದ ಮೇ-ಆಗಸ್ಟ್ ಅವಧಿಯಲ್ಲಿ 19 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 47 ತೃತೀಯ ಆರೈಕೆ ಆಸ್ಪತ್ರೆಗಳಲ್ಲಿ



ಸಂಶೋಧನೆ ನಡೆಸಿ 'ಭಾರತದ 18-45 ವಯಸ್ಕರಲ್ಲಿ ವಿವರಿಸಲಾಗದ ಹಠಾತ್ ಸಾವುಗಳಿಗೆ ಸಂಬಂಧಿಸಿದ ಅಂಶಗಳು' ಎಂಬ ಅಧ್ಯಯನದ ಮೂಲಕ ಈ ನಿಗಮನಕ್ಕೆ ಬರಲಾಗಿದೆ ಎಂದು ನಡ್ಡಾ ತಿಳಿಸಿದ್ದಾರೆ.

ಕೋವಿಡ್-19 ಲಸಿಕೆಯ ಕನಿಷ್ಠ 1 ಡೋಸ್ ಅಥವಾ 2 ಡೋಸ್ಗಳನ್ನು ತೆಗೆದುಕೊಳ್ಳುವುದು ಯಾವುದೇ ಕಾರಣವಿಲ್ಲದೆ ಸಂಭವಿಸುವ ಹಠಾತ್ ಸಾವಿನ ಸಾಧ್ಯತೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ ಎಂದು ಸಂಶೋಧನೆಗಳು ತೋರಿಸಿವೆ ಎಂದು ಸಚಿವ ಜೆಪಿ ನಡ್ಡಾ ವಿವರಿಸಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಪೂಜಾ ಹೆಗ್ಡೆಗೆ ಠಕ್ಕರ್– ನಾಗಚೈತನ್ಯಗೆ ಶ್ರೀಲೀಲಾ ಜೋಡಿ?



ಕನ್ನಡತಿ ಶ್ರೀಲೀಲಾ 'ಪುಷ್ಪ 2' ಸಿನಿಮಾದಲ್ಲಿ ಐಟಂ ಹಾಡಿಗೆ ಸೊಂಟ ಬಳುಕಿಸಿದ ಮೇಲೆ ಬೇಡಿಕೆ ಹೆಚ್ಚಾಗಿದೆ. ಸದ್ಯ ಕರಾವಳಿ ನಟಿ ಪೂಜಾ ಹೆಗ್ಡೆಗೆ ಠಕ್ಕರ್ ಕೊಟ್ಟು ಶ್ರೀಲೀಲಾ ಬಿಗ್ ಆಫರ್‌ವೊಂದನ್ನು ಬಾಚಿಕೊಂಡಿದ್ದಾರೆ. ಸಮಂತಾ ಮಾಜಿ ಪತಿ ನಾಗಚೈತನ್ಯ ಸಿನಿಮಾಗೆ ನಾಯಕಿಯಾಗಿದ್ದಾರೆ ಎನ್ನಲಾದ ಸುದ್ದಿಯೊಂದು ಚರ್ಚೆಗೆ ಗ್ರಾಸವಾಗಿದೆ.

ಟಾಲಿವುಡ್‌ನಲ್ಲಿ ನಟನೆ, ಡ್ಯಾನ್ಸ್, ಬ್ಯೂಟಿ ಮೂಲಕ ಎಲ್ಲರ ಮನಗೆದ್ದಿರುವ ಸುಂದರಿ ಶ್ರೀಲೀಲಾ ಸಾಲು ಸಾಲು ಅವಕಾಶಗಳು ಅರಸಿ ಬರುತ್ತಿವೆ. ನಾಗಚೈತನ್ಯ ನಟನೆಯ 24ನೇ ಸಿನಿಮಾಗೆ ಪೂಜಾ ಹೆಗ್ಡೆರನ್ನು ಆಯ್ಕೆ ಮಾಡಿದೆ ಎಂಬ ಸುದ್ದಿ ಇತ್ತು. ಈಗ ಪೂಜಾರನ್ನು ನಾಯಕಿ ಪಾತ್ರಕ್ಕೆ ಕೈಬಿಡಲಾಗಿದ್ದು, ಶ್ರೀಲೀಲಾರನ್ನು ತಂಡ ಫೈನಲ್ ಮಾಡಿದೆ ಎನ್ನಲಾಗಿದೆ. ಚಿತ್ರತಂಡದಿಂದ ಈ ಕುರಿತು ಅಧಿಕೃತ ಮಾಹಿತಿ ಸಿಗುವವರೆಗೂ ಕಾದುನೋಡಬೇಕಿದೆ.

ಇನ್ನೂ 'ಪುಷ್ಪ 2' ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಜೊತೆ ಶ್ರೀಲೀಲಾ ಡ್ಯಾನ್ಸ್ ಮಾಡುವ ಮೂಲಕ ಹೈಪ್ ಕ್ರಿಯೆಟ್ ಆಗಿದೆ. ಜೊತೆಗೆ ನಿತಿನ್ ಜೊತೆಗಿನ 'ರಾಬಿನ್ ಹುಡ್' ಸಿನಿಮಾ ರಿಲೀಸ್‌ಗೆ ಸಿದ್ಧವಾಗಿದೆ.




# 1000 ಕೋಟಿ ದಾಟಿದ ಪುಷ್ಪ 2

ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಗಲ್ಲಾಪೆಟ್ಟಿಗೆಯಲ್ಲಿ ಭರ್ಜರಿ ಕಲೆಕ್ಷನ್ ಮಾಡಿದೆ. ಇದೀಗ 1000 ಕೋಟಿ ರೂ. ಕಲೆಕ್ಷನ್ ಮಾಡಿ ಗೆದ್ದು ಬೀಗಿದೆ. ಪ್ರಸ್ತುತ 6 ದಿನಗಳಲ್ಲಿ 1000 ಕೋಟಿ ರೂ. ಗಳಿಕೆ ಮಾಡಿದ 'ಪುಷ್ಪ 2' ಮುನ್ನುಗ್ಗುತ್ತಿದೆ. ಈ ಕುರಿತು ನಿರ್ಮಾಣ ಸಂಸ್ಥೆಯೇ ಅಧಿಕೃತವಾಗಿ ತಿಳಿಸಿದೆ.

ಬಹುಭಾಷೆಗಳಲ್ಲಿ 'ಪುಷ್ಪ 2' ಸಿನಿಮಾವನ್ನು ಮೈತ್ರಿ ಮೂವಿ ಮೇಕರ್ಸ್ ನಿರ್ಮಾಣ ಮಾಡಿದೆ. ಇದೀಗ ಈ ಚಿತ್ರ ವಿಶ್ವಾದ್ಯಂತ 1002 ಕೋಟಿ ರೂ. ಕಲೆಕ್ಷನ್ ಮಾಡಿದೆ ಎಂದು ಸೋಶಿಯಲ್ ಮೀಡಿಯಾದಲ್ಲಿ ನಿರ್ಮಾಣ ಸಂಸ್ಥೆ ತಿಳಿಸಿದೆ. ಈ ಮೂಲಕ ಚಿತ್ರತಂಡ ಸಕ್ಸಸ್ ಅನ್ನು ಸಂಭ್ರಮಿಸುತ್ತಿದೆ. ಸಾವಿರ ಕೋಟಿ ಸರದಾರನಾಗಿ ಪುಷ್ಪರಾಜ್ ಸಕ್ಸಸ್ ಗಳಿಸಿದ್ದಾರೆ.

ಇನ್ನೂ ಅಲ್ಲು ಅರ್ಜುನ್ ನಟನೆ ಮತ್ತು ಭರ್ಜರಿ ಆಕ್ಷನ್ ಸೀಕ್ವೆನ್ಸ್ ಫ್ಯಾನ್ಸ್‌ಗೆ ಇಷ್ಟವಾಗಿದೆ. ಶ್ರೀವಲ್ಲಿಯಾಗಿ ರಶ್ಮಿಕಾ ನಟನೆಯನ್ನು ಅಭಿಮಾನಿಗಳು ಕೊಂಡಾಡಿದ್ದಾರೆ. ಶ್ರೀಲೀಲಾ ಕಿಸ್ಸಿಕ್ ಸಾಂಗ್, ಫಹಾದ್ ಫಾಸಿಲ್ ನಟನೆ, ಪುಷ್ಪರಾಜ್ ಜೊತೆಗಿನ ತಾರಕ್ ಪೊನ್ನಪ್ಪ ಸಂಘರ್ಷ ಇವೆಲ್ಲವೂ ಸಿನಿಮಾದಲ್ಲಿ ಹೈಲೆಟ್ ಆಗಿದೆ. ಕನ್ನಡದ ಸಾಕಷ್ಟು ಸಿನಿಮಾಗಳಲ್ಲಿ ನಟಿಸಿದ್ದ ತಾರಕ್ ನಟನೆ ಈ ಸಿನಿಮಾದಲ್ಲಿ ತಿರುವು ನೀಡಲಿದೆ. ಸುಕುಮಾರ್ ನಿರ್ದೇಶನವನ್ನು ಅಭಿಮಾನಿಗಳು ಮೆಚ್ಚಿಕೊಂಡಿದ್ದಾರೆ.

ಅಂದಹಾಗೆ, ಚಿತ್ರದಲ್ಲಿ ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ, ಶ್ರೀಲೀಲಾ, ಡಾಲಿ, ತಾರಕ್, ಅನಸೂಯ, ಜಗಪತಿ ಬಾಬು ಸೇರಿದಂತೆ ಅನೇಕರು ನಟಿಸಿದ್ದಾರೆ.

**ಗಲ್ಲಾ ಪೆಟ್ಟಿಗೆಯಲ್ಲಿ ಅಲ್ಲು ಅರ್ಜುನ್ ಸಿನಿಮಾ ರಣಕೇಕೆ**



# 'ಅಯೋಗ್ಯ 2'ಗೆ ಅದ್ದೂರಿ ಮುಹೂರ್ತ

ಸ್ಯಾಂಡಲ್‌ವುಡ್‌ನ ಸೂಪರ್ ಸಕ್ಸಸ್ ಜೋಡಿಗಳಲ್ಲಿ ಒಂದಾಗಿರುವ ರಚಿತಾ ರಾಮ್ ಹಾಗೂ ಸತೀಶ್ ನೀನಾಸಂ ಮತ್ತೆ ಅಭಿಮಾನಿಗಳ ಮುಂದೆ ಬರಲು ಸಜ್ಜಾಗಿದ್ದಾರೆ. 'ಅಯೋಗ್ಯ 2' ಸಿನಿಮಾಗಿ ರಚಿತಾ ರಾಮ್ ಮತ್ತು ಸತೀಶ್ ನೀನಾಸಂ ಒಂದಾಗಿದ್ದಾರೆ. ಸೂಪರ್ ಹಿಟ್ 'ಅಯೋಗ್ಯ' ಸಿನಿಮಾ ಮೂಲಕ ಮೋಡಿ ಮಾಡಿದ್ದ ಈ ಜೋಡಿ ಇದೀಗ 6 ವರ್ಷಗಳ ಬಳಿಕ ಮತ್ತೆ ಅಭಿಮಾನಿಗಳನ್ನು ರಂಜಿಸಲು ರೆಡಿಯಾಗಿದ್ದಾರೆ.

ಬಸವನಗುಡಿಯ ದೊಡ್ಡ ಗಣಪತಿ ದೇವಸ್ಥಾನದಲ್ಲಿ ನಡೆದ ಅದ್ದೂರಿ ಮುಹೂರ್ತ ಸಮಾರಂಭದಲ್ಲಿ 'ಅಯೋಗ್ಯ 2' ಚಿತ್ರೀಕರಣಕ್ಕೆ ಚಾಲನೆ ಸಿಕ್ಕಿದೆ. ಡೈರೆಕ್ಟರ್ ಮಹೇಶ್ ಕುಮಾರ್ ಸಾರಥ್ಯದಲ್ಲಿ 'ಅಯೋಗ್ಯ 2' ಮೂಡಿ ಬರುತ್ತಿದ್ದು, ಮುನೇಗೌಡ ಅವರು ತಮ್ಮ ಎಸ್ ವಿ ಸಿ ಪ್ರೊಡಕ್ಷನ್ ನಲ್ಲಿ ಬಂಡವಾಳ ಹೂಡಿದ್ದಾರೆ.

ಇನ್ನೂ ಅಶ್ವಿನಿ ಪುನೀತ್ ರಾಜ್‌ಕುಮಾರ್ 'ಅಯೋಗ್ಯ 2' ಚಿತ್ರಕ್ಕೆ ಕ್ಲ್ಯಾಪ್ ಮಾಡುವ ಮೂಲಕ ಚಿತ್ರತಂಡಕ್ಕೆ ಶುಭಹಾರೈಸಿದರು. ಮುಹೂರ್ತ ಸಮಾರಂಭದಲ್ಲಿ ಇಡೀ ಸಿನಿಮಾತಂಡದ ಜೊತೆಗೆ ನೆನಪಿರಲಿ ಪ್ರೇಮ್, ನಟ ಶ್ರೇಯರ್ ಮಂಜು, ಪ್ರಮೋದ್ ಸೇರಿದಂತೆ ಅನೇಕ ಕಲಾವಿದರು ಹಾಜರಿದ್ದು ಸಿನಿಮಾತಂಡಕ್ಕೆ ಶುಭಹಾರೈಸಿದರು.

ಪೂಜೆಯ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕ ಮಹೇಶ್, ಅಯೋಗ್ಯ 2 ಕನ್ನಡದ ಜೊತೆಗೆ ತಮಿಳು, ತೆಲುಗಿನಲ್ಲೂ ಮಾಡುತ್ತಿದ್ದೇವೆ. ರಚಿತಾ ಮತ್ತು ಸತೀಶ್ ಅವರನ್ನು ತೆರೆಮೇಲೆ ನೋಡೋಕೆ ತುಂಬಾ ಖುಷಿ ಆಗುತ್ತೆ. ಇದು ಪ್ಯಾನ್ ಇಂಡಿಯಾ ಸಿನಿಮಾ ಅಲ್ಲ, ಫ್ಯಾನ್ ಇಂಡಿಯಾ ಸಿನಿಮಾ. ಮೊದಲ ಭಾಗ ಹಿಟ್ ಆದ್ಮೇಲೆ ಬೇರೆ ಭಾಷೆಗೆ ಡಬ್ ಮಾಡಿದ್ವಿ. ಆದರೀಗ ತಮಿಳು ಹಾಗೂ ತೆಲುಗಿನಲ್ಲಿ ಮಾಡುತ್ತಿದ್ದೇವೆ ಎಂದು ಹೇಳಿದರು. ನೀನಾಸಂ ಸತೀಶ್ ಮಾತನಾಡಿ, ಅಯೋಗ್ಯ 2 ಸಿನಿಮಾಗೆ ನಿರ್ಮಾಪಕರ ದೊಡ್ಡ ಲಿಸ್ಟ್ ಇತ್ತು. ಆದರೆ ಕೊನೆಯದಾಗಿ ಮುನೇಗೌಡ ಅವರು ಫೈನಲ್ ಆಗಿದ್ದಾರೆ ಅವರು ಉತ್ತಮ ನಿರ್ಮಾಪಕರು. ಅಯೋಗ್ಯ 2 ಸಿನಿಮಾ ಕನ್ನಡ ಸಿನಿಮಾರಂಗಕ್ಕೆ ದೊಡ್ಡ ಸಿನಿಮಾವಾಗಲಿದೆ ಎಂದು ಹೇಳಿದರು.

ನಿರ್ಮಾಪಕ ಎಂ ಮುನೇಗೌಡ ಮಾತನಾಡಿ, 'ಕನ್ನಡ ಸಿನಿಮಾರಂಗಕ್ಕೆ ಉತ್ತಮ ಸಿನಿಮಾವಾಗಲಿದೆ. ಮಹೇಶ್ ಬಂದು ಅಯೋಗ್ಯ 2 ಮಾಡಬೇಕು ಅಂದಾಗ ಹಿಂದೆ ಮುಂದೆ ನೋಡದೇ ಒಪ್ಪಿಕೊಂಡೆ. ಅಯೋಗ್ಯ ಮೊದಲ ಭಾಗ ಸೂಪರ್ ಹಿಟ್ ಆಗಿತ್ತು. ರಚಿತಾ ಮೇಡಮ್ ಕೂಡ ಸಿನಿಮಾ ಮಾಡಿ ಎಂದರು. ಎಲ್ಲಾ ಉತ್ತಮ ಕಲಾವಿದರಿದ್ದಾರೆ ಎಂದು ಹೇಳಿದರು.



**ಮತ್ತೆ ಜೊತೆಯಾದ ಸತೀಶ್ ನೀನಾಸಂ, ರಚಿತಾ ರಾಮ್**

# ಭಾರತಕ್ಕೂ ಮೊದಲೇ ಚಾಂಪಿಯನ್ಸ್ ಟ್ರೋಫಿ ಬಾಯ್ಕಾಟ್ ಮಾಡ್ಬೇಕು: ಪಾಕ್ ಹೊಸ ಕ್ಯಾತೆ

ತೀವ್ರ ಕುತೂಹಲ ಮೂಡಿಸಿರುವ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಟೂರ್ನಿಯನ್ನು ಹೈಬ್ರಿಡ್ ಮಾದರಿಯಲ್ಲಿ ನಡೆಸುವ ಸಂಬಂಧ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ ಒಮ್ಮತದ ನಿರ್ಣಯ ಕೈಗೊಂಡಿದೆ. ಮುಂದಿನ ವರ್ಷ ಪಾಕಿಸ್ತಾನದಲ್ಲಿ ನಡೆಯಲಿರುವ ಟ್ರೋಫಿಯಲ್ಲಿ ಭಾರತ ತನ್ನ ಪಂದ್ಯಗಳನ್ನು ದುಬೈನಲ್ಲಿ ಆಡುವುದಕ್ಕೆ ಐಸಿಸಿ ಅನುಮತಿ ನೀಡಿದೆ. ಈ ನಡುವೆ ಪಾಕಿಸ್ತಾನ ಕ್ರಿಕೆಟ್ ತಂಡದ ಮಾಜಿ ನಾಯಕ ಹಾಗೂ ಮಾಜಿ ಕೋಚ್ ರಶೀದ್ ಲತೀಫ್ ಹೊಸ ಕ್ಯಾತೆ ತೆಗೆದಿದ್ದಾರೆ.

ಖಾಸಗಿ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಲತೀಫ್, ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಮುಂದಿನ ಹೆಜ್ಜೆ ಇಡುವ ಮೊದಲು ಪಾಕಿಸ್ತಾನ ಚಾಂಪಿಯನ್ಸ್ ಟ್ರೋಫಿಯನ್ನ ಬಾಯ್ಕಾಟ್ ಮಾಡಬೇಕು. ಇನ್ಮುಂದೆ ಚಾಂಪಿಯನ್ ಟ್ರೋಫಿ ನಡೆಯಬಾರದು ಎಂದು ಹೇಳಿದ್ದಾರೆ.

ಚಾಂಪಿಯನ್ಸ್ ಟ್ರೋಫಿ ಪೂರ್ಣ ಪಂದ್ಯಗಳು ಪಾಕಿಸ್ತಾನದಲ್ಲಿ ನಡೆಯಬೇಕಿತ್ತು. ಆದ್ರೆ ಭದ್ರತಾ ಕಾಳಜಿಯನ್ನು ಉಲ್ಲೇಖಿಸಿ, ಭಾರತ ತನ್ನ ಪಂದ್ಯಗಳನ್ನಾಡಲು ನಿರಾಕರಿಸಿದೆ. ಐಸಿಸಿ ಹೈಬ್ರಿಡ್ ಮಾದರಿಗೆ ಒಪ್ಪಿಗೆ ಸೂಚಿಸಿದ್ದರೂ ಬಿಸಿಸಿಐ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ನಮ್ಮನ್ನು ಯಾವಾಗಲೂ ಬಲಿಪಶುಗಳಾಗಿ ಮಾಡುತ್ತಿದ್ದಾರೆ ಎಂದು ಅಸಮಾಧಾನ ಹೊರಹಾಕಿದ್ದಾರೆ.




ಪಾಕಿಸ್ತಾನ ಕ್ರಿಕೆಟ್ ಬೋರ್ಡ್, ಅಫ್ಘಾನಿಸ್ತಾನ ಕ್ರಿಕೆಟ್ ಬೋರ್ಡ್ ಆಗಿರಲಿ ಅಥವಾ ಐಸಿಸಿ ಆಗಿರಲಿ, ಬಿಸಿಸಿಐ ಎದುರು ಫೈಟ್ ಮಾಡೋಕೆ ಸಾಧ್ಯವಿಲ್ಲ. ಭಾರತ ಬಹಿಷ್ಕರಿಸಿದ್ರೆ, ನಾವು ಎಲ್ಲಿಗೆ ಹೋಗಿ ನಿಲ್ಲಬೇಕಾಗುತ್ತೆ ಅನ್ನೋ ಭಯ ಇದೆ. ಅದಕ್ಕಾಗಿ ಪಾಕಿಸ್ತಾನವನ್ನು ಬಲಿಪಶುಗಳಾಗಿ ಮಾಡ್ತಾರೆ. ಆದ್ದರಿಂದ ಬಿಸಿಸಿಐ ಮುಂದಿನ ನಡೆದ ತೆಗೆದುಕೊಳ್ಳುವ ಮೊದಲು ಪಾಕಿಸ್ತಾನ ಟೂರ್ನಿಯನ್ನ ಬಹಿಷ್ಕರಿಸಬೇಕು ಎಂದು ಕರೆ ಕೊಟ್ಟಿದ್ದಾರೆ.

2025ರ ಫೆಬ್ರವರಿ– ಮಾರ್ಚ್‌ನಲ್ಲಿ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿ ಟೂರ್ನಿಗೆ ಶೀಘ್ರದಲ್ಲಿಯೇ ವೇಳಾಪಟ್ಟಿ ಪ್ರಕಟವಾಗಲಿದೆ. ಭಾರತ ತನ್ನ ಪಂದ್ಯಗಳನ್ನು ದುಬೈನಲ್ಲಿ ಆಡಲಿದೆ. ತಾನು ಹೈಬ್ರಿಡ್ ಮಾದರಿಗೆ ಸುತಾರಾಂ ಒಪ್ಪುವುದಿಲ್ಲ ಎಂದು ಕಳೆದ ವಾರ ಹಠ ಹಿಡಿದಿದ್ದ ಪಾಕಿಸ್ತಾನ, ಬಹಿಷ್ಕಾರದ ಬೆದರಿಕೆ ಹಿಂಪಡೆದು, ಹೈಬ್ರಿಡ್ ಮಾದರಿಗೆ ಒಪ್ಪಿಕೊಂಡಿರುವುದಲ್ಲದೆ, ಈ ವ್ಯವಸ್ಥೆ 2031ರವರೆಗೂ ಮುಂದುವರಿಯಬೇಕು ಎಂದು ಆಗ್ರಹಿಸಿತ್ತು. ಅಲ್ಲದೇ ಫೈನಲ್ ಪಂದ್ಯ ಲಾಹೋರ್ ನಲ್ಲೇ ನಡೆಯಬೇಕು ಎಂದು ಷರತ್ತು ವಿಧಿಸಿದೆ. ಸದ್ಯಕ್ಕೆ ಐಸಿಸಿ ತನ್ನ ಟೂರ್ನಿಗಳನ್ನು ಹೈಬ್ರಿಡ್ ಮಾದರಿಯಲ್ಲಿ 2027ರ ವರೆಗೆ ನಡೆಸಲು ಒಪ್ಪಿಕೊಂಡಿದೆ. ಆದ್ರೆ ಫೈನಲ್ ಪಂದ್ಯವನ್ನು ಲಾಹೋರ್‌ನಲ್ಲೇ ನಡೆಸುವ ಬಗ್ಗೆ ಒಪ್ಪಿಗೆ ಸೂಚಿಸಿಲ್ಲ.

## ಟೆಸ್ಟ್ ರ್‍ಯಾಂಕಿಂಗ್ ಪ್ರಕಟ

# 27 ತಿಂಗಳಲ್ಲೇ ಅಗ್ರಸ್ಥಾನ ಅಲಂಕರಿಸಿದ ಹ್ಯಾರಿ ಬ್ರೂಕ್

ಐಸಿಸಿ ಟೆಸ್ಟ್ ಬ್ಯಾಟರ್‌ಗಳ ನೂತನ ರ್‍ಯಾಂಕಿಂಗ್ ಪಟ್ಟಿಯನ್ನು ಪ್ರಕಟಿಸಿದೆ. ಈ ಬಾರಿ ದಿಗ್ಗಜರನ್ನೇ ಹಿಂದಿಕ್ಕಿ ಇಂಗ್ಲೆಂಡ್ ತಂಡದ ಯುವ ದಾಂಡಿಗ ಹ್ಯಾರಿ ಬ್ರೂಕ್ ಅಗ್ರಸ್ಥಾನ ಅಲಂಕರಿಸಿದ್ದಾರೆ. ಅದು ಕೂಡ ಕೇವಲ 27 ತಿಂಗಳಲ್ಲಿ ಎಂಬುದು ವಿಶೇಷ.

ಅಂದರೆ 2022 ರಲ್ಲಿ ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದ ಹ್ಯಾರಿ ಬ್ರೂಕ್ ಕೇವಲ 23 ಪಂದ್ಯಗಳ ಮೂಲಕ 2280 ರನ್ ಗಳಿಸಿದ್ದಾರೆ. ಈ ವೇಳೆ 8 ಶತಕ ಹಾಗೂ 10 ಅರ್ಧಶತಕಗಳನ್ನು ಬಾರಿಸಿದ್ದಾರೆ. ಈ ಭರ್ಜರಿ ಪ್ರದರ್ಶನದೊಂದಿಗೆ 898 ಅಂಕಗಳನ್ನು ಕಲೆಹಾಕಿರುವ ಬ್ರೂಕ್ ಟೆಸ್ಟ್ ಕ್ರಿಕೆಟ್‌ನ ನಂಬರ್ 1 ಬ್ಯಾಟರ್ ಎನಿಸಿಕೊಂಡಿದ್ದಾರೆ.

ಇನ್ನು ಈ ಪಟ್ಟಿಯಲ್ಲಿ ಇಂಗ್ಲೆಂಡ್‌ನ ಜೋ ರೂಟ್ ದ್ವಿತೀಯ ಸ್ಥಾನದಲ್ಲಿದ್ದು, ಒಟ್ಟು 897 ಅಂಕಗಳನ್ನು ಪಡೆದಿದ್ದಾರೆ. ಹಾಗೆಯೇ 812 ಅಂಕಗಳನ್ನು ಹೊಂದಿರುವ ನ್ಯೂಝಿಲೆಂಡ್ ತಂಡದ ಕೇನ್ ವಿಲಿಯಮ್ಸನ್ ಮೂರನೇ ಸ್ಥಾನ ಅಲಂಕರಿಸಿದ್ದಾರೆ.

4ನೇ ಸ್ಥಾನದಲ್ಲಿ ಟೀಮ್ ಇಂಡಿಯಾದ ಯುವ ದಾಂಡಿಗ ಯಶಸ್ವಿ ಜೈಸ್ವಾಲ್ ಕಾಣಿಸಿಕೊಂಡಿದ್ದಾರೆ. ಒಟ್ಟು 811 ಅಂಕಗಳನ್ನು ಹೊಂದಿರುವ ಜೈಸ್ವಾಲ್, ಟಾಪ್–5 ನಲ್ಲಿ ಕಾಣಿಸಿಕೊಂಡ ಏಕೈಕ ಭಾರತೀಯ ಬ್ಯಾಟ್ಸ್‌ಮನ್ ಎಂಬುದು ವಿಶೇಷ.




ಇನ್ನು ಅಡಿಲೇಡ್ ಟೆಸ್ಟ್‌ನಲ್ಲಿ ಭರ್ಜರಿ ಶತಕ ಸಿಡಿಸಿದ್ದ ಟ್ರಾವಿಸ್ ಹೆಡ್ ಈ ಬಾರಿ 6 ಸ್ಥಾನ ಮೇಲೇರಿದ್ದಾರೆ. ಅದರಂತೆ ನೂತನ ಟೆಸ್ಟ್ ರ್‍ಯಾಂಕಿಂಗ್ ಪಟ್ಟಿಯಲ್ಲಿ 781 ಅಂಕಗಳೊಂದಿಗೆ 5ನೇ ಸ್ಥಾನ ಅಲಂಕರಿಸಿದ್ದಾರೆ.

ಆರನೇ ಸ್ಥಾನದಲ್ಲಿ ಶ್ರೀಲಂಕಾದ ಕಮಿಂದು ಮೆಂಡಿಸ್ (759) ಇದ್ದರೆ, ಏಳನೇ ಸ್ಥಾನದಲ್ಲಿ ಸೌತ್ ಆಫ್ರಿಕಾದ ಟೆಂಬಾ ಬವುಮಾ (753) ಕಾಣಿಸಿಕೊಂಡಿದ್ದಾರೆ. ಇನ್ನು ನ್ಯೂಝಿಲೆಂಡ್‌ನ ಡೇರಿಲ್ ಮಿಚೆಲ್ (729) ಎಂಟನೇ ಸ್ಥಾನದಲ್ಲಿದ್ದಾರೆ.

ಒಂಬತ್ತನೇ ಸ್ಥಾನದಲ್ಲಿ ಟೀಮ್ ಇಂಡಿಯಾದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ಕಾಣಿಸಿಕೊಂಡಿದ್ದಾರೆ. ಒಟ್ಟು 724 ಅಂಕಗಳನ್ನು ಹೊಂದಿರುವ ಪಂತ್ ಟಾಪ್–10 ನಲ್ಲಿ ಕಾಣಿಸಿಕೊಂಡ ಎರಡನೇ ಭಾರತೀಯ ಆಟಗಾರ. ಇನ್ನು ಹತ್ತನೇ ಸ್ಥಾನ ಅಲಂಕರಿಸುವಲ್ಲಿ ಪಾಕಿಸ್ತಾನದ ಸೌದ್ ಶಕೀಲ್ (724) ಯಶಸ್ವಿಯಾಗಿದ್ದಾರೆ.

## ಹನುಮಮಾಲಾ ವಿಸರ್ಜನೆ ಕಾರ್ಯಕ್ರಮಕ್ಕೆ ಕ್ಷಣಗಣನೆ

# ಅಂಜನಾದ್ರಿ ಬೆಟ್ಟದಲ್ಲಿ ತಯಾರಿ

**ಕೊಪ್ಪಳ:** ಪೌರಾಣಿಕ ಪ್ರಸಿದ್ಧ ಹನುಮ ಜನ್ಮಸ್ಥಳ ಅಂಜನಾದ್ರಿ ಬೆಟ್ಟದಲ್ಲಿ ಡಿ.12 ಮತ್ತು 13 ರಂದು ನಡೆಯಲಿರುವ ಹನುಮಮಾಲೆ ವಿಸರ್ಜನೆ ಕಾರ್ಯಕ್ರಮಕ್ಕೆ ಕೆಲವೇ ಗಂಟೆಗಳು ಮಾತ್ರ ಬಾಕಿ ಇದೆ. ಭಕ್ತರ ಸ್ವಾಗತಕ್ಕೆ ಕೊಪ್ಪಳ ಜಿಲ್ಲೆ ಗಂಗಾವತಿ ತಾಲೂಕಿನ ಕಿಷ್ಕಿಂಧ ಪ್ರದೇಶ ಮದುವೆ ಮನೆಯಂತೆ ಸಿದ್ಧಗೊಂಡಿದೆ.

ಹನುಮ ಮಾಲೆ ಧರಿಸಿ, ವ್ರತ ಕೈಗೊಂಡಿರುವ ರಾಜ್ಯಾದ್ಯಂತ ನಾನಾ ಭಾಗದ ಲಕ್ಷಾಂತರ ಭಕ್ತರು, ಈಗಾಗಲೇ ಅಂಜನದ್ರಿ ಕಡೆ ಮುಖ ಮಾಡಿದ್ದಾರೆ. ಡಿ.12ರ ಸಂಜೆ ವೇಳೆ ಬಹುತೇಕರು ಗಂಗಾವತಿ, ಹುಲಗಿ ತಲುಪಲಿದ್ದಾರೆ. ಈ ಹಿನ್ನೆಲೆ ಕೊಪ್ಪಳ ಜಿಲ್ಲಾಡಳಿತ ಎಲ್ಲ ಸಿದ್ಧತೆ ಕೈಗೊಂಡಿದೆ. ಎಡಿಸಿ ಸಿದ್ದರಾಮೇಶ್ವ ಮತ್ತು ಎಸಿ ಕ್ಯಾ.ಮಹೇಶ ಮಾಲಗಿತ್ತಿ ಖುದ್ದು ಭೇಟಿ ನೀಡಿ, ಸಿದ್ಧತೆ ಪರಿಶೀಲನೆ ಮಾಡುತ್ತಿದ್ದಾರೆ. ವ್ಯವಸ್ಥೆಯಲ್ಲಿ ಯಾವುದೇ ರೀತಿಯಲ್ಲಿ ನಿರ್ಲಕ್ಷ್ಯ ಕಾಣಬಾರದು ಎನ್ನುವ ಉದ್ದೇಶದಿಂದ ಜಿಲ್ಲಾಧಿಕಾರಿ 14 ಸಮಿತಿ ರಚನೆ ಮಾಡಿ, ಅಧಿಕಾರಿಗಳಿಗೆ ನಿರ್ವಹಣೆಯ ಹೊಣೆ ನೀಡಲಾಗಿದೆ.

ರಸ್ತೆ ಮತ್ತು ಪಾರ್ಕಿಂಗ್ ಸ್ಥಳಗಳ ಸ್ವಚ್ಛತೆ, ಪಾದಚಾರಿ ಮಾರ್ಗದ ನಿರ್ಮಾಣ, ಭಕ್ತರಿಗೆ ಕುಡಿಯುವ ಮತ್ತು ಸ್ನಾನದ ನೀರಿಗೆ ವ್ಯವಸ್ಥೆ ಮಾಡಲಾಗಿದೆ. ನೂರಾರು ನೀರಿನ ಟ್ಯಾಪ್ ಅಳವಡಿಸಲಾಗುತ್ತಿದೆ. ಅಂಜನಾದ್ರಿಗೆ ಬರುವ ಭಕ್ತರಿಗೆ ಪ್ರಸಾದ ವಿತರಣೆಗೂ ವ್ಯವಸ್ಥೆ ಮಾಡಲಾಗಿದೆ. ಬೆಟ್ಟದ ಹಿಂಭಾಗದ ವೇದಪಾಠ ಶಾಲೆ ಸಮೀಪದ ಕೋಣೆಯಲ್ಲಿ ಸಾವಿರಾರು ಲಾಡುಗಳು ಪ್ರಸಾದಕ್ಕೆ ಸಿದ್ಧಗೊಳುತ್ತಿವೆ. ಉಪಹಾರ, ಊಟದ ಜೊತೆಗೆ ಪ್ರಾಥಮಿಕ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ. ಭಕ್ತರ ಅನುಕೂಲಕ್ಕೆ ಸಹಾಯವಾಣಿ ತೆರೆಯಲಾಗಿದೆ.

**ಪಾರ್ಕಿಂಗ್ ವ್ಯವಸ್ಥೆ:** ರಾಜ್ಯದ ನಾನಾ ಭಾಗದಿಂದ ಲಕ್ಷಕ್ಕೂ ಹೆಚ್ಚು ಮಾಲಾಧಾರಿಗಳು ಬರುವ ನಿರೀಕ್ಷೆ ಹಿನ್ನೆಲೆ ಸುಗಮ ಸಂಚಾರಕ್ಕೆ ಸುಮಾರು 20 ಕಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಆನೆಗೊಂದಿ, ಉತ್ಸವ ಬಯಲು, ಚಿಕ್ಕರಾಂಪೂರ, ಕಡೆಬಾಗಿಲು, ಹನುಮನಹಳ್ಳಿ, ಆನೆಗೊಂದಿ ಗ್ರಾಮ ಜಮೀನು ಸೇರಿ 20 ಕಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಬಾಗಲಕೋಟೆ, ಹುಬ್ಬಳ್ಳಿ, ಗದಗ, ಬೆಳಗಾವಿ ಭಾಗಗಳಿಂದ ಬೂದಗುಂಪ ಸರ್ಕಲ್, ಕೊಪ್ಪಳ ಮಾರ್ಗವಾಗಿ ಬರುವ ಮಾಲಾಧಾರಿಗಳು ಕಮಾಲಾಪೂರ, ಬುಕ್ಕಸಾಗರ, ಕಡೆಬಾಗಿಲು ಮಾರ್ಗವಾಗಿ ಬರಬೇಕು. ಕುಲಬುರ್ಗಿ, ಯಾದಗಿರಿ, ರಾಯಚೂರು ಜಿಲ್ಲೆಗಳಿಂದ ಸಿಂಧನೂರ, ಮಸ್ಕಿ, ಕನಕಗಿರಿ ಮಾರ್ಗವಾಗಿ ಬರುವ ಮಾಲಾಧಾರಿಗಳು ಗಂಗಾವತಿ ಕಡೆಯಿಂದ ಆನೆಗೊಂದಿಗೆ ತೆರಳಬೇಕು. ಹಿಟ್ನಾಳ ಸರ್ಕಲ್‌ನಿಂದ ಬಂಡಿ ಹರ್ಲಾಪೂರ, ಸಣಾಪೂರ ಗ್ರಾಮಗಳಲ್ಲಿ ರಸ್ತೆ ಕಾಮಗಾರಿ ಹಿನ್ನೆಲೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ.

**ಜಲಾಭಿಷೇಕ, ಧಾರ್ಮಿಕ ಕಾರ್ಯಕ್ರಮ!:** ಅಂಜನಾದ್ರಿ ಬೆಟ್ಟದಲ್ಲಿನ ಹನುಮ ಜನ್ಮಸ್ಥಳದಲ್ಲಿ ಡಿ.13 ರಂದು ಬೆಟ್ಟದ ಮೇಲಿನ ಹನುಮನ ಮೂರ್ತಿಗೆ 9 ನದಿ ನೀರಿನ ಜಲಾಭಿಷೇಕ ಕಾರ್ಯಕ್ರಮ ನಡೆಯಲಿದೆ. ಪ್ರತಿ ವರ್ಷ ಚಾತುರ್ಮಾಸದಲ್ಲಿ ಹನುಮ ಭಕ್ತರು ಮಾಲೆ ಧಾರಣೆ ಮಾಡಿ, ವ್ರತ ಕೈಗೊಳ್ಳುತ್ತಾರೆ. ವ್ರತದ ಕೊನೆ ದಿನ ಅಂದರೆ ಡಿ.13 ರಂದು ಮಾಲಾಧಾರಿಗಳು ಅಂಜನಾದ್ರಿ ಬೆಟ್ಟಕ್ಕೆ ಆಗಮಿಸಿ, ವಿಸರ್ಜನೆ ಮಾಡುತ್ತಾರೆ. ಈ ಚಾತುರ್ಮಾಸದಲ್ಲೇ ರಾಮ ಹಾಗೂ ಹನುಮಂತ ತಪಸ್ಸು ಕಳಿತಿದ್ದರು ಎಂಬ ನಂಬಿಕೆ ಇದೆ.

ಈ ಹಿನ್ನೆಲೆ ಡಿ.13 ರಂದು ಅಂಜನಾದ್ರಿ ಬೆಟ್ಟ ಹನುಮನ ಮೂರ್ತಿಗೆ ಪಂಚಾಮೃತ ಅಭಿಷೇಕ, 9 ನದಿಗಳ ನೀರಿನ ಜಲಾಭಿಷೇಕ, ಸಹಸ್ರನಾಮ ಪಠಣ, ಕುಂಕುಮಾರ್ಚನೆ, ಮಹಾಮಂಗಳಾರತಿ, ಪವನ ಹೋಮ, ಶ್ರೀರಾಮನಾಮ ಪಠಣ, ಮಾಲೆ ಧರಿಸಿದ ಗುರುಗಳಿಂದ ಹನುಮಮಾಲೆ ವಿಸರ್ಜನೆ ಸೇರಿದಂತೆ ನಾನಾ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ಜರುಗಲಿವೆ.

**ಶೋಭಾಯಾತ್ರೆ:** ಭಜರಂಗದಳ, ವಿಶ್ವ ಹಿಂದೂ ಪರಿಷತ್ ಸಂಘಟನೆಯಿಂದ ಶೋಭಾಯಾತ್ರೆ ಹಾಗೂ ಧಾರ್ಮಿಕ ಸಭೆ ನಡೆಯಲಿದೆ. ಡಿ.12 ರಂದು ಗಂಗಾವತಿ ನಗರಕ್ಕೆ ಬರುವ ಭಕ್ತರು ನಗರದಲ್ಲಿ ಶೋಭಾಯಾತ್ರೆ ಮೂಲಕ ಬೆಟ್ಟಕ್ಕೆ ತೆರಳಲಿದ್ದಾರೆ. ಬೆಟ್ಟಕ್ಕೆ ಬರುವ ಭಕ್ತರಿಗೆ ಪ್ರಸಾದ್ ರೂಪದಲ್ಲಿ ನೀಡಲು 50 ಸಾವಿರ ಲಾಡು, ತೀರ್ಥ ಬಾಟಲಿಗಳನ್ನು ಸಿದ್ಧ ಪಡಿಸಲಾಗುತ್ತಿದೆ.





# ವೈಯಕ್ತಿಕ ದ್ವೇಷದ ಶಂಕೆ : ರೌಡಿಶೀಟರ್ ಬರ್ಬರ ಹತ್ಯೆ

**ಕಲಬುರಗಿ:** ಅಪರಿಚಿತ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ರೌಡಿಶೀಟರ್‌ನನ್ನ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಕಲಬುರಗಿ ನಗರದ ಹೊರವಲಯದ ಮಾಲಗತ್ತಿ ಕ್ರಾಸ್ ಬಳಿ ನಡೆದಿದೆ.

ಖಲೀಲ್ ಅಹಮದ್ (38) ಹತ್ಯೆಗೀಡಾದ ರೌಡಿಶೀಟರ್. ವೈಕ್ತಿಯ ದ್ವೇಷದ ಹಿನ್ನೆಲೆ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಮೋಸ್ಟ್ ವಾಂಟೆಡ್ ಆಗಿದ್ದ ಖಲೀಲ್, ಹಲವು ವರ್ಷಗಳಿಂದ ಪೊಲೀಸರಿಗೆ ಬೇಕಾಗಿದ್ದ ಎನ್ನಲಾಗಿದೆ.

ಇನ್ನೂ ಖಲೀಲ್ ಸ್ನೇಹಿತ ಅಲಿಲ್ ಪಟೇಲ್ ಮೇಲೂ ಹಲ್ಲೆ ನಡೆದಿದ್ದು, ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕಲಬುರಗಿ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com